23 July 2026 Thursday
SINCE 1957
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ
ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಎಲ್ಲ ಒಳ್ಳೆಯ ಕೆಲಸವನ್ನೂ ನಾವು ದೇವರಲ್ಲಿ ಸಂಪೂರ್ಣ ನಂಬಿಕೆ ಇಟ್ಟು ಮಾಡಿದರೆ, ದೇವರ ದಯೆ ಇದ್ದೇ ಇರುತ್ತದೆ!

▸▸ ಸ್ನೇಹಾ ಆನಂದ್

info.varthaman@gmail.com



ಸಮನ್ವಯ, ಸಂಪನ್ಮೂಲಗಳ ಸಮರ್ಪಕ ಬಳಕೆಗೆ ಆದ್ಯತೆ: ಮನೋಜ್ ಕುಮಾರ್ — ಪುಟ ಸಂ. 4



ವ್ಯಾಜ್ಯ ವಿವಾದಗಳ ಪರಿಹಾರಕ್ಕೆ ಮಧ್ಯಸ್ಥಿಕೆ ಉತ್ತಮ ಮಾರ್ಗವಾಗಿದೆ — ಪುಟ ಸಂ. 3



ಕೆ.ಜಿ.ಕೊಪ್ಪಲಿನಲ್ಲಿ ಶಾಸಕ ಕೆ. ಹರೀಶ್ ಗೌಡ ಪಾದಯಾತ್ರೆ — ಪುಟ ಸಂ. 2

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು | ಗ್ರಾಮಾಂತರ ಕೊಡಗು | ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್
VARTHAMAN | Volume: 69 | Issue: 233 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

## ಜಾನಕಿ ಸ್ಮಾರಕ ನಿರ್ಮಾಣ

**2ರಿಂದ 3 ಕೋಟಿ ವೆಚ್ಚ: ಸಾರಾ ಮಹೇಶ್ ಘೋಷಣೆ**

**ಮೈಸೂರು:** ಖ್ಯಾತ ಗಾಯಕಿ ಎಸ್.ಜಾನಕಿ ಅಂತ್ಯಕ್ರಿಯೆ ನಡೆದ ಕಣಿಯನ ಹುಂಡಿಯ ಜಮೀನಿನಲ್ಲಿ ಎಸ್.ಜಾನಕಿ ಚಾರಿಟಬಲ್ ಟ್ರಸ್ಟ್ ವತಿಯಿಂದ 2ರಿಂದ 3 ಕೋಟಿ ವೆಚ್ಚದಲ್ಲಿ ಸ್ಮಾರಕ ನಿರ್ಮಾಣ ಮಾಡುತ್ತೇವೆ ಎಂದು ಜೆಡಿಎಸ್ ಕಾರ್ಯಾಧ್ಯಕ್ಷ ಸಾರಾ ಮಹೇಶ್ ಘೋಷಿಸಿದರು.




ಎಸ್.ಜಾನಕಿ 12ನೇ ದಿನದ ಪುಣ್ಯಸ್ಮರಣೆ ಕಾರ್ಯಕ್ರಮದ ಅಂಗವಾಗಿ ಆಯೋಜಿಸಿದ್ದ ಜಾನಕಿ ನಮನ ಕಾರ್ಯಕ್ರಮದಲ್ಲಿ ಮಾತನಾಡಿ, ಜಮೀನಿನ ಮಾಲೀಕರಾದ ನವೀನ್ ಅವರು 20 ಗುಂಟೆ ಜಾಗವನ್ನು ಉಚಿತವಾಗಿ ಟ್ರಸ್ಟ್‌ಗೆ ನೀಡಲು ಒಪ್ಪಿದ್ದಾರೆ. ಕೇಂದ್ರ ಸಚಿವ ಕುಮಾರಸ್ವಾಮಿ ಅವರು ನೀಲಿ ನಕ್ಷೆ ತಯಾರಿಸಲು ಹೇಳಿದ್ದಾರೆ ಎಂದು ಹೇಳಿದರು.

ಸಂಗೀತ ನಿರ್ದೇಶಕ ಹಂಸಲೇಖ ಮಾತನಾಡಿ, ಎಸ್.ಜಾನಕಿ ಅವರ ಅಂತ್ಯಕ್ರಿಯೆ ನಡೆದ ಸ್ಥಳದಲ್ಲಿ ಜಾನಕಿ ಧ್ಯಾನ ಮಂದಿರ, ಪುಟ 2ಕ್ಕೆ

## 'ಕಾಕ್ರೋಚ್' ಅರ್ಜಿ: ತುರ್ತು ವಿಚಾರಣೆಗೆ ಸುಪ್ರೀಂ ನಕಾರ

**ನವದೆಹಲಿ:** ನೀಟ್ ಅಕ್ರಮಕ್ಕೆ ಸಂಬಂಧಿಸಿದಂತೆ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಒತ್ತಾಯಿಸಿ ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ದೆಹಲಿಯಲ್ಲಿ ನಡೆಸಿದ ಪ್ರತಿಭಟನೆ ವೇಳೆ ವಿದ್ಯಾರ್ಥಿಗಳ ಮೇಲೆ ಪೊಲೀಸರು ನಡೆಸಿದ ಲಾಠಿಚಾರ್ಜ್ ಪ್ರಶ್ನಿಸಿ ಸಲ್ಲಿಸಲಾದ ಅರ್ಜಿ ತುರ್ತು ವಿಚಾರಣೆಗೆ ಸುಪ್ರೀಂ ಕೋರ್ಟ್ ಬುಧವಾರ ನಿರಾಕರಿಸಿದೆ.



ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಮತ್ತು ನ್ಯಾಯಮೂರ್ತಿಗಳಾದ ಜೋಯ್ಮಲ್ಯ ಬಾಗ್ಚಿ ಮತ್ತು ವಿ.ಮೋಹನ ಅವರ ಪೀಠದ ಮುಂದೆ ಈ ವಿಷಯವನ್ನು ಪ್ರಸ್ತಾಪಿಸಲಾಯಿತು. ಪೊಲೀಸ್ ದೌರ್ಜನ್ಯಕ್ಕೆ ಸಂಬಂಧಿಸಿದ ವಿಡಿಯೋಗಳು ನಮ್ಮ ಪುಟ 2ಕ್ಕೆ

## ಕೇಂದ್ರದ ನಡೆ ಕ್ರೌರ್ಯ: ದಿನೇಶ್

**ಚಿಕ್ಕಮಗಳೂರು:** ನವದೆಹಲಿಯ ಜಂತರ್ ಮಂತರ್‌ನಲ್ಲಿ ಕೇಂದ್ರ ಸರ್ಕಾರ ನಡೆದುಕೊಂಡ ರೀತಿ ದರ್ಪ ಮತ್ತು ಕ್ರೌರ್ಯದಿಂದ ಕೂಡಿದೆ ಎಂದು ಶಾಸಕ ದಿನೇಶ್ ಗುಂಡೂರಾವ್ ಕಿಡಿಕಾರಿದರು.



ಯಾರೂ ನಮ್ಮನ್ನು ಪ್ರಶ್ನಿಸಬಾರದು ಎಂಬ ಸರ್ವಾಧಿಕಾರಿ ಧೋರಣೆಯನ್ನು ಕೇಂದ್ರ ಸರ್ಕಾರ ಅನುಸರಿಸುತ್ತಿದೆ. ಅವರ ವಿರುದ್ಧ ಮಾತನಾಡಿದವರಿಗೆ ತೊಂದರೆ ನೀಡುವುದು, ದೇಶದ್ರೋಹಿ ಪಟ್ಟಕಟ್ಟುವುದು ಅವರ ಕೆಲಸ. ಜನರ ಮಾತನ್ನು ಕೇಳದಿರುವ ಪರಿಸ್ಥಿತಿಗೆ ಕೇಂದ್ರ ಸರ್ಕಾರ ಹೋಗಿದೆ. ಅಧಿಕಾರಕ್ಕೆ ಬಂದ ದಿನದಿಂದಲೂ ಪ್ರಜಾಪ್ರಭುತ್ವದ ವಿರುದ್ಧವಾಗಿ ನಡೆದುಕೊಳ್ಳುತ್ತಿದೆ ಎಂದು ಸುದ್ದಿಗಾರರಿಗೆ ಬುಧವಾರ ಪ್ರತಿಕ್ರಿಯಿಸಿದರು.

ಶಾಂತಿಯುತ ಪ್ರತಿಭಟನೆ ನಡೆಸುತ್ತಿದ್ದ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ದೆಹಲಿ ಪೊಲೀಸರು ಅಮಾನವೀಯವಾಗಿ ನಡೆದುಕೊಂಡಿದ್ದಾರೆ. ಕೇಂದ್ರ ಸರ್ಕಾರದ ದರ್ಪ ಪುಟ 2ಕ್ಕೆ

## ತುಮಕೂರಿನಲ್ಲಿ ವಿಮಾನ ನಿಲ್ದಾಣ: ಪರಂ ಬೆಂಬಲ

**ಬೆಂಗಳೂರು:** ಬೆಂಗಳೂರು ಸಮೀಪ ಎರಡನೇ ವಿಮಾನ ನಿಲ್ದಾಣ ನಿರ್ಮಿಸುವ ಬದಲಾಗಿ ತುಮಕೂರು ಜಿಲ್ಲೆಯ ಶಿರಾದಲ್ಲಿ ಸ್ಥಾಪಿಸಬೇಕು ಎಂಬ ಕೇಂದ್ರ ಸಚಿವ ವಿ.ಸೋಮಣ್ಣ ನಿಲುವಿಗೆ ಡಿಸಿಎಂ ಡಾ.ಜಿ.ಪರಮೇಶ್ವರ್ ಬೆಂಬಲ ವ್ಯಕ್ತಪಡಿಸಿದ್ದಾರೆ.



ತುಮಕೂರು 20 ಜಿಲ್ಲೆಗಳ ಹೆಬ್ಬಾಗಿಲು, ಇಲ್ಲಿ ವಿಮಾನ ನಿಲ್ದಾಣ ನಿರ್ಮಿಸಿದರೆ ಎಲ್ಲರಿಗೂ ಅನುಕೂಲವಾಗುತ್ತದೆ. ತುಮಕೂರಿನಲ್ಲಿ ಅಂತಾರಾಷ್ಟ್ರೀಯ ಏರ್‌ಪೋರ್ಟ್ ನಿರ್ಮಿಸಿ ಎಂದು ಕಳೆದ 25 ವರ್ಷಗಳಿಂದ ಹೇಳುತ್ತಿದ್ದೇನೆ. ಆಮೇಲೆ ಬಿಡಿದಿ ಸೇರಿದಂತೆ ಪುಟ 2ಕ್ಕೆ

## 152 ಪ್ರಶ್ನೆ ಪತ್ರಿಕೆ ಸೋರಿಕೆ

**ವಿದ್ಯಾರ್ಥಿಗಳಿಗೆ ಕೇಂದ್ರದಿಂದ ಮಹಾವಂಚನೆ: ರಾಹುಲ್ ಆರೋಪ**

**ನವದೆಹಲಿ:** ದೇಶದ ಶಿಕ್ಷಣ ವ್ಯವಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಮಹಾ ವಂಚನೆಯಾಗಿದೆ. ಒಂದು ದಶಕದಲ್ಲಿ 152 ಪ್ರಶ್ನೆ ಪತ್ರಿಕೆಗಳು ಸೋರಿಕೆಯಾಗಿವೆ ಎಂದು ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಹೊಸ ಬಾಂಬ್ ಸಿಡಿಸಿದ್ದಾರೆ.

ದೆಹಲಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 10 ವರ್ಷಗಳಲ್ಲಿ ದೇಶಾದ್ಯಂತ ನಡೆದಿರುವ 152 ಪರೀಕ್ಷಾ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳಿಂದ ಸುಮಾರು 7.5 ಕೋಟಿ ವಿದ್ಯಾರ್ಥಿಗಳು ಮತ್ತು ಅವರ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ. ಶಿಕ್ಷಣ ವ್ಯವಸ್ಥೆಯಲ್ಲಿ ಭಾರೀ ವಂಚನೆಯಾಗಿದೆ. ಆದರೆ ಈವರೆಗೆ ಯಾರೊಬ್ಬರಿಗೂ ಯಾವುದೇ ಶಿಕ್ಷೆ ಆಗಿಲ್ಲ ಎಂದು ಆರೋಪಿಸಿದರು.



ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ ವಿರೋಧಿಸಿ ಪ್ರತಿಭಟನಾನಿರತ ವಿದ್ಯಾರ್ಥಿಗಳ ಮೇಲೆ ನಡೆದಿರುವ ಪೊಲೀಸ್ ಕ್ರಮ ಖಂಡಿಸಿದರು. ವಿದ್ಯಾರ್ಥಿಗಳ ಹಿತಾಸಕ್ತಿ ರಕ್ಷಿಸುವಲ್ಲಿ ಕೇಂದ್ರ ಸರ್ಕಾರ ಸಂಪೂರ್ಣ ವಿಫಲವಾಗಿದೆ. ವಿದ್ಯಾರ್ಥಿಗಳು ಏನು ತಪ್ಪು ಮಾಡಿದ್ದಾರೆ? ಭದ್ರತಾ ಸಿಬ್ಬಂದಿ ಅವರತ್ತ ಏಕೆ ಶಸ್ತ್ರಾಸ್ತ್ರ ಬೀಸಿದ್ದಾರೆ? ಅವರು ನ್ಯಾಯಯುತ ಹಾಗೂ ಪಾರದರ್ಶಕ ಶಿಕ್ಷಣ ವ್ಯವಸ್ಥೆಯನ್ನ ಮಾತ್ರ ಕೇಳುತ್ತಿದ್ದಾರೆ. ಅದು ದೇಶವು ಅವರಿಗೆ ನೀಡಬೇಕಾದ ಹಕ್ಕು ಎಂದು ಪ್ರತಿಪಾದಿಸಿದ್ದಾರೆ.

ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳಿಗೆಗಾಗಿ ವರ್ಷಗಟ್ಟಲೆ ಕಠಿಣ ಪರಿಶ್ರಮ ಪಡುತ್ತಾರೆ. ಆದರೆ ಪರೀಕ್ಷೆಯ ಕೊನೇ ಕ್ಷಣದಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ ಎಂಬ ಸುದ್ದಿ ಕೇಳಬೇಕಾಗುತ್ತದೆ. ಇಂತಹ ನಿರಂತರ ಅಕ್ರಮಗಳಿಂದ ವಿದ್ಯಾರ್ಥಿಗಳು ತೀವ್ರ ಮಾನಸಿಕ ಒತ್ತಡಕ್ಕೆ ಒಳಗಾಗುತ್ತಿದ್ದಾರೆ. ಕೆಲವು ವಿದ್ಯಾರ್ಥಿಗಳು ಆತ್ಮಹತ್ಯೆಗೂ ಶರಣಾಗಿದ್ದಾರೆ. ಆದರೂ ದೇಶದ ಶಿಕ್ಷಣ ವ್ಯವಸ್ಥೆಯ ಈ ಗಂಭೀರ ಸಮಸ್ಯೆ ಪರಿಹರಿಸಲು ಕೇಂದ್ರ ಸರ್ಕಾರ ವಿಫಲವಾಗಿದೆ ಎಂದು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಚೆನ್ನಮ್ಮಗೆ ಪ್ರಜ್ವಲ್ ನೋಡುವ ಆಸೆ ಇತ್ತು



**ಹಾಸನ:** ಚೆನ್ನಮ್ಮ ಅವರು ತಮ್ಮ ಕೊನೆಯ ದಿನಗಳಲ್ಲಿ ಪ್ರಜ್ವಲ್ ರೇವಣ್ಣ ಅವರನ್ನ ನೋಡಬೇಕೆಂಬ ಆಸೆ ಇಟ್ಟುಕೊಂಡಿದ್ದರು ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಭಾವುಕರಾದರು.

ಹೊಳೆನರಸೀಪುರ ತಾಲ್ಲೂಕಿನ ಹರದನಹಳ್ಳಿ ಗ್ರಾಮದಲ್ಲಿ ಮಾತನಾಡಿದ ಅವರು, ಚೆನ್ನಮ್ಮ ಬಹುಶಃ ಇನ್ನೂ 3–4 ಪುಟ 2ಕ್ಕೆ

# ಸಂಪುಟ ವಿಸ್ತರಣೆಗೆ 'ಗ್ರಹಣ'

## ಇನ್ನೂ ಒಂದು ವಾರ ಮುಂದೂಡಿಕೆ | 3 ಡಿಸಿಎಂ ಸೇರ್ಪಡೆಗೆ ಡಿ.ಕೆ.ಶಿವಕುಮಾರ್ ಪಟ್ಟು

**ಬೆಂಗಳೂರು:** ರಾಜ್ಯ ಸಚಿವ ಸಂಪುಟ ವಿಸ್ತರಣೆ ಚಟುವಟಿಕೆ ಸದ್ಯಕ್ಕೆ ನನೆಗುದಿಗೆ ಬಿದ್ದಿದೆ. ನೀಟ್ ಹೋರಾಟದಲ್ಲಿ ಕಾಂಗ್ರೆಸ್ ಹೈಕಮಾಂಡ್ ಭಾಗಿ ಆಗಿರುವುದರಿಂದ ಸದ್ಯಕ್ಕೆ ಸಂಪುಟ ವಿಸ್ತರಣೆ ಚರ್ಚೆ ನಡೆಯುವ ಸಾಧ್ಯತೆ ಇಲ್ಲ. ಕನಿಷ್ಠ ಇನ್ನೂ ಒಂದು ವಾರ ಮುಂದಕ್ಕೆ ಹೋಗುವ ಸಾಧ್ಯತೆ ಇದೆ.

ಆದರೆ, ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೈಕಮಾಂಡ್ ಜೊತೆ ರಾಜಕೀಯ ದಾಳ ಉರುಳಿಸಲು ಸಜ್ಜಾಗಿದ್ದಾರೆ. ಪಕ್ಷದ ಒಳಗಿನ ಭಿನ್ನಮತ ಶಮನ ಹಾಗೂ ಭವಿಷ್ಯದ ರಾಜಕೀಯ ಲೆಕ್ಕಾಚಾರಗಳನ್ನು ಗಮನದಲ್ಲಿಟ್ಟುಕೊಂಡು ಡಿಕೆಶಿ ಸಿದ್ಧಪಡಿಸಿರುವ ಮಾಸ್ಟರ್ ಪ್ಲಾನ್ ಈಗ ಕೈ ಪಾಳಯದಲ್ಲಿ ಭಾರಿ ಸಂಚಲನ ಮೂಡಿಸಿದೆ.



ಸಂಪುಟ ವಿಸ್ತರಣೆಯ ಜೊತೆಗೆ ರಾಜ್ಯದಲ್ಲಿ 3 ನೂತನ ಉಪ ಮುಖ್ಯಮಂತ್ರಿ ಹುದ್ದೆಗಳನ್ನು ಸೃಷ್ಟಿಸುವ ಪ್ರಪೋಸಲ್ ಅನ್ನು ಹೈಕಮಾಂಡ್ ಮುಂದೆ ಡಿಕೆಶಿ ಇಟ್ಟಿದ್ದಾರೆ ಎನ್ನಲಾಗಿದೆ. ಲಿಂಗಾಯತ ಸಮುದಾಯಕ್ಕೆ ಒಂದು ಹಾಗೂ ಹಿಂದುಳಿದ ವರ್ಗಗಳ ನಾಯಕರಿಗೆ ಮತ್ತೊಂದು ಡಿಸಿಎಂ ಸ್ಥಾನ ನೀಡುವ ಮೂಲಕ ಜಾತಿ ಆಧಾರಿತ ಸಮತೋಲನ ಕಾಯ್ದುಕೊಳ್ಳಲು ಹೈಕಮಾಂಡ್ ಮನವೊಲಿಸಲು ಡಿಕೆಶಿ ಮುಂದಾಗಿದ್ದಾರೆ ಎನ್ನಲಾಗಿದೆ.

ಈ ಮೂಲಕ ಡಿಸಿಎಂ ಕೇಂದ್ರಿತ ರಾಜಕೀಯ ತಪ್ಪಿಸುವುದು. ನಾಯಕತ್ವ ಪೈಪೋಟಿ ನಿಯಂತ್ರಿಸುವುದು ಮತ್ತು ಪ್ರಮುಖ ಸಮುದಾಯಗಳನ್ನು ಒಲಿಸಿಕೊಂಡು ಮುಂದಿನ ಚುನಾವಣೆ ದೃಷ್ಟಿಯಿಂದ ಪಕ್ಷದ ನೆಲೆ ಗಟ್ಟಿ ಮಾಡಿಕೊಳ್ಳುವ ಜೊತೆಗೆ ತಮ್ಮ ನಂತರದ ಉತ್ತರಾಧಿಕಾರತ್ವದ ರೇಸ್‌ನಲ್ಲಿರುವ ನಾಯಕರನ್ನು ಡಿಸಿಎಂ ಹುದ್ದೆಗಳ ಮೂಲಕ ಸರಿದೂಗಿಸಿ, ನಾಯಕತ್ವದ ಸಂಘರ್ಷಕ್ಕೆ ಕೊನೆ ಹಾಡಲು ಮುಂದಾಗಿದ್ದಾರೆ ಎಂದು ತಿಳಿದು ಬಂದಿದೆ.

ಸಿದ್ದರಾಮಯ್ಯ ಬೆಂಬಲಿಗರಾಗಿದ್ದ ತಮ್ಮ ವಿರುದ್ಧ ಬ್ಯಾಟಿಂಗ್ ಮಾಡುತ್ತಿದ್ದ ನಾಯಕರನ್ನೇ ಈಗ ತಮ್ಮತ್ತ ಸೆಳೆದುಕೊಳ್ಳುವ ತಂತ್ರಕ್ಕೆ ಡಿಕೆಶಿ ಕೈಹಾಕಿದ್ದಾರೆ. ಸಿದ್ದರಾಮಯ್ಯ ಆಪ್ತ ವಲಯದಲ್ಲಿ ಗುರುತಿಸಿಕೊಂಡಿದ್ದ ಸಚಿವ ಕೆ.ಎನ್.ರಾಜಣ್ಣ ಹಾಗೂ ಜಮೀರ್ ಅಹ್ಮದ್ ಖಾನ್ ಅವರ ವಿಷಯದಲ್ಲಿ ಡಿಕೆಶಿ ಸಕಾರಾತ್ಮಕ ಧೋರಣೆ ತಳೆದಿದ್ದಾರೆ. ಹೈಕಮಾಂಡ್ ಮಟ್ಟದಲ್ಲಿ ಅವರ ಪರ ಬ್ಯಾಟಿಂಗ್ ಮಾಡಿದ್ದಾರೆ ಎನ್ನಲಾಗುತ್ತಿದೆ.

ಮೊದಲ ಬಾರಿಗೆ ಶಾಸಕರಾಗಿ ಆಯ್ಕೆಯಾದ ಇಬ್ಬರಿಗೆ ಸಚಿವ ಸ್ಥಾನ ನೀಡುವ ಸಾಧ್ಯತೆಯಿದೆ. 2 ರಿಂದ 3 ಬಾರಿ ಗೆದ್ದಿರುವ ಅನುಭವಿ ಶಾಸಕರಿಗೂ ಸಂಪುಟದಲ್ಲಿ ಪ್ರಾತಿನಿಧ್ಯ ಸಿಗಲಿದೆ. ಪ್ರಾದೇಶಿಕ ಹಾಗೂ ಸಾಮಾಜಿಕ ಸಮೀಕರಣ ಸರಿದೂಗಿಸಲು ಇಬ್ಬರು ಶಾಸಕಿಯರಿಗೆ ಮಂತ್ರಿಗಿರಿ ಸಿಗುವ ಸಾಧ್ಯತೆಯಿದೆ.

ಸಿಎಂ ಡಿ.ಕೆ. ಶಿವಕುಮಾರ್ ಅವರ ಈ ಹೊಸ ಮಾಸ್ಟರ್‌ಪ್ಲಾನ್ ಕೇವಲ ಸಂಪುಟ ವಿಸ್ತರಣೆಗೆ ಸೀಮಿತವಾಗಿಲ್ಲ. ಇದು ತಮ್ಮ ಅಧಿಕಾರದ ಅವಧಿಯನ್ನು ಸುಗಮಗೊಳಿಸಿಕೊಳ್ಳುವ ಮತ್ತು ಭವಿಷ್ಯದ 7 ವರ್ಷಗಳ ಸುದೀರ್ಘ ರಾಜಕೀಯ ಭವಿಷ್ಯವನ್ನು ಗಟ್ಟಿಮಾಡಿಕೊಳ್ಳುವ ತಂತ್ರ ಎಂಬ ವಿಶ್ಲೇಷಣೆ ಕೇಳಿ ಬಂದಿದೆ.

## ಸೌಜನ್ಯ ಪ್ರಕರಣ ಮರು ತನಿಖೆ: ಆದೇಶ ಕಾಯ್ದಿರಿಸಿದ 'ಸುಪ್ರೀಂ'

**ನವದೆಹಲಿ:** ಧರ್ಮಸ್ಥಳದ ಸೌಜನ್ಯ ಅತ್ಯಾಚಾರ ಕೊಲೆ ಪ್ರಕರಣದ ಮರು ತನಿಖೆ ಬಗ್ಗೆ ಸುಪ್ರೀಂ ಕೋರ್ಟ್ ಆದೇಶ ಕಾಯ್ದಿರಿಸಿದೆ.

ಸೌಜನ್ಯ ತಾಯಿ ಕುಸುಮವತಿಗೌಡ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ನ್ಯಾ. ಸಂಜಯ್ ಕುಮಾರ್ ನೇತೃತ್ವದ ದ್ವಿಸದಸ್ಯ ಪೀಠ ನಡೆಸಿತು. ವಿಚಾರಣೆ ವೇಳೆ ಸಿಬಿಐ ಅನ್ನು ತರಾಟೆಗೆ ತೆಗೆದುಕೊಂಡ ಕೋರ್ಟ್, ತನಿಖಾಧಿಕಾರಿ ಘಟನಾ ಸ್ಥಳಕ್ಕೆ ಯಾಕೆ ಹೋಗಿಲ್ಲ ಎಂದು ಪ್ರಶ್ನಿಸಿತು.


14 ವರ್ಷ ಆದರೂ ಸರಿಯಾದ ತನಿಖೆಯಾಗಿಲ್ಲ. ಸಾಕ್ಷ್ಯಗಳಿಗೆ ಪುಟ 2ಕ್ಕೆ

## ಕುಡಿಯಲು ಮಾತ್ರ ಕಾವೇರಿ: ಕರ್ನಾಟಕಕ್ಕೆ ಬಿಗ್ ರಿಲೀಫ್

**ನವದೆಹಲಿ:** ಎಲ್ಲೆಡೆ ಬರದ ಛಾಯೆ ಆವರಿಸಿದೆ. ಹೀಗಾಗಿ, ಕಾವೇರಿ ನೀರನ್ನು ಕುಡಿಯುವ ಉದ್ದೇಶಕ್ಕೆ ಮಾತ್ರವೇ ಬಳಸಿಕೊಳ್ಳಬೇಕು ಎಂದು ಕರ್ನಾಟಕ ಮತ್ತು ತಮಿಳನಾಡಿಗೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಬುಧವಾರ ನಿರ್ದೇಶನ ನೀಡಿದೆ.

ನವದೆಹಲಿಯಲ್ಲಿ ಬುಧವಾರ ಎಸ್.ಕೆ. ಹಲ್ದಾರ್ ನೇತೃತ್ವದಲ್ಲಿ ಸಭೆ ನಡೆದಿದೆ. ಕುಡಿಯುವ ನೀರಿನ ಕೊರತೆ ಎದುರಾಗುವುದನ್ನು ತಪ್ಪಿಸುವ ಸಲುವಾಗಿ, ಕೃಷಿ ಹಾಗೂ ಇತರ ನೀರಾವರಿ ಉದ್ದೇಶಗಳಿಗೆ ಕಾವೇರಿ ನೀರನ್ನು ಬಳಸಬಾರದು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದೆ.

ಎರಡೂ ರಾಜ್ಯಗಳ ವಾದ ಆಲಿಸಿದ ಬಳಿಕ, ಇನ್ನೂ ಒಂದು ವಾರ ಪರಿಸ್ಥಿತಿಯನ್ನು ಅವಲೋಕಿಸಿ ಜುಲೈ 28ರಂದು ನಡೆಯಲಿರುವ ಕಾವೇರಿ ನೀರು ನಿಯಂತ್ರಣ ಸಮಿತಿ ಸಭೆಯಲ್ಲಿ ಮುಂದಿನ




ನಿರ್ಧಾರ ಕೈಗೊಳ್ಳಲು ತೀರ್ಮಾನಿಸಲಾಗಿದೆ.

ಸಭೆಯಲ್ಲಿ ತಮಿಳುನಾಡು ಸರ್ಕಾರ ತನ್ನ ಪಾಲಿನ ನೀರು ಸಿಗುತ್ತಿಲ್ಲ ಎಂದು ಪ್ರಬಲವಾಗಿ ವಾದ ಮಂಡಿಸಿತು. ಸುಪ್ರೀಂಕೋರ್ಟ್‌ನ 2018ರ ತೀರ್ಪಿನ ಪ್ರಕಾರ ಜೂನ್ 1ರಿಂದ ಜುಲೈ 19ರವರೆಗೆ ಬಿಳಿಗುಂಡ್ಲುವಿಗೆ 28.3 ಟಿಎಂಸಿ ನೀರು ಹರಿಯಬೇಕಿತ್ತು. ಆದರೆ, ಕೇವಲ 3.4 ಟಿಎಂಸಿ ಮಾತ್ರ ಹರಿದುಬಂದಿದೆ ಎಂದು ತಿಳಿಸಿತು.

## ಶಾಖೋತ್ಪನ್ನ ವಿದ್ಯುತ್ ಉತ್ಪಾದನೆ ಹೆಚ್ಚಳ: ಜಾರ್ಜ್

**ಬೆಂಗಳೂರು:** ರಾಜ್ಯದಲ್ಲಿ ಮಳೆ ಕೊರತೆಯಿಂದ ಜಲ ವಿದ್ಯುತ್ ಉತ್ಪಾದನೆ ಕುಂಠಿತವಾಗಿರುವ ಹಿನ್ನೆಲೆ ಶಾಖೋತ್ಪನ್ನ ಕೇಂದ್ರಗಳಲ್ಲಿ ವಿದ್ಯುತ್ ಉತ್ಪಾದನೆಯನ್ನು ಗಣನೀಯವಾಗಿ ಹೆಚ್ಚಿಸಲಾಗಿದೆ. ಜುಲೈ ತಿಂಗಳಲ್ಲಿ ಪ್ರತಿನಿತ್ಯ ಸರಾಸರಿ 84.34 ದಶಲಕ್ಷ ಯೂನಿಟ್ ಶಾಖೋತ್ಪನ್ನ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದರು.



ಜಲಾಶಗಳಲ್ಲಿ ನೀರಿನ ಪ್ರಮಾಣ ಕಡಿಮೆ ಇರುವುದರಿಂದ ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳನ್ನು ಸುಸ್ಥಿತಿಯಲ್ಲಿಟ್ಟು ಹೆಚ್ಚು ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆ. ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳಲ್ಲಿ ಉತ್ಪಾದನೆಯನ್ನು ಪ್ರತಿನಿತ್ಯ 100 ದಶಲಕ್ಷ ಯೂನಿಟ್‌ಗೆ ಹೆಚ್ಚಿಸಲು ಕ್ರಮ ವಹಿಸಲಾಗುತ್ತಿದೆ. ಬೇಡಿಕೆಗೆ ತಕ್ಕಂತೆ ವಿದ್ಯುತ್ ಉತ್ಪಾದಿಸಲು ಅಗತ್ಯ ಕ್ರಮ ವಹಿಸುವಂತೆ ಸಚಿವರು ಸೂಚಿಸಿದ್ದಾರೆ.

ಈ ಬಾರಿ ಮಳೆಗಾಲದಲ್ಲಿ ಅದರಲ್ಲೂ ಮುಖ್ಯವಾಗಿ ಜುಲೈ ತಿಂಗಳಲ್ಲಿ ರಾಜ್ಯದ ಮೂರು ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳಲ್ಲಿ ಅಗತ್ಯ ಕಲ್ಲಿದ್ದಲು ಪೂರೈಕೆ ಜೊತೆಗೆ ವಿದ್ಯುತ್ ಪುಟ 2ಕ್ಕೆ

## ಕಚ್ಚಾ ತೈಲ ಬೆಲೆ ಮತ್ತೆ ಭಾರಿ ಏರಿಕೆ

**ಲಂಡನ್:** ಮಧ್ಯಪ್ರಾಚ್ಯದ ಸಂಘರ್ಷ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಜಾಗತಿಕ ಮಾರುಕಟ್ಟೆಯಲ್ಲಿ ಕಚ್ಚಾ ತೈಲ ಬೆಲೆ ಭಾರಿ ಜಿಗಿತ ಕಂಡಿದೆ.

ಅಂತರರಾಷ್ಟ್ರೀಯ ಮಾನದಂಡವಾಗಿರುವ ಬ್ರೆಂಟ್ ಕಚ್ಚಾ ತೈಲ ಬೆಲೆ ಶೇ. 1.2 ರಷ್ಟು ಏರಿಕೆಯಾಗಿದೆ. ಪ್ರತಿ ಬ್ಯಾರಲ್‌ಗೆ 92.09 ಡಾಲರ್‌ಗೆ (8,800 ರೂ.) ತಲುಪಿದೆ. ಇದು ಜೂನ್ ತಿಂಗಳ ಬಳಿಕ ದಾಖಲಾದ ಸಾರ್ವಕಾಲಿಕ ಹೆಚ್ಚಳವಾಗಿದೆ.

ಯುಎಸ್‌ನ ಪ್ರಮುಖ ತೈಲ ಮಾನದಂಡವಾದ ವೆಸ್ಟ್ ಟೆಕ್ಸಾಸ್ ಇಂಟರ್ಮೀಡಿಯೇಟ್ (ಡಬ್ಲ್ಯೂಟಿಐ) ಬೆಲೆ ಸಹ ಶೇ. 1.1ರಷ್ಟು ಏರಿಕೆಯಾಗಿ 85.23 ಡಾಲರ್ ಗೆ ತಲುಪಿದೆ. ಯುನೈಟೆಡ್ ಸ್ಟೇಟ್ಸ್‌ನೊಂದಿಗಿನ ಯುದ್ಧ ಪುನರಾರಂಭವಾದ ನಂತರ ಇರಾನ್ ಮಂಗಳವಾರ ಮತ್ತೆ ಮಧ್ಯಪ್ರಾಚ್ಯದಲ್ಲಿ ತನ್ನ ದಾಳಿಯನ್ನು ಮತ್ತಷ್ಟು ಹೆಚ್ಚಿಸಿದೆ.

ಅಲ್ಲದೆ ಜಗತ್ತಿನ ಸುಮಾರು ಶೇ.20ರಷ್ಟು ತೈಲ ಸಾಗಣೆಯಾಗುವ ಪ್ರಮುಖ ಸಮುದ್ರ ಮಾರ್ಗವಾದ ಹಾರ್ಮುಜ್ ಜಲಸಂಧಿಯಲ್ಲಿ ಇರಾನ್ ತೈಲ ಟ್ಯಾಂಕರ್‌ಗಳನ್ನು ತಡೆದು ದಾಳಿ ನಡೆಸಿದೆ.

ಅಮೆರಿಕದ ಸೇನಾ ನೆಲೆಗಳು ಹಾಗೂ ರೇಡಾರ್ ಕೇಂದ್ರಗಳನ್ನು ಗುರಿಯಾಗಿಸಿ ಇರಾನ್, ಸರಣಿ ದಾಳಿ ನಡೆಸಿದ್ದು, ಪ್ರತಿಯಾಗಿ ಅಮೆರಿಕ ಕೂಡ ಇರಾನ್ ಆಸ್ತಿಗಳ ಮೇಲೆ ಬಾಂಬ್ ದಾಳಿ ನಡೆಸಿದೆ. ಇದರಿಂದ ಜಾಗತಿಕ ತೈಲ ಪೂರೈಕೆಯಲ್ಲಿ ಭಾರಿ ವ್ಯತ್ಯಯ ಉಂಟಾಗುವ ಭೀತಿ ಎದುರಾಗಿದೆ.

## ನೀಟ್: ಬಿಜೆಪಿ–ಕಾಂಗ್ರೆಸ್ ಜಟಾಪಟಿ

**ಕಾಂಗ್ರೆಸ್ ಕಚೇರಿ ಮುತ್ತಿಗೆ ಯತ್ನ | ಬಿಜೆಪಿ ಶಾಸಕ ಹರೀಶ್‌ಗೆ ಮೊಟ್ಟೆ ಏಟು**

**ಬೆಂಗಳೂರು:** ದೆಹಲಿಯಲ್ಲಿ ನೀಟ್ ಪರೀಕ್ಷೆ ಅಕ್ರಮದ ವಿರುದ್ಧ ಹೋರಾಟ ತೀವ್ರಗೊಂಡಿರುವ ನಡುವೆಯೇ ಕರ್ನಾಟದಲ್ಲೂ ಬಿಜೆಪಿ ಮತ್ತು ಕಾಂಗ್ರೆಸ್ ನಡುವೆ ಈ ವಿಚಾರವಾಗಿ ಜಟಾಪಟಿ ನಡೆದಿದೆ.

ಬೆಂಗಳೂರಿನ ಮಲ್ಲೇಶ್ವರಂ ಬಿಜೆಪಿ ಕಚೇರಿಗೆ ಕಾಂಗ್ರೆಸ್ ಕಾರ್ಯಕರ್ತರು ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು. ಇದರ ವಿರುದ್ಧ ಬಿಜೆಪಿ ನಾಯಕರು ಕಾಂಗ್ರೆಸ್ ಕಚೇರಿಗೆ ಮುತ್ತಿಗೆ ಹಾಕುವ ಪ್ರಯತ್ನ ನಡೆಸಿದರು. ಈ ವೇಳೆ ಶಾಸಕ ಬಿ.ಪಿ ಹರೀಶ್ ತಲೆ ಮೇಲೆ ಕೈ ಕಾರ್ಯಕರ್ತರು ಮೊಟ್ಟೆ ಹೊಡೆದಿದ್ದಾರೆ.

ನೀಟ್ ಅಕ್ರಮದ ವಿರುದ್ಧ ಹೋರಾಟ ನಡೆಸುತ್ತಿದ್ದ ವಿದ್ಯಾರ್ಥಿಗಳ ಮೇಲೆ ಜಂತರ್ ಮಂತರ್ ನಲ್ಲಿ ನಡೆದ ಲಾಠಿ ಚಾರ್ಜ್ ಖಂಡಿಸಿ ರಾಹುಲ್ ಗಾಂಧಿ ನೇತೃತ್ವದಲ್ಲಿ ಪ್ರಧಾನಿ ನರೇಂದ್ರ ಮೋದಿ ನಿವಾಸದ ಮುಂದೆ ನಡೆದ ಹೋರಾಟದಲ್ಲಿ ರಾಹುಲ್ ಗಾಂಧಿ ಅವರನ್ನು ಪೊಲೀಸರು



ವಶಕ್ಕೆ ಪಡೆದ ಘಟನೆಯನ್ನು ಖಂಡಿಸಿ ಬುಧವಾರ ಮಲ್ಲೇಶ್ವರಂ ಬಿಜೆಪಿ ಕಚೇರಿಗೆ ಮುತ್ತಿಗೆ ಹಾಕುವ ಪ್ರಯತ್ನ ನಡೆಸಲಾಗಿತ್ತು. ಈ ವೇಳೆ ಕಾಂಗ್ರೆಸ್ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದರು.

ಇದಕ್ಕೆ ಪ್ರತ್ಯುತ್ತರವಾಗಿ ಬಿಜೆಪಿ ನಾಯಕರು ಕೆಪಿಸಿಸಿ ಕಚೇರಿಗೆ ಮುತ್ತಿಗೆ ಹಾಕಲು ಮುಂದಾದರು. ಈ ವೇಳೆ ಕಿಡಿಗೇಡಿಗಳು ಬಿಜೆಪಿ ಶಾಸಕ ಬಿಪಿ ಹರೀಶ್ ಮೇಲೆ ಮೊಟ್ಟೆ ಎಸೆದಿದ್ದಾರೆ ಮೊಟ್ಟೆ ಎಸೆದ ಕಾಂಗ್ರೆಸ್ ಕಾರ್ಯಕರ್ತನನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ.

## ಟಿಎಂಸಿ ಸಂಸದ ಬ್ಯಾನರ್ಜಿ ಸಸ್ಪೆಂಡ್

**ಮಹಿಳಾ ಸಂಸದರ ವಿರುದ್ಧ ಅವಹೇಳನಕಾರಿ ಹೇಳಿಕೆ ಆರೋಪ**

**ನವದೆಹಲಿ:** ಮಹಿಳಾ ಸಂಸದರ ವಿರುದ್ಧ ಅವಹೇಳನಕಾರಿ ಹಾಗೂ ಅಸಭ್ಯ ಭಾಷೆ ಬಳಸಿದ ಆರೋಪದಡಿ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಸಂಸದ ಕಲ್ಯಾಣ್ ಬ್ಯಾನರ್ಜಿ ಅವರನ್ನು ಲೋಕಸಭೆಯ ಮುಂಗಾರು ಅಧಿವೇಶನದ ಉಳಿದ ಅವಧಿಗೆ ಬುಧವಾರ ಅಮಾನತು ಮಾಡಲಾಯಿತು.

ಬುಧವಾರ ಸಭಾಧ್ಯಕ್ಷರ ಪರವಾಗಿ ಕಲಾಪ ನಡೆಸುತ್ತಿದ್ದ ಕೃಷ್ಣ ಪ್ರಸಾದ್ ತೆನ್ನೇಟಿ ಅವರು ಕಲ್ಯಾಣ್ ಬ್ಯಾನರ್ಜಿ ವಿರುದ್ಧ ಮಹಿಳಾ ಸದಸ್ಯರು ಸಲ್ಲಿಸಿದ್ದ ದೂರನ್ನು ಉಲ್ಲೇಖಿಸಿದರು. ಬ್ಯಾನರ್ಜಿ ಹೇಳಿಕೆ ಸದನದ ಘನತೆಗೆ ಧಕ್ಕೆ ಉಂಟುಮಾಡಿದೆ ಎಂದರು. ಕೇಂದ್ರ ಸಚಿವ ಅರ್ಜುನ್ ರಾಮ್ ಮೇಘ್ವಾಲ್ ಅವರು ಕಲ್ಯಾಣ್ ಬ್ಯಾನರ್ಜಿ ಅವರನ್ನು ಅಮಾನತುಗೊಳಿಸುವ ನಿರ್ಣಯವನ್ನು ಸದನದಲ್ಲಿ ಮಂಡಿಸಿದರು.

ವಿಪಕ್ಷ ಸದಸ್ಯರು ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಸೇರಿದಂತೆ ವಿವಿಧ ವಿಷಯಗಳ ಕುರಿತು ಘೋಷಣೆ ಕೂಗುತ್ತಿದ್ದ ನಡುವೆಯೇ, ಧ್ವನಿಮತದ ಮೂಲಕ ನಿರ್ಣಯ ಅಂಗೀಕರಿಸಲಾಯಿತು. ನಿರ್ಣಯ ಪುಟ 2ಕ್ಕೆ



### 20 ಟಿಎಂಸಿ ಸಂಸದರ ಬಂಡಾಯ

ಪಶ್ಚಿಮ ಬಂಗಾಳ ವಿಧಾನಸಭೆ ಚುನಾವಣೆಯಲ್ಲಿ ಟಿಎಂಸಿ ಸೋತ ಬಳಿಕ ಪಕ್ಷದ 20 ಮಂದಿ ಲೋಕಸಭಾ ಸದಸ್ಯರು ಪಕ್ಷದ ನಾಯಕತ್ವದ ವಿರುದ್ಧ ಬಂಡಾಯ ಎದ್ದು ಎನ್‌ಸಿಪಿಐಗೆ ಸೇರ್ಪಡೆಯಾಗಿದ್ದರು. ಅವರು ಲೋಕಸಭೆಯಲ್ಲಿ ಟಿಎಂಸಿ ಸದಸ್ಯರಿಂದ ಪ್ರತ್ಯೇಕವಾಗಿ ಕುಳಿತುಕೊಳ್ಳುತ್ತಿದ್ದಾರೆ. ಅಲ್ಲದೆ, ಪುಟ 2ಕ್ಕೆ

# ಟ್ರೈಲರ್ ಅಷ್ಟೇ, ಸಿನಿಮಾ ನೋಡ್ತೀರಿ!

## ಕೇಂದ್ರ ವಿರುದ್ಧ ಜನಾಂದೋಲನ: ಸಿಜೆಪಿ ನಾಯಕರ ಎಚ್ಚರಿಕೆ

**ನವದೆಹಲಿ:** ನೀಟ್ ಅಕ್ರಮ ಖಂಡಿಸಿ, ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ ರಾಜೀನಾಮೆಗೆ ಆಗ್ರಹಿಸಿ ನಡೆದ ಬೃಹತ್ ಪ್ರತಿಭಟನೆ ಕೇವಲ ಟ್ರೈಲರ್ ಅಷ್ಟೇ. ಕೇಂದ್ರ ಸರ್ಕಾರ ನಮ್ಮ ಬೇಡಿಕೆಗಳನ್ನು ಈಡೇರಿಸದಿದ್ದರೆ ಮುಂದಿನ ದಿನಗಳಲ್ಲಿ ಲಕ್ಷಾಂತರ ಮಂದಿ ದೆಹಲಿಗೆ ಲಗ್ಗೆ ಇಡಲಿದ್ದಾರೆ ಎಂದು ಕಾಕ್ರೋಚ್ ಜನತಾ ಪಾರ್ಟಿ ಎಚ್ಚರಿಕೆ ನೀಡಿದೆ.

ಕಾಕ್ರೋಚ್ ಜನತಾ ಪಾರ್ಟಿ ರಾಷ್ಟ್ರೀಯ ವಕ್ತಾರ ಅಶುತೋಷ್ ರಾಂಕಾ ಪ್ರತಿಕ್ರಿಯಿಸಿ, ನೀಟ್ ಪರೀಕ್ಷಾ ಅಕ್ರಮ ಹಾಗೂ ಪತ್ರಿಕೆ ಸೋರಿಕೆ ಹಗರಣವನ್ನು ಖಂಡಿಸಿ ಹಮ್ಮಿಕೊಂಡಿದ್ದ ಸಂಸತ್ ಚಲೋ ರ್‍ಯಾಲಿ ಮೇಲಿನ ಪೊಲೀಸ್ ಕ್ರಮದ ಕುರಿತು ಆಕ್ರೋಶ ಹೊರಹಾಕಿದರು.

ವಿದ್ಯಾರ್ಥಿ ಸಮೂಹವು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ತಕ್ಷಣದ ರಾಜೀನಾಮೆಗೆ ಹಾಗೂ ಸಮಗ್ರ ಶಿಕ್ಷಣ ಸುಧಾರಣೆಗೆ ಪಟ್ಟು ಹಿಡಿದಿದೆ.



ತನಿಖಾ ಸಂಸ್ಥೆಗಳು ಉಗ್ರ ನಿಗ್ರಹ ಕಾಯ್ದೆ ಅಥವಾ ರಾಷ್ಟ್ರೀಯ ಭದ್ರತಾ ಕಾಯ್ದೆಯಡಿ ಪ್ರಕರಣ ದಾಖಲಿಸಿದರೂ ನ್ಯಾಯ ಸಿಗುವವರೆಗೂ ಹೋರಾಟ ನಿಲ್ಲಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಪುಟ 2ಕ್ಕೆ

### ವಾಂಗ್‌ಚುಕ್ ಉಪವಾಸ ಸತ್ಯಾಗ್ರಹ ಮುಂದುವರಿಕೆ

**ನವದೆಹಲಿ:** ನೀಟ್ ಪರೀಕ್ಷೆ ಅಕ್ರಮ ಖಂಡಿಸಿ ಕಳೆದ 25 ದಿನಗಳ ಉಪವಾಸ ಸತ್ಯಾಗ್ರಹ ಕೈಬಿಡುವಂತೆ ಮನವೊಲಿಸಲು ವಿರೋಧ ಪಕ್ಷದ ಸಂಸದರ ನಿಯೋಗ ಗುರುಗ್ರಾಮ್‌ನ ಮೇದಾಂತ ಆಸ್ಪತ್ರೆಯಲ್ಲಿರುವ ಸೋನಮ್ ವಾಂಗ್‌ಚುಕ್ ಅವರನ್ನು ಭೇಟಿ ಮಾಡಲಿದೆ.

ಕಳೆದ 25 ದಿನಗಳಿಂದ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ಸೋನಮ್ ಅವರನ್ನು ಭೇಟಿಯಾಗಲಿರುವ ವಿರೋಧ ಪಕ್ಷದ ನಿಯೋಗ, ಸಂಸತ್ತಿನ ಒಳಗೆ ಈ ವಿಷಯವನ್ನು ಪ್ರಸ್ತಾಪಿಸುವುದಾಗಿ ಭರವಸೆ ನೀಡಿ ಪುಟ 2ಕ್ಕೆ

**ಮೊದಲನೇ ಪುಟದಿಂದ**

## ಜಾನಕಿ ಸ್ಮಾರಕ ನಿರ್ಮಾಣ

ಎಸ್.ಜಾನಕಿ ಅಧ್ಯಯನ ಕೇಂದ್ರ ಹಾಗೂ 'ಕೃಷ್ಣ ಕಲ್ಯಾಣ' ಕಲ್ಯಾಣ ಮಂಟಪ ನಿರ್ಮಿಸಲಿದ್ದೇವೆ ಎಂದು ಹೇಳಿದರು.

ಹಂಸಲೇಖ ಹಾಗೂ ರಾಜ್ ಇವೆಂಟ್ಸ್ ಮುಖ್ಯಸ್ಥ ಸಿದ್ದರಾಜು ಅವರು ಸ್ಮಾರಕ ನಿರ್ಮಾಣಕ್ಕೆ 5 ಲಕ್ಷ ನೀಡುವುದಾಗಿ ಘೋಷಿಸಿದರು. ಅಭಿಮಾನಿಗಳಿಗೆ ಭೋಜನ ವ್ಯವಸ್ಥೆ ಮಾಡಲಾಗಿತ್ತು.

## ವಾಂಗ್‌ಚುಕ್ ಉಪವಾಸ ಸತ್ಯಾಗ್ರಹ ಮುಂದುವರಿಕೆ

ಉಪವಾಸವನ್ನು ಕೈಬಿಡುವಂತೆ ಕೋರಲಿದೆ. ಆದರೆ, ತಮ್ಮ ಬೇಡಿಕೆ ಈಡೇರಿಸುವವರೆಗೂ ಪ್ರತಿಭಟನೆ ಮುಂದುವರಿಸುವುದಾಗಿ ಸಿಜೆಪಿ ತಿಳಿಸಿದೆ.

'ಕಾಕ್ರೋಚ್ ಜನತಾ ಪಾರ್ಟಿ'ಯ 'ಸಂಸತ್ ಚಲೋ' ಮೆರವಣಿಗೆ ವೇಳೆ ಪ್ರತಿಭಟನಾಕಾರರ ವಿರುದ್ಧ ಪೊಲೀಸರ ಲಾಠಿ ಪ್ರಹಾರದ ನಂತರ, ಅಂತಹ ಭರವಸೆ ಸಿಗುವವರೆಗೂ ತಮ್ಮ ಉಪವಾಸವನ್ನು ಮುಂದುವರಿಸುವುದಾಗಿ ವಾಂಗ್ಚುಕ್ ಘೋಷಿಸಿದ್ದಾರೆ.

## 'ಕಾಕ್ರೋಚ್' ಅರ್ಜಿ: ತುರ್ತು ವಿಚಾರಣೆಗೆ ಸುಪ್ರೀಂ ನಕಾರ

ಬಳಿ ಇವೆ ಎಂದು ಅರ್ಜಿದಾರರ ಪರ ವಕೀಲರು

ಪೊಲೀಸರ ಕೃತ್ಯವನ್ನು ಸಾಬೀತುಪಡಿಸಲು ವಿಡಿಯೋ ಸಾಕ್ಷ್ಯಗಳನ್ನು ಸಲ್ಲಿಸಲು ಮುಂದಾದಾಗ, ನಮ್ಮ ಸಮಯ ವ್ಯರ್ಥ ಮಾಡಬೇಡಿ. ನಿಮ್ಮ ಸಮಯವನ್ನೂ ಹಾಳು ಮಾಡಿಕೊಳ್ಳಬೇಡಿ ಎಂದು ಸಿಜೆಐ ಎಚ್ಚರಿಸಿದರು.

## ಕೇಂದ್ರದ ನಡೆ ಕ್ರೌರ್ಯ: ದಿನೇಶ್

ಹಾಗೂ ಅಹಂಕಾರಕ್ಕೆ ಇದು ಸಾಕ್ಷಿ. ವಿದ್ಯಾರ್ಥಿಗಳು ಪಕ್ಷಾತೀತವಾಗಿ ಸಿಜೆಪಿ ಹೆಸರಿನಲ್ಲಿ ಹೋರಾಟ ಮಾಡುತ್ತಿದ್ದಾರೆ. ಅವರ ಪ್ರಶ್ನೆಗಳಿಗೆ ಉತ್ತರಿಸದೆ ಹತ್ತಿಕ್ಕುವ ಕೆಲಸ ಮಾಡುತ್ತಿದೆ. ಇದನ್ನು ಮಾಧ್ಯಮಗಳು ಕೂಡ ಪ್ರಶ್ನೆ ಮಾಡುತ್ತಿಲ್ಲ ಎಂದು ಹೇಳಿದರು.

ರಾಜ್ಯ ಸಂಪುಟ ವಿಸ್ತರಣೆ ಬಗ್ಗೆ ವರಿಷ್ಠರು ಸೂಕ್ತ ತೀರ್ಮಾನ ಕೈಗೊಳ್ಳಲಿದ್ದಾರೆ. ದೆಹಲಿಯಲ್ಲಿ ರಾಜಕೀಯ ಬೆಳವಣಿಗೆ ಇರುವುದರಿಂದ ಸಂಪುಟ ವಿಸ್ತರಣೆ ವಿಷಯ ಮುಂದಕ್ಕೆ ಹೋಗಿದೆ ಎಂದು ತಿಳಿಸಿದರು.

## ಟ್ರೈಲರ್ ಅಷ್ಟೇ, ಸಿನಿಮಾ ನೋಡ್ತೀರಿ!

ಜುಲೈ 20ರಂದು ನಡೆದ ಪ್ರತಿಭಟನೆ ಕೇವಲ ಟ್ರೈಲರ್ ಮಾತ್ರ. ಸರ್ಕಾರ ಇನ್ನೂ ಎಚ್ಚೆತ್ತುಕೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಲಕ್ಷಾಂತರ ಯುವಕರು ದೆಹಲಿಗೆ ಬಂದು ಐತಿಹಾಸಿಕ ಹೋರಾಟ ನಡೆಸಲಿದ್ದಾರೆ. ಇದು ಸ್ವಾತಂತ್ರ್ಯ ನಂತರ ಭಾರತದ ಅತಿದೊಡ್ಡ ಜನಾಂದೋಲನವಾಗಲಿದೆ ಎಂದು ಹೇಳಿದರು. ಕೇಂದ್ರ ಸರ್ಕಾರ ತನ್ನ ನಿಲುವು ಬದಲಿಸದಿದ್ದರೆ ದೇಶದ ಯುವಜನತೆ ತಕ್ಕ ಉತ್ತರ ನೀಡಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

ದೆಹಲಿಯ ಸಂಸತ್ ಭವನ, ರಫಿ ಮಾರ್ಗ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬಿಗಿ ಭದ್ರತೆ ಮುಂದುವರಿದಿದೆ. ಯಾವುದೇ ಅಹಿತಕರ ಘಟನೆ ನಡೆಯದಂತೆ ವ್ಯಾಪಕ ಪೊಲೀಸ್ ಬಂದೋಬಸ್ತ್ ಮತ್ತು ಬ್ಯಾರಿಕೇಡ್‌ಗಳನ್ನು ಅಳವಡಿಸಲಾಗಿದೆ. ಜುಲೈ 20ರಂದು ಸಂಸತ್ ಚಲೋ ಪ್ರತಿಭಟನೆಯ ವೇಳೆ ನಡೆದ ಹಿಂಸಾಚಾರ ಮತ್ತು ಸಾರ್ವಜನಿಕ ಆಸ್ತಿಪಾಸ್ತಿ ಹಾನಿ ಪ್ರಕರಣಗಳಿಗೆ ಸಂಬಂಧಿಸಿ ಈಗಾಗಲೇ ಆರು ಎಫ್‌ಐಆರ್‌ಗಳು ದಾಖಲಾಗಿವೆ. ಈ ಘಟನೆಗಳ ಹಿಂದೆ ದೊಡ್ಡ ಮಟ್ಟದ ಸಂಚು ಇದೆಯೇ ಎಂಬುದರ ಕುರಿತು ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

## ಸೌಜನ್ಯ ಪ್ರಕರಣ ಮರು ತನಿಖೆ: ಆದೇಶ ಕಾಯ್ದಿರಿಸಿದ 'ಸುಪ್ರೀಂ'

ಭದ್ರತೆ ಮಂದುವರಿಸಿ. ಆದೇಶ ಮಾಡಿದ ಬಳಿಕ ಮಧ್ಯಂತರ ವರದಿ ಕೇಳುತ್ತೇವೆ. ಎಸ್‌ಐಟಿ ರಚನೆಯ ಬಗ್ಗೆ ನಾವು ನಿರ್ಧರಿಸುತ್ತೇವೆ ಸುಪ್ರೀಂ ಕೋರ್ಟ್ ತಿಳಿಸಿದೆ.

ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆ ಮಾಡಲು ಸೌಜನ್ಯ ತಾಯಿ ಮನವಿ ಸಲ್ಲಿಸಿದ್ದಾರೆ. ಎಸ್‌ಐಟಿ ತನಿಖೆಗೆ ಸಹಕರಿಸಲು ಸಿದ್ಧ ಎಂದು ರಾಜ್ಯ ಸರ್ಕಾರ ತಿಳಿಸಿದೆ. ಮರು ತನಿಖೆಗೆ ಒಪ್ಪಿಕೊಂಡಿರುವ ಸುಪ್ರೀಂ ಕೋರ್ಟ್, ಯಾವ ರೀತಿಯ ತನಿಖೆ ಎನ್ನುವ ಬಗ್ಗೆ ಆದೇಶ ಕಾಯ್ದಿರಿಸಿದೆ.

## ಶಾಖೋತ್ಪನ್ನ ವಿದ್ಯುತ್ ಉತ್ಪಾದನೆ ಹೆಚ್ಚಳ: ಜಾರ್ಜ್

ಉತ್ಪಾದನೆಯಲ್ಲೂ ಗಣನೀಯವಾಗಿ ಏರಿಕೆಯಾಗಿದೆ. ಇದರಿಂದ ಪ್ರತಿನಿತ್ಯ ಸರಾಸರಿ 84.34 ದಶಲಕ್ಷ ಯೂನಿಟ್ ಶಾಖೋತ್ಪನ್ನ ವಿದ್ಯುತ್ ಉತ್ಪಾದನೆಯಾಗುತ್ತಿದೆ. ಕಳೆದ ವರ್ಷ ಜುಲೈ ತಿಂಗಳಲ್ಲಿ ನಿತ್ಯ ಸರಾಸರಿ 54.47 ದಶಲಕ್ಷ ಯೂನಿಟ್ ಉತ್ಪಾದನೆ ಮಾಡಲಾಗಿತ್ತು ಎಂದು ತಿಳಿಸಿದ್ದಾರೆ.

ಜಲ ವಿದ್ಯುತ್ ಉತ್ಪಾದನೆ ಕುಂಠಿತವಾಗಿರುವ ಕಾರಣ ಪೂರೈಕೆಗೆ ಸಮಸ್ಯೆಯಾಗದಂತೆ ಮುಕ್ತ ಮಾರುಕಟ್ಟೆಯಿಂದ ವಿದ್ಯುತ್ ಖರೀದಿಸಬೇಕಾಗುತ್ತದೆ. ಇದರಿಂದ ಸರ್ಕಾರದ ಬೊಕ್ಕಸದ ಮೇಲೆ ಹೊರೆ ಬೀಳುತ್ತದೆ. ಇದನ್ನು ತಪ್ಪಿಸಿ ರಾಜ್ಯದಲ್ಲೇ ಹೆಚ್ಚು ವಿದ್ಯುತ್ ಉತ್ಪಾದನೆ ಮಾಡಲು ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳನ್ನು ಸನ್ನದ್ಧಗೊಳಿಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

## ತುಮಕೂರಿನಲ್ಲಿ ವಿಮಾನ ನಿಲ್ದಾಣ: ಪರಂ ಬೆಂಬಲ

ಬೇರೆಬೇರೆ ಜಾಗ ಗುರುತಿಸಿದ್ದಾರೆ ಎಂದು ಹೇಳಿದರು.

ಶಿರಾದಲ್ಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಿಸಿದರೆ ತುಮಕೂರು ಮಾತ್ರವಲ್ಲದೆ ಈ ಪ್ರದೇಶದ ಮೂಲಕ ಬೆಂಗಳೂರಿಗೆ ಸಂಪರ್ಕ ಹೊಂದಿದ ಸುಮಾರು 20 ಜಿಲ್ಲೆಗಳಿಗೆ ಉಪಯೋಗವಾಗುತ್ತದೆ ಎಂದು ಹೇಳಿದರು.

ತುಮಕೂರು ಲೋಕಸಭಾ ಸಂಸದ ಸೋಮಣ್ಣ ಅವರು ಕೇಂದ್ರ ನಾಗರಿಕ ವಿಮಾನಯಾನ ಸಚಿವ ಕಿಂಜರಪು ರಾಮಮೋಹನ್ ನಾಯ್ಡು ಅವರಿಗೆ ಪ್ರಸ್ತಾವಿತ ವಿಮಾನ ನಿಲ್ದಾಣವನ್ನು ಶಿರಾದಲ್ಲಿ ಸ್ಥಾಪಿಸಬೇಕೆಂದು ಪತ್ರ ಬರೆದಿದ್ದರು.

## ನಗರದಲ್ಲಿ ತೀರಾ ಅಗತ್ಯವಿರುವ ಕಾಮಗಾರಿಗಳನ್ನು ಆಧ್ಯತೆ ಮೇರೆಗೆ ಕೈಗೆತ್ತಿಕೊಳ್ಳುತ್ತಿದ್ದೇವೆ: ಕೆ.ಶೇಷಾದ್ರಿ



**ರಾಮನಗರ:** ನಗರ ವ್ಯಾಪ್ತಿಯಲ್ಲಿ ಅತಿ ಅವಶ್ಯಕವಿರುವ ಕಡೆ ರಸ್ತೆ ದುರಸ್ಥಿ ಸೇರಿದಂತೆ ಮೂಲ ಸೌಕರ್ಯಗಳನ್ನು ಕಲ್ಪಿಸುತ್ತಿದ್ದೇವೆ. ನಗರ ಸಭೆಯ ಆಡಳಿತದೊಂದಿಗೆ ಸದಸ್ಯರು ಪಕ್ಷಾತೀತವಾಗಿ ಸಹಕಾರ ನೀಡುತ್ತಿದ್ದಾರೆ ಎಂದು ನಗರಸಭಾಧ್ಯಕ್ಷ ಕೆ.ಶೇಷಾದ್ರಿ ತಿಳಿಸಿದರು.

ನಗರದ ಐಜೂರಿನ ಕೆಂಪೇಗೌಡ ಬಡಾವಣೆಯಲ್ಲಿನ ಸಂಪರ್ಕ ರಸ್ತೆಯ ಅಭಿವೃದ್ದಿಗೆ ಭೂಮಿ ಪೂಜೆ ನೆರವೇರಿಸಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ಯುಡಿಎಫ್ ಸೇರಿದಂತೆ ವಿವಿಧ ಯೋಜನೆಗಳಡಿಯಲ್ಲಿ ಕೈಬಿಟ್ಟು ಹೋಗಿರುವ ಕಾಮಗಾರಿಗಳನ್ನು ನಗರಸಭಾ ನಿಧಿಯಿಂದ ಕೈಗೊಳ್ಳಲಾಗುತ್ತಿದೆ ಎಂದರು.

ಕೆಂಪೇಗೌಡ ಬಡಾವಣೆಯ ಸಂಪರ್ಕ ರಸ್ತೆಗಳು ತೀರಾ ಹದಗೆಟ್ಟಿವೆ ಎಂದು ಈ ಭಾಗದ ನಗರಸಭಾ ಸದಸ್ಯರ ಮಂಜುನಾಥ್, ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ಯರೇಹಳ್ಳಿ ಮಂಜು ಮುಂತಾದವರು ಒತ್ತಾಯಿಸುತ್ತಿದ್ದಲೇ ಇದ್ದರು. ನಗರಸಭಾ ನಿಧಿಯಿಂದ ಸುಮಾರು 23–24 ಲಕ್ಷರೂ ವೆಚ್ಚದಲ್ಲಿ ಅಭಿವೃದ್ದಿ ಕಾಮಗಾರಿಗೆ ಚಾಲನೆ ನೀಡಿರುವುದಾಗಿ ತಿಳಿಸಿದರು.

ನಗರಸಭಾ ಸದಸ್ಯ ಮಂಜುನಾಥ್, ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ಯರೇಹಳ್ಳಿ ಮಂಜುನಾಥ್, ನಗರಸಭೆ ಮಾಜಿ ಉಪಾಧ್ಯಕ್ಷ ನಾಗೇಶ್, ರಾಮನಗರ ಅಭಿವೃದ್ದಿ ಪ್ರಾಧಿಕರದ ನಿರ್ದೇಶಕ ಪ್ರವೀಣ್, ಮುಖಂಡರುಗಳು ಮತ್ತು ಸ್ಥಳೀಯರಾದ ಪುಟ್ಟಣ್ಣ, ವಿನಯ್, ಲಕ್ಷ್ಮೀಪತಿ, ಜಗದೀಶ್ ಹಾಜರಿದ್ದರು.

## ಎಲ್‌ಐಸಿಯಿಂದ ಅಥ್ಲೆಟಿಕ್ಸ್, ವಾಲಿಬಾಲ್ ಕ್ರೀಡಾಕೂಟಕ್ಕೆ ಚಾಲನೆ

**ಮೈಸೂರು:** ಎಲ್‌ಐಸಿ ದಕ್ಷಿಣ ಮಧ್ಯ ವಲಯ ಅಥ್ಲೆಟಿಕ್ಸ್ ಮತ್ತು ವಾಲಿಬಾಲ್ ಆಯ್ಕೆ ಟ್ರಯಲ್ಸ್ ಕ್ರೀಡಾಕೂಟಕ್ಕೆ ಮೈಸೂರಿನ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಚಾಲನೆ ದೊರೆಯಿತು. ಎರಡು ದಿನಗಳ ಈ ವಲಯ ಮಟ್ಟದ ಕ್ರೀಡಾಕೂಟದಲ್ಲಿ ಕರ್ನಾಟಕ, ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ಎಲ್‌ಐಸಿಯ ವಿವಿಧ ವಿಭಾಗಗಳಿಂದ ಸರಿಸುಮಾರು 80 ಎಲ್‌ಐಸಿ ಉದ್ಯೋಗಿಗಳು ಸ್ಪರ್ಧಿಸಿದ್ದರು.

ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ನಡೆದ ಸರಳ ಸಮಾರಂಭದಲ್ಲಿ ಎಲ್‌ಐಸಿ ದಕ್ಷಿಣ ಮಧ್ಯ ವಲಯದ ವಲಯ ಪ್ರಬಂಧಕ ಎಸ್.ಸರವಣ ರಮೇಶ್ ಎಲ್‌ಐಸಿಯ ಧ್ವಜಾರೋಹಣ ಮಾಡಿ ಬಲೂನುಗಳನ್ನು ಹಾರಿಬಿಡುವ ಮೂಲಕ ಕ್ರೀಡಾಕೂಟವನ್ನು ಉದ್ಘಾಟಿಸಿದರು. ಬಳಿಕ ಮಾತನಾಡಿ, ಕ್ರೀಡೆಗಳು ಸಾಧನೆಯ ಮತ್ತು ಐಕ್ಯತೆಯ ಪ್ರತೀಕ. ಮನುಷ್ಯರನ್ನು ರೂಪಿಸುವಲ್ಲಿ ಕ್ರೀಡೆಯೂ ಒಂದು ಮಹತ್ವದ ಪಾತ್ರ ವಹಿಸುತ್ತದೆ ಎಂದರು.



ಎಲ್‌ಐಸಿ ದಕ್ಷಿಣ ಮಧ್ಯ ವಲಯದ ಪ್ರಾದೇಶಿಕ ಪ್ರಬಂಧಕ ಎಸ್.ಎಚ್.ಸರೋಡೆ ಮಾತನಾಡಿ, ಎಲ್‌ಐಸಿ ಉದ್ಯೋಗಿಗಳು ಕ್ರೀಡೆಗಳಲ್ಲಿ ತಮ್ಮ ಸಾಧನೆಯನ್ನು ಇನ್ನಷ್ಟು ಹೆಚ್ಚಿಸಿಕೊಳ್ಳಲಿ ಎಂದು ಆಶಿಸಿದರು. ಎಲ್‌ಐಸಿ ಮೈಸೂರು ವಿಭಾಗದ ಹಿರಿಯ ವಿಭಾಗಾಧಿಕಾರಿ ಬಿ.ಪಿ.ರವಿ, ಎಲ್‌ಐಸಿ ಮೈಸೂರು ವಿಭಾಗದ ಮಾರುಕಟ್ಟೆ ವ್ಯವಸ್ಥಾಪಕ ಎಂ.ಎಸ್.ಜೀವನ್ ಕುಮಾರ್, ಎಲ್ ಐಸಿ ಕ್ರೀಡಾಭಿವೃದ್ಧಿ ಮಂಡಳಿಯ ಸದಸ್ಯರಾದ ಜೆ.ಸುರೇಶ್, ಡಾ. ಡಿವಿಎಸ್ ವೈ.ಶರ್ಮ, ಎಲ್ ಐಸಿ ಮೈಸೂರು ವಿಭಾಗದ ಔದ್ಯೋಗಿಕ ಪ್ರಬಂಧಕಿ ಗಂಗಾ, ಶ್ರೀಧರ್ ಹಾಗೂ ವಾಲಿಬಾಲ್ ಟ್ರಯಲ್ಸ್ ಅನ್ನು ರವೀಂದ್ರ ಇದ್ದರು.

# ನೀಟ್ ಪರೀಕ್ಷೆ: ಬಿಜೆಪಿ, ಕಾಂಗ್ರೆಸ್ ಜಟಾಪಟಿ

### ಕಾಂಗ್ರೆಸ್‌ನಿಂದ ಜಾಗೃತಿ ಕಾರ್ಯಕ್ರಮ, ರಾಹುಲ್ ಫೋಟೊ ಬಳಕೆಗೆ ಬಿಜೆಪಿ ಆಕ್ರೋಶ

**ಮೈಸೂರು:** ನಗರದ ಮಹಾರಾಣಿ ಪದವಿಪೂರ್ವ ಕಾಲೇಜಿನಲ್ಲಿ ನೀಟ್ ಪರೀಕ್ಷೆ ಸಂಬಂಧ ಆಯೋಜಿಸಿದ್ದ ಕಾರ್ಯಕ್ರಮ ಕಾಂಗ್ರೆಸ್ ಹಾಗೂ ಬಿಜೆಪಿಯ ವಾಕ್ಸಮರ ಜಟಾಪಟಿಯ ವೇದಿಕೆಯಾಗಿ ಪರಿಣಮಿಸಿ ಉದ್ವಿಗ್ನ ಪರಿಸ್ಥಿತಿ ನಿರ್ಮಾಣಗೊಂಡಿತ್ತು.

ಮಹಾರಾಣಿ ಕಾಲೇಜಿನಲ್ಲಿ ಮಧ್ಯಾಹ್ನ 3 ಗಂಟೆಗೆ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಕುರಿತ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು ಎನ್ನಲಾಗಿದೆ. ಆದರೆ, ಉಪನ್ಯಾಸ ಕಾರ್ಯಕ್ರಮದಲ್ಲಿ ರಾಹುಲ್ ಗಾಂಧಿ ಹಾಗೂ ಆತ್ಮಹತ್ಯೆಗೆ ಮಾಡಿಕೊಂಡ ವಿದ್ಯಾರ್ಥಿಗಳ ಬ್ಯಾನರ್ ಅನ್ನು ಹಾಕಲಾಗಿತ್ತು. ಈ ಮಾಹಿತಿ ಮೇರೆಗೆ ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ನೇತೃತ್ವದಲ್ಲಿ ಸ್ಥಳಕ್ಕಾಗಮಿಸಿದ ನೂರಾರು ಮಂದಿ ಬಿಜೆಪಿ ಕಾರ್ಯಕರ್ತರು, ಸರ್ಕಾರಿ ಶಾಲಾ–ಕಾಲೇಜಿನ ವಿದ್ಯಾರ್ಥಿಗಳನ್ನು ಬಲವಂತವಾಗಿ ಪ್ರತಿಭಟನೆಗೆ ಕರೆ ತರಲಾಗುತ್ತಿದೆ ಎಂದು ಆರೋಪಿಸಿ, ಕಾಂಗ್ರೆಸ್ ಹಾಗೂ ಕಾಲೇಜು ಆಡಳಿತ ಮಂಡಳಿ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಇದಕ್ಕೆ ಪ್ರತ್ಯುತ್ತರವಾಗಿ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿದ ಕಾಂಗ್ರೆಸ್ ಕಾರ್ಯಕರ್ತರು, ಕಾರ್ಯಕ್ರಮ ಆಯೋಜನೆಗೆ ಅವಕಾಶ ಮಾಡಿಕೊಡುವಂತೆ ಪಟ್ಟು ಹಿಡಿದರು. ಬಿಜೆಪಿ ಮತ್ತು ಕಾಂಗ್ರೆಸ್ ಕಾರ್ಯಕರ್ತರ ಜಟಾಪಟಿಯಿಂದಾಗಿ ಸ್ಥಳದಲ್ಲಿ ಗಂಟೆಗೂ ಹೆಚ್ಚು ಕಾಲ ಬಿಗುವಿನ ವಾತಾವರಣ ಸೃಷ್ಟಿಯಾಗಿತ್ತು. ಇದೇ ವೇಳೆ ಸ್ಥಳಕ್ಕಾಗಮಿಸಿದ ಶಾಸಕ ಕೆ.ಹರೀಶ್‌ಗೌಡ ಹಾಗೂ ಎಲ್.ನಾಗೇಂದ್ರ ನಡುವೆ ಮಾತಿನ ಚಕಮಕಿ ನಡೆಯಿತು. ಬಳಿಕ ಪರಿಸ್ಥಿತಿ ಅರಿತ ಕಾಲೇಜು ಆಡಳಿತ, ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿಗಳ ಬ್ಯಾನರ್ ಅನ್ನು ತೆರವುಗೊಳಿಸಿದರು. ಅಲ್ಲದೆ ಪೊಲೀಸರು ಪರಿಸ್ಥಿತಿ ನಿಯಂತ್ರಿಸಿದರು.

ಬಂಧನ–ಬಿಡುಗಡೆ: ಬಿಜೆಪಿ ಹಾಗೂ ಕಾಂಗ್ರೆಸ್ ಕಾರ್ಯಕರ್ತರ ನಡುವೆ ಗಲಾಟೆ ಆರಂಭವಾಗುತ್ತಿದ್ದಂತೆ ಎಚ್ಚೆತ್ತ ಪೊಲೀಸರು, ಬ್ಯಾರಿಕೇಡ್‌ಗಳನ್ನು ಅಳವಡಿಸಿ ಕಾಲೇಜಿನೊಳಗೆ ಯಾರಿಗೂ ಪ್ರವೇಶ ನೀಡದಂತೆ ತಡೆದರಲ್ಲದೆ ಪ್ರತಿಭಟನಾ ನಿರತ ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಮಾಜಿ ಸಂಸದ ಪ್ರತಾಪಸಿಂಹ, ಬಿಜೆಪಿ ಯುವಮುಖಂಡ ರಾಕೇಶ್, ಕೆ.ವಸಂತ್ ಕುಮಾರ್, ಬಿಜೆಪಿ ವಕ್ತಾರ ಎಂ.ಮೋಹನ್ ಸೇರಿ ಅನೇಕರನ್ನು ಬಂಧಿಸಿ, ನಂತರ ಬಿಡುಗಡೆ ಮಾಡಿದರು.



### ಎಲ್‌ಇಡಿಯಲ್ಲಿ ರಾಹುಲ್ ಗಾಂಧಿ ಭಾವಚಿತ್ರ!

ಕಾಂಗ್ರೆಸ್ ವತಿಯಿಂದ ಕಾಲೇಜಿನ ಆವರಣದಲ್ಲಿ ನೀಟ್ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಮೃತ ವಿದ್ಯಾರ್ಥಿಗಳ ಭಾವಚಿತ್ರಗಳ ಜತೆಗೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಫೋಟೋವನ್ನು ಎಲ್‌ಇಡಿ ಪರದೆಯ ಮೇಲೆ ಪ್ರದರ್ಶಿಸಲಾಗಿತ್ತು. ಇದು ಬಿಜೆಪಿ ನಾಯಕರ ಕೆಂಗಣ್ಣಿಗೆ ಗುರಿಯಾಯಿತು. ಈ ವೇಳೆ ಸ್ಥಳಕ್ಕೆ ಬಂದ ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ಹಾಗೂ ಬೆಂಬಲಿಗರು, ಕಾಲೇಜು ಆವರಣದಲ್ಲಿ ಮೃತ ವಿದ್ಯಾರ್ಥಿಗಳ ಬ್ಯಾನರ್ ಹಾಗೂ ರಾಹುಲ್ ಗಾಂಧಿ ಭಾವಚಿತ್ರ ಅಳವಡಿಕೆಗೆ ಆಕ್ಷೇಪ ವ್ಯಕ್ತಪಡಿಸಿ, ಪವಿತ್ರವಾದ ಕಾಲೇಜು ಆವರಣದಲ್ಲಿ ವಿದ್ಯಾರ್ಥಿಗಳನ್ನು ರಾಜಕೀಯವಾಗಿ ಪ್ರಚೋದಿಸಲು ಕಾಂಗ್ರೆಸ್ ಯತ್ನಿಸುತ್ತಿದೆ. ವಿದ್ಯಾರ್ಥಿಗಳನ್ನು ಬಲವಂತವಾಗಿ ಕರೆತರಲಾಗುತ್ತಿದೆ ಎಂದು ಕಿಡಿಕಾರಿದರು.

> ನೀಟ್ ಪರೀಕ್ಷೆ ಸಂಬಂಧ ವಿದ್ಯಾರ್ಥಿಗಳಿಗೆ ಧೈರ್ಯ ತುಂಬುವ ಕಾರ್ಯಕ್ರಮ ಅಂತ ನಾನು ಅಂದುಕೊಂಡಿದ್ದೆ. ಅಲ್ಲದೆ ಕಾರ್ಯಕ್ರಮಕ್ಕೆ ಅವಕಾಶ ನೀಡುವಂತೆ ಶಾಲಾ ಶಿಕ್ಷಣ ಇಲಾಖೆ(ಪದವಿಪೂರ್ವ) ಉಪನಿರ್ದೇಶಕರು ಆದೇಶ ನೀಡಿದ್ದರಿಂದ ಅವಕಾಶ ಮಾಡಿಕೊಡಲಾಗಿತ್ತು
>
> **ಸೋಮಣ್ಣ** ಮಹಾರಾಣಿ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ

> ಮಹಾರಾಣಿ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಧೈರ್ಯ ತುಂಬುವ ಕೆಲಸ ಮಾಡ್ತಿದ್ದೇವೆ. ಇಲ್ಲಿ ಯಾವುದೇ ರಾಜಕೀಯ ಪ್ರೇರಿತ ಕಾರ್ಯಕ್ರಮ ಮಾಡ್ತಿಲ್ಲ. ರಾಹುಲ್ ಗಾಂಧಿ ಫೋಟೋ ಕೂಡ ಹಾಕಿಲ್ಲ. ಅದಾಗ್ಯೂ ಬಿಜೆಪಿ ನಾಯಕರು ಸುಳ್ಳು ಆರೋಪಗಳು ಮಾಡಿದ್ದಾರೆ.
>
> **ಕೆ.ಹರೀಶ್‌ಗೌಡ** ಶಾಸಕ

> ಸರ್ಕಾರಿ ಕಾಲೇಜು ಆವರಣದಲ್ಲಿ ವಿದ್ಯಾರ್ಥಿಗಳನ್ನು ರಾಜಕೀಯವಾಗಿ ಪ್ರಚೋದಿಸಲು ಕಾಂಗ್ರೆಸ್ ಯತ್ನಿಸುತ್ತಿದೆ. ವಿದ್ಯಾರ್ಥಿಗಳನ್ನು ಬಲವಂತವಾಗಿ ಕರೆತರಲಾಗುತ್ತಿದೆ. ಆತ್ಮಹತ್ಯೆಗೆ ಶರಣಾದ ಅಮಾಯಕ ವಿದ್ಯಾರ್ಥಿಗಳ ಶ್ರದ್ಧಾಂಜಲಿಯಲ್ಲಿ ರಾಹುಲ್ ಗಾಂಧಿ ಫೋಟೋ ಹಾಕುವ ಅಗತ್ಯವೇನಿತ್ತು?
>
> **ಎಲ್.ನಾಗೇಂದ್ರ** ಮಾಜಿ ಶಾಸಕ

**ಮೊದಲನೇ ಪುಟದಿಂದ**

## ಟಿಎಂಸಿ ಸಂಸದ ಬ್ಯಾನರ್ಜಿ ಸಸ್ಪೆಂಡ್

ಅಂಗೀಕಾರ ಬಳಿಕ, ಕಲ್ಯಾಣ್ ಬ್ಯಾನರ್ಜಿ ಅವರಿಗೆ ಸದನದ ಆವರಣ ತೊರೆಯುವಂತೆ ಅಧ್ಯಕ್ಷತೆ ವಹಿಸಿದ್ದ ತೆನ್ನೇಟಿ ಸೂಚಿಸಿದರು. ವಿಪಕ್ಷ ಸದಸ್ಯರ ಘೋಷಣೆ ಮುಂದುವರಿದ ಹಿನ್ನೆಲೆಯಲ್ಲಿ ಲೋಕಸಭೆಯನ್ನು ದಿನಪೂರ್ತಿ ಮುಂದೂಡಲಾಯಿತು.

## ಚೆನ್ನಮ್ಮಗೆ ಪ್ರಜ್ವಲ್ ನೋಡುವ ಆಸೆ ಇತ್ತು

ವರ್ಷ ಬದುಕುತ್ತಿದ್ದರು. ದೇವರ ತೀರ್ಮಾನಕ್ಕೆ ನಾವೆಲ್ಲರೂ ತಲೆಬಾಗುತ್ತೇವೆ ಎಂದರು.

ಧಾರ್ಮಿಕವಾಗಿ ಎಲ್ಲಾ ವಿಧಿ ವಿಧಾನಗಳನ್ನ ಅತ್ಯಂತ ಶ್ರದ್ಧೆಯಿಂದ ನಡೆಸಿದ್ದೇವೆ. ನಮ್ಮ ತಂದೆ–ತಾಯಿ



ಹಲವಾರು ರೀತಿಯ ಏಳು, ಬೀಳು ನೋವುಗಳನ್ನ ಕಂಡಿದ್ದಾರೆ. ಅವರು ಸಂತೋಷ ಪಟ್ಟ ದಿನಗಳು ಕಡಿಮೆ ಎಂದು ಹೇಳಿದರು.

ಕಳೆದ ಒಂದೂವರೆ ವರ್ಷದಿಂದ ಅನಾರೋಗ್ಯ ಅನುಭವಿಸುತ್ತಿದ್ದರು. ರಾಜಕೀಯ ದ್ವೇಷದಲ್ಲಿ ನಡೆದ ಘಟನೆಗಳು ಇದಕ್ಕೆ ಕಾರಣ. ತಪ್ಪುಗಳು ನಮ್ಮಿಂದ ಆಗಿರಬಹುದು. ನಾವು ಪರಿಶುದ್ಧವಾಗಿ ಬದುಕಿದ್ದೇವೆ ಎಂದು ಹೇಳಲ್ಲ. ಆ ತಪ್ಪುಗಳನ್ನ ಇಟ್ಟು ಈ ರಾಜ್ಯದಲ್ಲಿ ಏನೇನು ನಡೆದಿದೆ. ನಮ್ಮ ಕುಟುಂಬವನ್ನ ಸಂಪೂರ್ಣವಾಗಿ ರಾಜ್ಯದ ಜನತೆಯ ಹೃದಯದಿಂದ ಕಿತ್ತೊಗೆಯಬೇಕು ಎಂದು ಕೆಲವು ಘಟನೆಗಳು ನಡೆದವು ಎಂದು ಟೀಕಿಸಿದರು.

## 20 ಟಿಎಂಸಿ ಸಂಸದರ ಬಂಡಾಯ

ಎನ್‌ಸಿಪಿಐ ಸಂಸದರು ಎನ್‌ಡಿಎ ಸರ್ಕಾರ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರಿಗೆ ತಮ್ಮ ಬೆಂಬಲವಿರುವುದಾಗಿ ಘೋಷಿಸಿದ್ದಾರೆ.

## ಕೆ.ಜಿ.ಕೊಪ್ಪಲಿನಲ್ಲಿ ಶಾಸಕ ಕೆ.ಹರೀಶ್ ಗೌಡ ಪಾದಯಾತ್ರೆ





**ಮೈಸೂರು:** ಮಹಾನಗರ ಪಾಲಿಕೆಯ ವಾರ್ಡ್ ನಂ.42ರ ಕೆ.ಜಿ. ಕೊಪ್ಪಲು ವ್ಯಾಪ್ತಿಯಲ್ಲಿ ಅಧಿಕಾರಿಗಳ ಜತೆಗೂಡಿ ಶಾಸಕ ಕೆ.ಹರೀಶ್ ಗೌಡ ಪಾದಯಾತ್ರೆ ನಡೆಸಿ ಜನರ ಸಮಸ್ಯೆಗಳಿಗೆ ಸ್ಪಂದಿಸಿದರು.

"ಜನರ ಮನೆ ಬಾಗಿಲಿಗೆ ಶಾಸಕರು" ಪಾದಯಾತ್ರೆ ಮುಂದುವರೆದ ಭಾಗವಾಗಿ ಶ್ರೀ ಚಂದ್ರಮೌಳೇಶ್ವರ ಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿ ಬಳಿಕ ವಾರ್ಡ್ ಮುಖಂಡರೊಂದಿಗೆ ಭೇಟಿ ನೀಡಿ ಪೂಜೆ ಸಲ್ಲಿಸಿ ಪಾದಯಾತ್ರೆಯನ್ನು ಆರಂಭಿಸಿದರು. ರೈಲ್ವೆ ಗೇಟ್ ಹಿಂಭಾಗದ ರಸ್ತೆಗಳಲ್ಲಿ ಚರಂಡಿ ಸಮಸ್ಯೆ ಹಾಗೂ ರಸ್ತೆ ಕಾಮಗಾರಿ ಮಾಡಿಸಿಕೊಡುವಂತೆ ನಿವಾಸಿಗಳು ಕೋರಿದರು. ವಾರ್ಡ್ ನಲ್ಲಿ ಕೆಲವು ಕಡೆ ನೀರಿನ ಸಮಸ್ಯೆ ಇರುವುದಾಗಿ ಮಹಿಳೆಯರು ದೂರಿದರು. ಕೆಲವೆಡೆ ರಸ್ತೆ ಸಮತಟ್ಟಿಲ್ಲದ ಕಾರಣ ನಲ್ಲಿಗಳಲ್ಲಿ ನೀರು ಬಾರದಿರುವ ಬಗ್ಗೆ ಹಾಗೂ ನೀರಿನ ಸಮಸ್ಯೆನ್ನು ಅತಿ ತುರ್ತಾಗಿ ಸರಿಪಡಿಸುವಂತೆ ಕೋರಿದರು.

ಈ ಬಗ್ಗೆ ಸ್ಥಳದಲ್ಲಿಯೇ ಇದ್ದ ವಾಣಿ ವಿಲಾಸ ನೀರು ಸರಬರಾಜು ಇಇ ಮೋಹನ್ ಕುಮಾರ್ ಹಾಗೂ ಎಇಇ ಮುಸ್ತಫಾಗೆ ವಾರ್ಡ್ ನಲ್ಲಿ ನೀರಿನ ಸಮಸ್ಯೆ ಆಗದಂತೆ ಅವಶ್ಯವಿರುವ ಕಾಮಗಾರಿಗಳ ಕ್ರಿಯಾ ಯೋಜನೆ ತಯಾರಿಸಿ ಕ್ರಮವಹಿಸುವಂತೆ ಹಾಗೂ ಶೀಘ್ರವಾಗಿ ನೀರಿನ ಸಮಸ್ಯೆಯನ್ನು ಬಗೆಹರಿಸುವಂತೆ ಸೂಚಿಸಿದರು.

ವಿದ್ಯುತ್ ಕಂಬಗಳು ಕೆಲವು ಕಡೆ ವಾಲಿಕೊಂಡಿದ್ದು, ಮತ್ತೆ ಹಲವೆಡೆ ಬೀದಿದೀಪ ಅಳವಡಿಸುವಂತೆ ಬಂದ ಮನವಿಗೆ ಚೆಸ್ಕಾಂ ಅಧಿಕಾರಿಗಳು ಸ್ಪಂದಿಸುವಂತೆ ಹೇಳಿದರು. ನೀರು, ರಸ್ತೆ, ಚರಂಡಿ, ಬೀದಿ ದೀಪ, ಸ್ವಚ್ಛತೆ ಸೇರಿ ಹಲವು ನಾಗರಿಕ ಸಮಸ್ಯೆಗಳ ಕುರಿತು ಜನರು ಅಹವಾಲು ಆಲಿಸಿದರು. ಕೆಲವು ಸಮಸ್ಯೆಗಳನ್ನು ಸ್ಥಳದಲ್ಲಿಯೇ ಬಗೆಹರಿಸಿದರೆ, ಉಳಿದವುಗಳನ್ನು ನಿಗದಿತ ಅವಧಿಯೊಳಗೆ ಪರಿಹರಿಸುವ ಭರವಸೆ ನೀಡಿದರು. ಪಿಂಚಣಿ ಮಾಡಸಿಕೊಡಿ, ಮತದಾರರ ಪಟ್ಟಿಗೆ ಹೆಸರು ನೋಂದಣಿಯಾಗಿಲ್ಲ ಇನ್ನಿತರೆ ಸಮಸ್ಯೆಗಳನ್ನು ಸಹ ಆಲಿಸಿ ಸ್ಪಂದಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಹೇಳಿದರು

ಬಳಿಕ ಶಾಸಕ ಕೆ.ಹರೀಶ್ ಗೌಡ ಮಾತನಾಡಿ, ಸರ್ಕಾರದ ಯೋಜನೆಗಳು ಮತ್ತು ಸೌಲಭ್ಯಗಳು ನೇರವಾಗಿ ಜನರಿಗೆ ತಲುಪಬೇಕು. ಈ ದಿಸೆಯಲ್ಲಿ ಅಧಿಕಾರಿಗಳು ಕಾರ್ಯ ಪ್ರವೃತರಾಗಿರಬೇಕು. ಸಾರ್ವಜನಿಕರಿಗೆ ಗೃಹ ಜ್ಯೋತಿ, ಗೃಹಲಕ್ಷ್ಮಿ ಸೇರಿ ವಿವಿಧ ಪಿಂಚಣಿಗಳ ವಿಳಂಬ ಕುರಿತು ಗೊಂದಲಗಳಿದ್ದಲ್ಲಿ ಅಧಿಕಾರಿಗಳು ಕೂಡಲೇ ಬಗೆಹರಿಸುವ ನಿಟ್ಟಿನಲ್ಲಿ ಅವರ ಬಳಿಗೆ ತೆರಳಿ ಸಮಸ್ಯೆ ಅರಿಯುವ ಕೆಲಸ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಪಾಲಿಕೆಯ ಡಿ.ಸಿ. (ರೆವಿನ್ಯೂ) ಸೋಮಶೇಖರ್, ಎಸ್.ಇ. ಸಿಂಧು, ಎಕ್ಸಿಕ್ಯೂಟಿವ್ ಇಂಜಿನಿಯರ್ ಶ್ರೀನಿವಾಸ್, ಎಕ್ಸಿಕ್ಯೂಟಿವ್ ಇಂಜಿನಿಯರ್, ವಾಣಿ ವಿಲಾಸ್ ನೀರು ಸರಬರಾಜು ಮೋಹನ್ ಕುಮಾರ್, ಎಇಇ ಮುಸ್ತಫಾ, ವಲಯ ಅಭಿವೃದ್ಧಿ ಅಧಿಕಾರಿ ಸತ್ಯಮೂರ್ತಿ, ವಲಯ ಆಯುಕ್ತ ಸಂದೀಪ್, ಇಂಜಿನಿಯರ್ ಮಧುಸೂದನ್, ತೇಜಸ್ವಿನಿ, ಇಂದಿರಾ ಗಾಂಧಿ ಬ್ಲಾಕ್ ಅಧ್ಯಕ್ಷ ರವಿ ಮಂಚೇಗೌಡನ ಕೊಪ್ಪಲು, ದೇವರಾಜ ಬ್ಲಾಕ್ ಅಧ್ಯಕ್ಷ ಡಿ.ನಾಗಭೂಷಣ್, ವಾರ್ಡ್ ಅಧ್ಯಕ್ಷ ಹರೀಶ್, ಮುಖಂಡರಾದ ರಾಜಣ್ಣ, ಭಾಸ್ಕರ್, ಬಸವರಾಜು, ಬರಕ್ಕಿ ಮಾದೇವಣ್ಣ, ಚೆನ್ನಪ್ಪ, ನಾಗಣ್ಣ, ಬಂದೀಗೌಡ್ರು , ಕುಮಾರಣ್ಣ (ದತ್ತು), ಶ್ರೀನಿವಾಸ್, ಪ್ರದೀಪ್ (ದೀಪು), ದೀಪು (ನಂಜುಂಡಸ್ವಾಮಿ), ಗಿರೀಶ್, ಮಹೇಶ್, ಚಂದ್ರು ಸೇರಿ ಇತರರು ಭಾಗವಹಿಸಿದ್ದರು.

### ಎಐಸಿಸಿ ಕಾರ್ಯದರ್ಶಿ ಗೋಪಿನಾಥ್ ಪಳನಿಯಪ್ಪನ್ ಹೇಳಿಕೆ

# ದೇಶದ ಶಿಕ್ಷಣ ವ್ಯವಸ್ಥೆ ಆತಂಕಕಾರಿ ಸ್ಥಿತಿಯಲ್ಲಿದೆ

ಮೈಸೂರು: ಕೇಂದ್ರದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಾಗಿನಿಂದ ನೀಟ್ ಸೇರಿದಂತೆ 152 ಪ್ರಮುಖ ಪರೀಕ್ಷೆಗಳ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದ್ದು, ದೇಶದ ಶಿಕ್ಷಣ ವ್ಯವಸ್ಥೆ ಆತಂಕಕಾರಿ ಪರಿಸ್ಥಿತಿಯಲ್ಲಿದೆ ಎಂದು ಎಐಸಿಸಿ ಕಾರ್ಯದರ್ಶಿ ಗೋಪಿನಾಥ್ ಪಳನಿಯಪ್ಪನ್ ಆರೋಪಿಸಿದರು.

ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಕಾಂಗ್ರೆಸ್ ಕಚೇರಿಯಲ್ಲಿ ಬುಧವಾರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರದ ವೈಫಲ್ಯದಿಂದಾಗಿಯೇ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದ್ದು, ನೈತಿಕ ಹೊಣೆ ಹೊತ್ತು ಪ್ರದಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತಾ ಶಾ ಹಾಗೂ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಬೇಕು. ಪ್ರಶ್ನೆ ಪತ್ರಿಕೆ ತಯಾರಿಕೆಯಿಂದ ಹಿಡಿದು ಮುದ್ರಣದವರೆಗೂ ಸೋರಿಕೆಯಾಗಿದೆ. ದೇಶದಾದ್ಯಂತ ಬಡ ಮಧ್ಯಮ ವರ್ಗದ 20 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ವಿರುದ್ಧ ದೆಹಲಿಯಲ್ಲಿ ವಿದ್ಯಾರ್ಥಿಗಳು ಬೀದಿಗಿಳಿದು ಪ್ರತಿಭಟನೆಗೆ ಮುಂದಾಗಿದ್ದಾರೆ. ಆದರೆ,




ಪ್ರತಿಭಟನಾ ನಿರತ ವಿದ್ಯಾರ್ಥಿಗಳ ಮೇಲೆ ಮಾರಣಾಂತಿಕವಾಗಿ ಹಲ್ಲೆ ಮಾಡುವ ಮೂಲಕ ಗುಂಡಾ ವರ್ತನೆ ತೋರಿದೆ ಎಂದು ಹರಿಹಾಯ್ದರು.

ಪೊಲೀಸರು ಪ್ರತಿಭಟನಾ ನಿರತ ವಿದ್ಯಾರ್ಥಿಗಳ ಮೇಲೆ ಲಾಟಿ ಚಾರ್ಜ್ ನಡೆಸಿರುವುದು ಖಂಡನೀಯ. ಈ ವೇಳೆ ಸಿವಿಲ್ ಡ್ರೆಸ್‌ನಲ್ಲಿದ್ದ ಆರ್‌ಎಸ್‌ಎಸ್ ಗೂಂಡಾಗಳು ವಿದ್ಯಾರ್ಥಿಗಳಿಗೆ ಲಾಠಿಯಿಂದ ಹೊಡೆದಿದ್ದು, ಆತಂಕಕಾರಿ ವಾತಾವರಣ ಸೃಷಿಯಾಗಿದೆ. ವಿದ್ಯಾರ್ಥಿಗಳ ಹೋರಾಟ ಬೆಂಬಲಿಸಿ ಪ್ರತಿಭಟನೆಗೆ ಮುಂದಾಗಿದ್ದ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರನ್ನು ಬಂಧಿಸಿದ ಕ್ರಮ ಪ್ರಜಾಪ್ರಭುತ್ವ ವಿರೋಧಿಯಾಗಿದೆ ಎಂದು ಕಿಡಿಕಾರಿದರು.

ಕೇಂದ್ರ ಸರ್ಕಾರ ಪ್ರತಿಪಕ್ಷಗಳನ್ನು ಧಮನ ಮಾಡಲು ಹೊರಟಿದೆ. ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿಗಳ ಪರಿಹಾರ ಘೋಷಣೆ ಮಾಡದೆ ಕನಿಷ್ಠ ಕನಿಕರ ತೋರದ ಕೇಂದ್ರ ಸರ್ಕಾರದ ನಡೆ ಅಮಾನವೀಯ ನಡೆಯಾಗಿದೆ. ಆದ್ದರಿಂದ ದೇಶದ ಮೂಲೆ ಮೂಲೆಯಲ್ಲಿ ಕೇಂದ್ರ ಸರ್ಕಾರದ ದುರಾಡಳಿತ ಹಾಗೂ ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಳ್ಳಬೇಡಿ ಎಂಬ ಅಭಿಯಾನವನ್ನು ಕಾಂಗ್ರೆಸ್ ಹಮ್ಮಿಕೊಂಡಿದೆ ಎಂದು ತಿಳಿಸಿದರು. ಇದಕ್ಕೂ ಮುನ್ನ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯಿಂದ ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿಗಳಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ, ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್, ಎನ್‌ಎಸ್‌ಯುಐ ರಾಷ್ಟ್ರೀಯ ಕಾರ್ಯದರ್ಶಿ ನಾಗೇಶ್ ಕರಿಯಪ್ಪ, ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್, ಕಾಂಗ್ರೆಸ್ ಮುಖಂಡರಾದ ಶಿವಣ್ಣ, ಪ್ರದೀಪ್‌ಕುಮಾರ್, ಮಹೇಶ್, ಗಿರೀಶ್ ಮತ್ತಿತರರಿದ್ದರು.

# ವಿದ್ಯಾರ್ಥಿಗಳಲ್ಲಿ ಸಾಮಾಜಿಕ, ಸೇವಾ ಬದ್ಧತೆ ಮೂಡಿಸಲು ಎನ್.ಎಸ್.ಎಸ್. ಶಿಬಿರಗಳು ಉಪಯುಕ್ತ: ಪ್ರೊ.ಕೆ.ಆರ್.ಏಜಾಜ್ ಅಹಮದ್

## ಯುವ ಶಕ್ತಿ ಸದ್ಬಳಕೆಯಾದರೆ ಮಾತ್ರ ಮಹತ್ತರ ಕಾರ್ಯ ಸಾಧ್ಯ | ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಸೇವಾ ಬದ್ಧತೆ ಮೂಡಿಸಲು, ಪರಿಪೂರ್ಣ ವ್ಯಕ್ತಿತ್ವ ವಿಕಸನಕ್ಕೆ ಶಿಬಿರ ಸಹಕಾರಿ

**ರಾಮನಗರ:** ವಿದ್ಯಾರ್ಥಿಗಳಿಗೆ ಶಿಕ್ಷಣ ಹೇರಿಕೆ ಆಗಬಾರದು, ಪಠ್ಯ ಶಿಕ್ಷಣ ಜತೆ ಸಮುದಾಯದ ಪರಿಚಯ, ಸೇವೆ ಮೂಲಕ ಸ್ವಚ್ಛತೆ ಅರಿವು, ನಮ್ಮಲ್ಲಿನ ಸಂಸ್ಕೃತಿ ಪ್ರದರ್ಶನಕ್ಕೆ ಸಾಂಸ್ಕೃತಿಕ ಕಾರ್ಯಕ್ರಮ, ಸಹ ಭೋಜನ, ಕ್ರೀಡೆ ಹೀಗೆ ಸಮಗ್ರತೆ ಪರಿಕಲ್ಪನೆಯ ಅಗತ್ಯವಿದೆ ಎಂದು ಗೌಸಿಯಾ ಎಂಜಿನಿಯರಿಂಗ್ ಕಾಲೇಜಿನ ಆಡಳಿತಾಧಿಕಾರಿ ಪ್ರೊ. ಕೆ.ಆರ್.ಏಜಾಜ್ ಅಹಮದ್ ಹೇಳಿದರು.

ತಾಲೂಕಿನ ಕೂಟಗಲ್ ಹೋಬಳಿ ಹೊಂಬೇಗೌಡನದೊಡ್ಡಿ ಗ್ರಾಮದ ಸರ್ಕಾರಿ ಶಾಲೆಯಲ್ಲಿ ಗೌಸಿಯಾ ಎಂಜಿನಿಯರಿಂಗ್ ಕಾಲೇಜು ಆಯೋಜಿಸಿರುವ 7 ದಿನಗಳ ರಾಷ್ಟ್ರೀಯ ಸೇವಾ ಯೋಜನೆ ವಿಶೇಷ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ನೀಡಿದ ಅವರು, ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಸೇವಾ ಬದ್ಧತೆ ಮೂಡಿಸಲು ಹಾಗೂ ಪರಿಪೂರ್ಣ ವ್ಯಕ್ತಿತ್ವ ವಿಕಸನಕ್ಕಾಗಿ ಎನ್‌ಎಸ್‌ಎಸ್ ಶಿಬಿರ ನಡೆಸಲಾಗುತ್ತಿದೆ. ಇದನ್ನು ಅರ್ಥ ಮಾಡಿಕೊಂಡು ವಿದ್ಯಾರ್ಥಿಗಳು ಎಲ್ಲ ಚಟುವಟಿಕೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ತಿಳಿಸಿದರು.

ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮಗಳಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿಯೂ ಭಾಗವಹಿಸಿ ಅದರ ಅನುಭವ ಪಡೆದುಕೊಂಡಾಗ ಮಾತ್ರ ಜೀವನದಲ್ಲಿ ಯಶಸ್ಸು ಗಳಿಸಲು ಸಾಧ್ಯ ಎಂದು ಅವರು ಕರೆ ನೀಡಿದರು.

**ಎನ್.ಎಸ್.ಎಸ್ ಶಿಬಿರಗಳಿಂದ ವ್ಯಕ್ತಿತ್ವ ಬೆಳವಣಿಗೆ – ಡಾ.ಎನ್.ಎಸ್.ಕುಮಾರ್**

ಗೌಸಿಯಾ ಎಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲ ಡಾ.ಎನ್.ಎಸ್.ಕುಮಾರ್ ಮಾತನಾಡಿ, ಎನ್‌ಎಸ್‌ಎಸ್ ಶಿಬಿರವು ಅನುಭವ ಆಧಾರಿತ ಶಿಕ್ಷಣ ನೀಡುತ್ತದೆ. ಗ್ರಾಮೀಣ ಬದುಕು, ಸಂಸ್ಕೃತಿಯ ಪರಿಚಯ ಆಗಲಿದೆ. ಶಿಬಿರಾರ್ಥಿಗಳ ವ್ಯಕ್ತಿತ್ವ ಬೆಳವಣಿಗೆ ಹೊಂದಲಿದೆ. ಎನ್‌ಎಸ್‌ಎಸ್ ಶಿಬಿರಾರ್ಥಿಯು ಮುಂದಿನ ದಿನಗಳಲ್ಲಿ ಸಮಾಜ ಮುಖಿಯಾಗಿ ಕೆಲಸ ಮಾಡಲು ಪ್ರೇರಣೆ ಸಿಗಲಿದೆ ಎಂದರು.

ಕಲಿಕೆ ವಿದ್ಯಾರ್ಥಿ, ಶಿಕ್ಷಕರ ನಡುವಿನ ಕೊಂಡಿ ಆಗಿರದೆ ಸಮುದಾಯದ ನಡುವೆಯೂ ರಚನಾತ್ಮಕ ಸಂಬಂಧ ಏರ್ಪಡಬೇಕು ಎನ್ನುವ ಆಶಯದೊಂದಿಗೆ ಎನ್‌ಎಸ್‌ಎಸ್ ಶಿಬಿರ ನಡೆಸಲಾಗುತ್ತದೆ. ಗ್ರಾಮದ ಸ್ವಚ್ಛತೆ ಕೆಲಸದ ಜತೆ ಗ್ರಾಮೀಣರಲ್ಲಿ ಆರೋಗ್ಯ ಅರಿವು, ಮೌಢ್ಯತೆ ಹೋಗಲಾಡಿಸುವುದು, ಕಂದಾಚಾರಕ್ಕೆ ವಿರುದ್ಧವಾಗಿ ಯುವಕರ ಪ್ರೇರಣೆ ಹೀಗೆ ಹಲವು ಮಾರ್ಗದಲ್ಲಿ ಯುವ ಜನತೆ ತಮ್ಮನ್ನು ತೊಡಗಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

**ಸಾಮಾಜಿಕ ಹೊಣೆಗಾರಿಕೆ ಕಲಿಸುತ್ತದೆ–ಡಾ.ಸೈಫುಲ್ಲಾ ಖಾನ್**

ಕಾಲೇಜಿನ ಎನ್‌ಎಸ್‌ಎಸ್ ಅಧಿಕಾರಿ ಡಾ. ಸೈಫುಲ್ಲಾ ಖಾನ್ ಮಾತನಾಡಿ, ಗ್ರಾಮೀಣ ಭಾಗದಲ್ಲಿ ಸೇವೆ ಮಾಡುವ ಅವಕಾಶ ಎಲ್ಲ ವಿದ್ಯಾರ್ಥಿಗಳಿಗೆ ಲಭಿಸುವುದಿಲ್ಲ. ರಾಷ್ಟ್ರೀಯ ಸೇವಾ ಯೋಜನೆಯ ಮೂಲಕ ಇಂತಹ ಸದವಕಾಶ ಲಭ್ಯವಾಗುತ್ತಿದ್ದು, ಇದರಿಂದ ಎನ್ ಎಸ್ ಎಸ್ ವಿದ್ಯಾರ್ಥಿಗಳು ಇತರ ವಿದ್ಯಾರ್ಥಿಗಳಿಂದ ವಿಭಿನ್ನವಾಗಿರುತ್ತಾರೆ, ಇಂತಹ ಶಿಬಿರಗಳಲ್ಲಿ ಭಾಗವಹಿಸುವ ಮೂಲಕ ಸಾಮಾಜಿಕ ಹೊಣೆಗಾರಿಕೆಯನ್ನು ಕಲಿಯಬಹುದು ಎಂದು ತಿಳಿಸಿದರು.

ಭೌತಶಾಸ್ತ್ರ ಪ್ರಾಧ್ಯಾಪಕ ಡಾ.ಅಫ್ಸರ್ ಪಾಷ ಮಾತನಾಡಿ, ಸೇವೆ ಎಂಬುದು ಕೇವಲ ಕರ್ತವ್ಯ ಅಲ್ಲ, ಅದು ಮಾನವೀಯತೆಯ ಪ್ರತೀಕ. ಸೇವೆ ಮಾಡಲು ಎನ್‌ಎಸ್‌ಎಸ್ ಒಂದು ಸದವಕಾಶ ಕಲ್ಪಿಸುತ್ತದೆ. ಜೀವನ ಮೌಲ್ಯಗಳನ್ನು ರೂಢಿಸಿಕೊಂಡು ಮುಂದೆ ಬರಲು ಉತ್ತಮ ವೇದಿಕೆ ಇದಾಗಿದೆ ಎಂದು ಹೇಳಿದರು.

ಕಾಲೇಜಿನ ಸಿಎಸ್ ಅಂಡ್ ಇ ವಿಭಾಗದ ಪ್ರಾಧ್ಯಾಪಕ ಡಾ.ಟಿ.ವೆಂಕಟೇಶ್, ಡಿಪ್ಲೋಮಾ ವಿಭಾಗದ ಮುಖ್ಯಸ್ಥೆ ಲತಾಮಣಿ, ಯೋಗ ತರಬೇತಿದಾರರಾದ ಸತೀಶ್, ಶ್ರೀ ವಿನಾಯಕ ಪ್ರೌಢಶಾಲೆ ಮುಖ್ಯೋಪಾಧ್ಯಾಯ ಶಿವಲಿಂಗಯ್ಯ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮುಖ್ಯೋಪಾಧ್ಯಾಯ ಜಯರಾಮು ಮತ್ತಿತರರು ಉಪಸ್ಥಿತರಿದ್ದರು.




### ಏಳು ದಿನಗಳ ಶಿಬಿರ, ವಿವಿಧ ಕಾರ್ಯಕ್ರಮ

ರಾಮನಗರ ಗೌಸಿಯಾ ಎಂಜಿನಿಯರಿಂಗ್ ಕಾಲೇಜು ಹಾಗೂ ಬೆಳಗಾವಿ ವಿಶ್ವೇಶ್ವರಯ್ಯ ಟೆಕ್ನಿಕಲ್ ಯುನಿವರ್ಸಿಟಿ (ವಿಟಿಯು) ಸಹಯೋಗದಲ್ಲಿ ತಾಲೂಕಿನ ಹೊಂಬೇಗೌಡನ ದೊಡ್ಡಿ ಗ್ರಾಮದಲ್ಲಿ 7 ದಿನಗಳ ಕಾಲ ರಾಷ್ಟ್ರೀಯ ಸೇವಾ ಯೋಜನೆ ವಿಶೇಷ ಶಿಬಿರ ಆಯೋಜಿಸಿದೆ. ಜು.23ರಂದು ಉಚಿತ ವೈದ್ಯಕೀಯ ತಪಾಸಣಾ ಶಿಬಿರ, ಜು.24ರಂದು ತಂಬಾಕು – ಡ್ರಗ್ಸ್ ಕುರಿತು ಅರಿವು, ಜು.25ರಂದು ಯೋಗಾ ಮತ್ತು ಕ್ರೀಡಾ ಕಾರ್ಯಕ್ರಮ, ಜು.26ರಂದು ಪರಿಸರ ಜಾಗೃತಿ, ಜು.27ರಂದು ವಿಜ್ಞಾನ ವಸ್ತು ಪ್ರದರ್ಶನ, ಜು.28ರಂದು ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಸಮಾರೋಪ ಸಮಾರಂಭ ನಡೆಯಲಿದೆ.

### ಯುವ ಶಕ್ತಿ ಸದ್ಬಳಕೆಯಾದರೆ, ಮಹತ್ತರ ಕಾರ್ಯ ಸಾಧನೆ

ದೇಶದಲ್ಲಿ ಯುವ ಶಕ್ತಿ ಸರಿಯಾದ ರೀತಿಯಲ್ಲಿ ಬಳಕೆಯಾದರೆ ಮಾತ್ರ ಮಹತ್ತರ ಕಾರ್ಯ ಸಾಧಿಸಬಹುದು. ವಿದ್ಯಾರ್ಥಿಗಳ ಭವಿಷ್ಯದ ಜೀವನ ಸುವ್ಯವಸ್ಥಿತವಾಗಿ ನಡೆಸಲು ಇಂತಹ ಶಿಬಿರಗಳು ಸಹಕಾರಿಯಾಗಲಿವೆ. ಉದ್ಯೋಗ ಪಡೆಯುವುದಕ್ಕೆ ಪಠ್ಯ ನೆರವಿಗೆ ಬಂದರೆ, ಜೀವನ ನಡೆಸುವುದಕ್ಕೆ ಪಠ್ಯೇತರ ಚಟುವಟಿಕೆ ಸಹಕಾರಿ ಆಗುತ್ತದೆ. ಹೀಗಾಗಿ ಶಿಬಿರದ ಪ್ರತಿಕ್ಷಣ ತಮ್ಮನ್ನು ತೊಡಗಿಸಿಕೊಳ್ಳಬೇಕು. ಆಗ ಸಾರ್ಥಕತೆ ಸಿಗುತ್ತದೆ ಎಂದು ಏಜಾಜ್ ಅಹಮದ್ ಹೇಳಿದರು.



## ಕೃಷ್ಣವಂದನ

ಸ್ನೇಹಾ ಆನಂದ್



### ಹೇ ಕೃಷ್ಣಾ!

ಹೇಗೆ ಇದ್ದರೂ ಎನ್ನ ಮನದೊಳು
ನೀನೇ ಇರುವೆಯೋ ಮೋಹನ।
ಗೆಲುವು ನಿನ್ನದೆ, ಸೋಲು ನಿನ್ನದೆ
ನನ್ನದೆಲ್ಲವೂ ನಿನ್ನದು।
ನನ್ನ ಮನಸಿನ ಭಾವಗೀತೆಗೆ
ನಿನ್ನ ಸ್ಫೂರ್ತಿಯೇ ಎನ್ನದು॥
ಸುಪ್ತ ಮನಸಿನ ಕನಸುಗಳಿಗೆ
ನೀನು ಕೊಡುವೆಯೋ ಚಾಲನೆ।
ಹುಟ್ಟು ಹಾಕಿದ ಭಾವಗಳಿಗೆ
ನೀನೇ ಮಾಡುವೆ ಪಾಲನೆ॥
ಎನ್ನ ಮನದಾ ಕಂಗಳನ್ನು
ತೆರೆದು ಬಿಡುವೆಯೋ ಸಮಯಕೆ!
ಕೆಟ್ಟ ಯೋಚನೆಯನ್ನು ಸುಟ್ಟು
ಇಟ್ಟು ಸಲಹಿದೋ ಜತನದಿ ॥
ನಿನ್ನ ಸೇವಕ ನಾನು ಎಂದು
ಎನ್ನದೋ ಇದು ಅಭಿಮಾನವು।
ಕುಗ್ಗಿ ಹೋಗುವ ಎನ್ನ ಮನವನು
ಹಿಗ್ಗಿಸಿವೆಯೋ ಕರುಣದಿ॥

## ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಮಾವು ಬೆಳೆ ವಿಮಾ ಯೋಜನೆ–2026

**ರಾಮನಗರ:** 2026–27ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಮಾವು ಬೆಳೆ ವಿಮೆ ಯೋಜನೆಯ ಅನುಷ್ಠಾನಗೊಳಿಸಲಾಗುತ್ತಿದ್ದು, ಬೆಂಗಳೂರು ದಕ್ಷಿಣ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಎಲ್ಲಾ ಪಂಚಾಯಿತಿ ಹಾಗೂ ನಗರ ಸ್ಥಳೀಯ ಆಡಳಿತ ಸಂಸ್ಥೆಗಳನ್ನು ಮಾವು ಬೆಳೆಯ ವಿಮಾ ವ್ಯಾಪ್ತಿಗೆ ಒಳಪಡಿಸಲಾಗಿದೆ.

ರೈತರು ಉಳಿತಾಯ ಖಾತೆ ಹೊಂದಿರುವ ಬ್ಯಾಂಕ್‌ಗಳ ಮೂಲಕ ವಿಮಾ ಕಂತು ಪಾವತಿಸಿ ಯೋಜನೆಯಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ಸಾಮಾನ್ಯ ಸೇವಾ ಕೇಂದ್ರಗಳು ಹಾಗೂ ಗ್ರಾಮ ಒನ್‌ಗಳ ಮೂಲಕವೂ ವಿಮಾ ನೋಂದಣಿಗೆ ಅವಕಾಶ ಕಲ್ಪಿಸಲಾಗಿದೆ.

ನೋಂದಣಿಗೆ ಅವಶ್ಯವಾಗಿ ಬ್ಯಾಂಕ್ ಖಾತೆ, ಪಹಣಿ, ಆಧಾರ್ ಕಾರ್ಡ್‌ಗಳನ್ನು ಹೊಂದಿರಬೇಕು. ಪ್ರತಿ ಎಕರೆಗೆ 1,600 ರೂ. ಪ್ರೀಮಿಯಂ ಪಾವತಿಸಿ, ನೊಂದಣಿ ಮಾಡಿಕೊಳ್ಳಬೇಕಾಗಿದೆ. ವಿಮಾ ಕಂತು ಪಾವತಿಸಲು ಆಗಸ್ಟ್ 30 ಕೊನೆಯ ದಿನವಾಗಿದ್ದು, ಈ ಯೋಜನೆಯ ಉಪಯೋಗವನ್ನು ಎಲ್ಲಾ ರೈತರು ಪಡೆದುಕೊಳ್ಳಬಹುದು.

ಹೆಚ್ಚಿನ ಮಾಹಿತಿಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ), ರಾಮನಗರ. ಮೊ.ಸಂಖ್ಯೆ: 9945424437, ಚನ್ನಪಟ್ಟಣ ಮೊ.ಸಂಖ್ಯೆ: 9901367430, ಮಾಗಡಿ ಮೊ.ಸಂಖ್ಯೆ: 9620696196 ಅಥವಾ ಕನಕಪುರ ಮೊ.ಸಂಖ್ಯೆ: 9632410677 ಅನ್ನು ಸಂಪರ್ಕಿಸುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ತೋಟಗಾರಿಕೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




**ಬೆಂಗಳೂರು ನಗರ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ರಸ್ತೆ ಸುರಕ್ಷತೆಯ ಬಗ್ಗೆ ನೀಡಿರುವ ನಿರ್ದೇಶನಗಳು ಹಾಗೂ ಸೂಚನೆಗಳನ್ನು ಅನುಷ್ಠಾನಗೊಳಿಸುವ ಸಂಬಂಧ ಕರೆಯಲಾಗಿದ್ದ ರಸ್ತೆ ಸುರಕ್ಷತಾ ಸಮಿತಿಯ ಸಭೆಯನ್ನು ಬೆಂಗಳೂರು ನಗರ ಜಿಲ್ಲಾಧಿಕಾರಿಗಳಾದ ಕಾಂತರಾಜು ಪಿ. ಎಸ್ ರವರ ಅಧ್ಯಕ್ಷತೆಯಲ್ಲಿ ಹಮ್ಮಿಕೊಳ್ಳಲಾಗಿತ್ತು. ಇದೆ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಲಕ್ಷ್ಮಿನಾರಾಯಣ ಎ. ವಿ., ಮಾಗಡಿ ಹಾಗೂ ರಾಮನಗರ ರಸ್ತೆಯ ಡಿಸಿಪಿ ರವಿ.ಪಿ, ಆನೇಕಲ್ ಉಪವಿಭಾಗ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪುರುಷೋತ್ತಮ ಜಿ.ಪಿ., ಯಲಹಂಕ ಆರ್‌ಟಿಒ ಅಮರೇಶ್ ಛತ್ರ, ರವರು ಉಪಸ್ಥಿತರಿದ್ದರು.**

## ಇಂದು ಚಲಚಿತ್ರಗೀತೆಗಳ ಗಾಯನ

**ಮೈಸೂರು:** ಮೈಸೂರು ಸಿಂಗಿಂಗ್ ಸೋಲ್‌ಮೇಟ್ಸ್ ಸಂಸ್ಥೆ ವತಿಯಿಂದ ಜು.25 ರ ಸಂಜೆ 5.30 ರಿಂದ ರಾತ್ರಿ 9 ರವರೆಗೆ ಅನಂತನಾಗ್ ಹಾಗೂ ಲಕ್ಷ್ಮಿ ಜೋಡಿ ನಟಿಸಿರುವ ಹಿಟ್ಸ್ ಚಿತ್ರಗಳ ಗೀತೆ ಗಾಯನವನ್ನು ಅನಂತ್ ನಾಗ್ ಮತ್ತು ಲಕ್ಷ್ಮಿ ಅನುರಾಗ ಶೀರ್ಷಿಕೆ ಅಡಿಯಲ್ಲಿ ನಾದ ಬ್ರಹ್ಮ ಸಂಗೀತ ಸಭಾದಲ್ಲಿ ಆಯೋಜಿಸಲಾಗಿದೆ ಎಂದು ಹಿರಿಯ ಸದಸ್ಯ ಡಾ.ರವೀಂದ್ರಕುಮಾರ್ ತಿಳಿಸಿದರು.

ತಮ್ಮ ಸಂಸ್ಥೆಯಲ್ಲಿರುವವರು ವೈದ್ಯರು, ಎಂಜಿನಿಯರ್‌ಗಳು, ಗೃಹಿಣಿಯರು ಮೊದಲಾದವರೇ ಆಗಿದ್ದು, ಇವರಾರೂ ಸಂಗೀತ ಕಲಿತವರಲ್ಲ. ಅಂದಿನ ಕಾರ್ಯಕ್ರಮಕ್ಕೆ ಎಲ್ಲರಿಗೂ ಉಚಿತ ಪ್ರವೇಶವಿದೆ ಎಂದು ಮಾಹಿತಿ ನೀಡಿದರು. ಜಾಯ್ಸ್, ಆದಿಲ್ ಪಾಷ ಇದ್ದರು.

## "ಮತದಾರರ ಪಟ್ಟಿಯಿಂದ ಹೆಸರು ಬಿಟ್ಟು ಹೋಗದಂತೆ ಎಚ್ಚರ" ಮತದಾರರ ನೋಂದಣಾಧಿಕಾರಿ ಮುನಿರಾಜು ಸೂಚನೆ

**ಹನೂರು:** ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ವೇಳೆ ಅರ್ಹ ಮತದಾರರ ಹೆಸರು ಬಿಟ್ಟು ಹೋಗದಂತೆ ಬಿಎಲ್‌ಒ, ರಾಜಕೀಯ ಪಕ್ಷದ ಮುಖಂಡರು ಹಾಗೂ ಮತದಾರರು ಎಚ್ಚರಿಕೆ ವಹಿಸಬೇಕು ಎಂದು ಹನೂರು ವಿಧಾನಸಭಾ ಕ್ಷೇತ್ರದ ಮತದಾರರ ನೋಂದಣಾಧಿಕಾರಿ ಮುನಿರಾಜು ತಿಳಿಸಿದರು.



ಹನೂರು ಪಟ್ಟಣದ ಲೋಕೋಪಯೋಗಿ ವಸತಿಗೃಹದಲ್ಲಿ ಎಸ್‌ಐಆರ್ ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಹನೂರು ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 254 ಮತಗಟ್ಟೆಗಳಿದ್ದು, 2,24,616 ಮತದಾರರಿದ್ದಾರೆ. ಇದರಲ್ಲಿ 1,76,208 ಮತದಾರರನ್ನು ಈಗಾಗಲೇ ಗಣಕೀಕರಣ ಮಾಡಲಾಗಿದೆ. ಬಾಕಿ ಇರುವ 37,858 ಮತದಾರರನ್ನು ಗಣಕೀಕರಣ ಮಾಡಲು ರಾಜಕೀಯ ಪಕ್ಷದ ಮುಖಂಡರು ಮತ್ತು ಬಿಎಲ್‌ಒ ಸೇರಿದಂತೆ ಎಲ್ಲರ ಸಹಕಾರ ಅತಿ ಮುಖ್ಯ ಎಂದು ಮನವಿ ಮಾಡಿದರು.

ತಹಸೀಲ್ದಾರ್ ಚೈತ್ರ, ಗ್ರೇಡ್–2 ತಹಸೀಲ್ದಾರ್ ಪ್ರಕಾಶ್, ಉಪ ತಹಸಿಲ್ದಾರ್ ಸುರೇಖಾ ಚುನಾವಣೆ ಶಾಖೆಯ ಗ್ರಾಮ ಅಧಿಕಾರಿ ಲೋಕೇಶ್ ಇದ್ದರು.

# ರೈತ ಮುಖಂಡರಿಗೆ ಅವಮಾನ: ಶಾಸಕ ಗಣೇಶ್ ಪ್ರಸಾದ್ ಕ್ಷಮೆಯಾಚಿಸಲಿ: ನಿರಂಜನ್ ಕುಮಾರ್ ಆಗ್ರಹ

**ಗುಂಡ್ಲುಪೇಟೆ:** ರೈತ ಸಂಘದ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ರೈತ ಮುಖಂಡರಿಗೆ ಅವಮಾನ ಮಾಡಿರುವುದು ಖಂಡನೀಯವಾಗಿದ್ದು, ಶಾಸಕ ಎಚ್.ಎಂ.ಗಣೇಶ್ ಪ್ರಸಾದ್ ಅವರು ರೈತರ ಕ್ಷಮೆಯಾಚಿಸಬೇಕು ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಹಾಗೂ ಮಾಜಿ ಶಾಸಕ ಸಿ.ಎಸ್.ನಿರಂಜನ್ ಕುಮಾರ್ ಆಗ್ರಹಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ತಾಲೂಕು ಕಚೇರಿ ಎದುರು ನಡೆದ ರೈತ ಸಂಘದ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ವಿವಿಧ ಜಿಲ್ಲೆಗಳು ಹಾಗೂ ತಾಲೂಕುಗಳಿಂದ ರೈತ ಮುಖಂಡರು ಭಾಗವಹಿಸಿದ್ದರು. ಕಾರ್ಯಕ್ರಮಕ್ಕೆ ಆಗಮಿಸಿದ ಶಾಸಕ ಗಣೇಶ್ ಪ್ರಸಾದ್ ಅವರನ್ನು ರೈತರು ಕೆರೆಗಳಿಗೆ ನೀರು ತುಂಬಿಸುವುದು, ಹಂಗಳ ಗ್ರಾಮದ ಕುಡಿಯುವ ನೀರಿನ ಸಮಸ್ಯೆ ಹಾಗೂ ಬಸ್ ನಿಲ್ದಾಣ ನಿರ್ಮಾಣ ಕುರಿತು ಪ್ರಶ್ನಿಸಿದ ವೇಳೆ, ಶಾಸಕರು ತಾಳ್ಮೆಯಿಂದ ಉತ್ತರಿಸುವ ಬದಲು ಅಸಮಾಧಾನ ವ್ಯಕ್ತಪಡಿಸಿ ಸ್ಥಳದಿಂದ ತೆರಳಿದರು ಎಂದು ಆರೋಪಿಸಿದರು.

ಬಳಿಕ ಶಾಸಕರ ಬೆಂಬಲಿಗರು ರೈತ ಮುಖಂಡರೊಂದಿಗೆ ವಾಗ್ವಾದ ನಡೆಸಿ ತಳ್ಳಾಟ–ನೂಕಾಟ ನಡೆಸಿರುವುದು ಖಂಡನೀಯ. ಅನ್ನ ನೀಡುವ ರೈತರನ್ನೇ ಅವಮಾನಿಸುವುದು ಇಡೀ ರೈತ ಸಮುದಾಯಕ್ಕೆ ಮಾಡಿದ ಅಪಮಾನವಾಗಿದೆ. ಘಟನೆಗೆ ಕಾರಣರಾದ ಕಾಂಗ್ರೆಸ್ ಕಾರ್ಯಕರ್ತರ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.



ತಾಲೂಕಿನಲ್ಲಿ ಕಳೆದ ಮೂರು ವರ್ಷಗಳಿಂದ ಕೆರೆಗಳಿಗೆ ನೀರು ತುಂಬಿಸುವ ಕಾರ್ಯ ಸಮರ್ಪಕವಾಗಿ ನಡೆಯುತ್ತಿಲ್ಲ. ಹಂಗಳ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ, ಬಸ್ ನಿಲ್ದಾಣ ನಿರ್ಮಾಣ, ಹದಗೆಟ್ಟ ರಸ್ತೆಗಳ ಅಭಿವೃದ್ಧಿ, ರೈತರಿಗೆ ಪರಿಹಾರ ಹಾಗೂ ಜಾನುವಾರುಗಳಿಗೆ ಮೇವು ಸೇರಿದಂತೆ ಹಲವು ಸಮಸ್ಯೆಗಳು ಬಗೆಹರಿಯದೆ ಉಳಿದಿವೆ. ಜನರ ಪ್ರಶ್ನೆಗಳಿಗೆ ಉತ್ತರಿಸುವ ಬದಲು ಅವುಗಳಿಂದ ತಪ್ಪಿಸಿಕೊಳ್ಳುವುದು ಜನಪ್ರತಿನಿಧಿಗೆ ಶೋಭೆಯಲ್ಲ ಎಂದು ಟೀಕಿಸಿದರು.

ಕೇರಳಕ್ಕೆ ಜಾನುವಾರು ಸಾಗಣೆ, ಅಕ್ರಮ ಪಡಿತರ ಅಕ್ಕಿ ಸಾಗಣೆ, ಗಾಂಜಾ, ಲಾಟರಿ ಹಾಗೂ ಖನಿಜ ಸಂಪತ್ತಿನ ಅಕ್ರಮ ಲೂಟಿಯಂತಹ ಪ್ರಕರಣಗಳ ವಿರುದ್ಧ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಪಕ್ಕದ ತಾಲೂಕುಗಳಲ್ಲಿ ಕೆರೆಗಳಿಗೆ ನೀರು ತುಂಬಿಸಲಾಗುತ್ತಿದ್ದು, ಗುಂಡ್ಲುಪೇಟೆ ತಾಲೂಕಿನ ರೈತರು ಮಾತ್ರ ನೀರಿಗಾಗಿ ಪರದಾಡುವಂತಾಗಿದೆ. ರೈತರನ್ನು ಗೌರವದಿಂದ ಕಾಣಬೇಕು ಹಾಗೂ ನಡೆದ ಘಟನೆಗೆ ಶಾಸಕ ಗಣೇಶ್ ಪ್ರಸಾದ್ ಸಾರ್ವಜನಿಕವಾಗಿ ಕ್ಷಮೆಯಾಚಿಸಬೇಕು ಎಂದು ನಿರಂಜನ್ ಕುಮಾರ್ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಮಹದೇವಪ್ರಸಾದ್, ಮಾಜಿ ಪುರಸಭೆ ಅಧ್ಯಕ್ಷ ಜಿಡಿಎಲ್ ಸುರೇಶ್, ಮಾಜಿ ತಾಪಂ ಅಧ್ಯಕ್ಷ ಡಿ. ಮಾದಪ್ಪ (ಸ್ವಾಮಿ), ಅಗತಗೌಡನಹಳ್ಳಿ ಬಸವರಾಜು, ಮಾಜಿ ಪುರಸಭೆ ಸದಸ್ಯ ನಾಗೇಶ್, ಪ್ರಧಾನ ಕಾರ್ಯದರ್ಶಿ ಮಹೇಂದ್ರ, ಮಾಡ್ರಹಳ್ಳಿ ನಾಗೇಂದ್ರ ಸೇರಿದಂತೆ ಬಿಜೆಪಿ ಮುಖಂಡರು ಉಪಸ್ಥಿತರಿದ್ದರು.

## ಎ.ಐ.ಸಿ.ಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅವರ ಹುಟ್ಟು ಆಚರಣೆ



**ಹಾಸನ:** ಎ.ಐ.ಸಿ.ಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅವರ ಹುಟ್ಟು ಹಬ್ಬದ ಅಂಗವಾಗಿ ಜಿಲ್ಲಾ ಕಾಂಗ್ರೆಸ್ ಎಸ್ಸಿ, ಎಸ್ಟಿ ಘಟಕದ ವತಿಯಿಂದ ಬುಧವಾರ ಸಂಜೆ ಜಿಲ್ಲಾಸ್ಪತ್ರೆ ಒಳರೋಗಿಗಳಿಗೆ ಹಣ್ಣುಗಳನ್ನು ವಿತರಿಸಿದರು

ಎಸ್ಸಿ ಎಸ್ಟಿ ಘಟಕದ ಜಿಲ್ಲಾಧ್ಯಕ್ಷ ಮಲ್ಲಿಗೆವಾಳು ದೇವಪ್ಪ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಮುಖಂಡರು ಒಳರೋಗಿಗಳ ಆರೋಗ್ಯ ವಿಚಾರಿಸಿ ಅವರನ್ನು ಸಂತೈಸಿ ಹಣ್ಣುಗಳನ್ನು ವಿತರಿಸಿ ಶೀಘ್ರವಾಗಿ ಗುಣಮುಖರಾಗಿ ಎಂದು ಶುಭ ಹಾರೈಸಿದರು

ಬಳಿಕ ಮಾತನಾಡಿದ ಮಲ್ಲಿಗೆವಾಳು ದೇವಪ್ಪ, ಇಂದು ಮಲ್ಲಿಕಾರ್ಜುನ ಖರ್ಗೆ ಅವರಿಗೆ 84ನೇ ಹುಟ್ಟುಹಬ್ಬ, ಅವರ ಹುಟ್ಟು ಹಬ್ಬದ ಅಂಗವಾಗಿ ಜಿಲ್ಲಾಸ್ಪತ್ರೆಯ ಒಳ ರೋಗಿಗಳಿಗೆ ಹಣ್ಣುಗಳನ್ನು ವಿತರಿಸುವ ಮೂಲಕ ಅವರ ಹುಟ್ಟುಹಬ್ಬವನ್ನು ಆಚರಿಸಲಾಗುತ್ತಿದೆ, ಕಾಂಗ್ರೆಸ್ ಪಕ್ಷಕ್ಕೆ ಅವರ ಕೊಡುಗೆ ಅಪಾರವಾಗಿದೆ ಮುಂದಿನ ದಿನಗಳಲ್ಲಿ ಇನ್ನಷ್ಟು ರಾಜಕೀಯ ಭವಿಷ್ಯ ಉಜ್ವಲವಾಗಲಿ ಎಂದು ಹಾರೈಸಿದರು

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ, ನಾಯಕರ ಹಳ್ಳಿ, ವೆಂಕಟೇಶ್, ರಮೇಶ್, ಕರುಣಾಕರ ಅತ್ನಿ, ಸುನಿಲ್, ಶಂಕರ್, ಹರ್ಷ, ಇತರರು ಇದ್ದರು.

# ವ್ಯಾಜ್ಯ ವಿವಾದಗಳ ಪರಿಹಾರಕ್ಕೆ ಮಧ್ಯಸ್ಥಿಕೆ ಉತ್ತಮ ಮಾರ್ಗವಾಗಿದೆ: ಸುಬ್ರಮಣ್ಯ ಜೆ.ಎನ್

**ಮಂಡ್ಯ:** ನ್ಯಾಯಾಲಯಗಳಲ್ಲಿ ದೀರ್ಘಕಾಲ ಬಾಕಿ ಉಳಿಯುವ ವ್ಯಾಜ್ಯಗಳಿಗೆ ಪರ್ಯಾಯವಾಗಿ ಮಧ್ಯಸ್ಥಿಕೆ (Mediation) ವ್ಯವಸ್ಥೆ ಪರಿಣಾಮಕಾರಿ ಹಾಗೂ ಜನಸ್ನೇಹಿ ಪರಿಹಾರ ಮಾರ್ಗವಾಗಿ ರೂಪುಗೊಳ್ಳುತ್ತಿದ್ದು, ಸಮಾಜದಲ್ಲಿ ಸೌಹಾರ್ದಯುತ ವಿವಾದ ಪರಿಹಾರದ ಸಂಸ್ಕೃತಿಯನ್ನು ಬೆಳೆಸಲು ಮಧ್ಯಸ್ಥಿಕೆ ತರಬೇತಿಗಳು ಮಹತ್ವದ ಪಾತ್ರವಹಿಸುತ್ತಿವೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಸುಬ್ರಮಣ್ಯ ಜೆ.ಎನ್. ರವರು ತಿಳಿಸಿದರು.

ನಗರದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಎಡಿಆರ್ (ಏಆಖ) ಕಟ್ಟಡದಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಂಡ್ಯ, ವಕೀಲರ ಸಂಘ, ಮಂಡ್ಯ ಹಾಗೂ ಕರ್ನಾಟಕ ಮಧ್ಯಸ್ಥಿಕೆ ಕೇಂದ್ರ, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಮಂಡ್ಯ, ರಾಮನಗರ ಮತ್ತು ಹಾಸನ ಜಿಲ್ಲೆಗಳ ನೂತನ ಮಧ್ಯಸ್ಥಿಕೆದಾರರ 40 ಗಂಟೆಗಳ ಮಧ್ಯಸ್ಥಿಕೆ ತರಬೇತಿ ಕಾರ್ಯಾಗಾರ–2026 ಉದ್ಘಾಟಿಸಿ ಅವರು ಮಾತನಾಡಿದರು.

ಮಧ್ಯಸ್ಥಿಕೆ ಪ್ರಕ್ರಿಯೆಯು ನ್ಯಾಯಾಲಯಗಳ ಮೇಲಿನ ಒತ್ತಡವನ್ನು ಕಡಿಮೆ ಮಾಡುವುದರ ಜೊತೆಗೆ, ವಿವಾದದಲ್ಲಿರುವ ಎರಡೂ ಪಕ್ಷಗಳ ನಡುವೆ ಪರಸ್ಪರ ವಿಶ್ವಾಸ, ಸಹಕಾರ ಮತ್ತು ಬಾಂಧವ್ಯವನ್ನು ಉಳಿಸಿಕೊಂಡೇ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ನೆರವಾಗುತ್ತದೆ ಎಂದು ತಿಳಿಸಿದರು.



ಕಾರ್ಯಾಗಾರದಲ್ಲಿ ಮಧ್ಯಸ್ಥಿಕೆಯ ತತ್ವಗಳು, ಪರಿಣಾಮಕಾರಿ ಸಂವಹನ ಕೌಶಲ್ಯ, ಸಮಾಲೋಚನಾ ವಿಧಾನಗಳು, ವಿವಾದ ನಿರ್ವಹಣಾ ತಂತ್ರಗಳು, ನೈತಿಕ ಮೌಲ್ಯಗಳು ಹಾಗೂ ಪ್ರಾಯೋಗಿಕ ಮಾದರಿ ಪ್ರಕರಣಗಳ ಮೂಲಕ ಸಮಗ್ರ ತರಬೇತಿ ನೀಡಲಾಗುತ್ತಿದೆ. ನ್ಯಾಯಾಧೀಶರು, ವಕೀಲರು, ಕಾನೂನು ವಿದ್ಯಾರ್ಥಿಗಳು ಹಾಗೂ ವಿವಿಧ ಕ್ಷೇತ್ರಗಳ ವೃತ್ತಿಪರರು ಭಾಗವಹಿಸಿ ಮಧ್ಯಸ್ಥಿಕೆ ಪ್ರಕ್ರಿಯೆಯ ಸೂಕ್ಷ್ಮ ಅಂಶಗಳನ್ನು ಅರಿತುಕೊಳ್ಳಲಿದ್ದಾರೆ ಎಂದರು.

ಮಧ್ಯಸ್ಥಿಕೆ ಮೂಲಕ ಪ್ರಕರಣಗಳನ್ನು ತ್ವರಿತವಾಗಿ, ಕಡಿಮೆ ವೆಚ್ಚದಲ್ಲಿ ಮತ್ತು ಪರಸ್ಪರ ಒಪ್ಪಿಗೆಯೊಂದಿಗೆ ಇತ್ಯರ್ಥಗೊಳಿಸಲು ಸಾಧ್ಯವಾಗುತ್ತದೆ. ಇದರಿಂದ ನ್ಯಾಯಾಂಗ ವ್ಯವಸ್ಥೆಯ ಮೇಲಿನ ಒತ್ತಡ ಕಡಿಮೆಯಾಗುವುದರ ಜೊತೆಗೆ ಸಮಾಜದಲ್ಲಿ ಸೌಹಾರ್ದಯುತ ವಾತಾವರಣ ನಿರ್ಮಾಣಕ್ಕೂ ಸಹಕಾರಿಯಾಗಲಿದೆ ಎಂದು ಹೇಳಿದರು.

ವಕೀಲರ ಸಂಘದ ಅಧ್ಯಕ್ಷ ಸತ್ಯಾನಂದ ಟಿ.ಎಸ್. ಮಾತನಾಡಿ, ಐದು ದಿನಗಳ ತರಬೇತಿ ಕಾರ್ಯಾಗಾರವನ್ನು ಎಲ್ಲರೂ ಸದುಪಯೋಗಪಡಿಸಿಕೊಳ್ಳಬೇಕು. ತರಬೇತಿಯ ಮೂಲಕ ಪರಿಣಾಮಕಾರಿ ಮಧ್ಯಸ್ಥಿಕೆದಾರರಾಗಿ ರೂಪುಗೊಂಡು ಪರ್ಯಾಯ ವಿವಾದ ಪರಿಹಾರ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳಾದ ಆನಂದ.ಎಂ, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಸರ್ಕಾರಿ ಅಭಿಯೋಜಕರಾದ ವೆಂಕಟಲಕ್ಷ್ಮಮ್ಮ ಜಿ., ಹಿರಿಯ ಮಧ್ಯಸ್ಥಿಕ ತರಬೇತುದಾರರಾದ ಬೀನಾ ದೇವರಾಜ್ ಮತ್ತು ಗೀತಾದೇವಿ ಎಂ.ಪಾಪಣ್ಣ, ಅನುರಾಧ ಎಸ್.ಆರ್., ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿಗಳಾದ ಸತೀಶ್ ಬಿ. ರವರು ಉಪಸ್ಥಿತರಿದ್ದರು.

## ಜಿಪಂ 2026–27ನೇ ಸಾಲಿನ ಕ್ರಿಯಾ ಯೋಜನೆಗೆ ಅನುಮೋದನೆ

# ಅಭಿವೃದ್ಧಿ ಕಾಮಗಾರಿಗಳಿಗೆ ಹೆಚ್ಚಿನ ಆದ್ಯತೆ: ಜಿಪಂ ಆಡಳಿತಾಧಿಕಾರಿ ಮೀನಾ



**ಮಂಡ್ಯ:** ಜಿಲ್ಲಾ ಪಂಚಾಯಿತಿಯ 2026–27ನೇ ಸಾಲಿನ ಲಿಂಕ್ ಡಾಕ್ಯುಮೆಂಟ್ ಹಾಗೂ ವಾರ್ಷಿಕ ಕ್ರಿಯಾ ಯೋಜನೆಗಳ ಅನುಮೋದನೆಗೆ ಜಿಪಂ ಆಡಳಿತಾಧಿಕಾರಿ ಮನೋಜ್ ಕುಮಾರ್ ಮೀನಾ ಅಧ್ಯಕ್ಷತೆಯಲ್ಲಿ ಸಭೆ ನಡೆಯಿತು

ವಿಡಿಯೋ ಕಾನ್ಫರೆನ್ಸ್ ಮೂಲಕ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾ ಪಂಚಾಯತಿ ಆಡಳಿತಾಧಿಕಾರಿಗಳು, ವಿವಿಧ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಇಲಾಖೆಗಳ ಅಭಿವೃದ್ಧಿ ಕಾಮಗಾರಿಗಳು ಹಾಗೂ ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಸಂಪನ್ಮೂಲಗಳ ಸಮರ್ಪಕ ಬಳಕೆ, ಪ್ರತಿ ಇಲಾಖೆಯ ವೇತನ ಹಾಗೂ ವೇತನೇತರ ಘಟಕಗಳ ಅನುದಾನ ಹಂಚಿಕೆ, ಕ್ರಿಯಾ ಯೋಜನೆಗಳು ಹಾಗೂ ವೆಚ್ಚದ ವಿವರಗಳನ್ನು ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಅಂಶವಾರು ಪರಿಶೀಲಿಸಿ ಇಲಾಖೆಗಳ ನಡುವಿನ ಸಮನ್ವಯ ಮತ್ತು ಗುಣಮಟ್ಟಕ್ಕೆ ಹೆಚ್ಚಿನ ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ಮಮಸೂಚಿಸಿದರು.

ಜಿಲ್ಲಾ ಪಂಚಾಯತ್ ನ ಮಿನಿ ಸಭಾಂಗಣದಲ್ಲಿ ವಿಡಿಯೋ ಸಂವಾದದ ಮೂಲಕ ನಡೆದ ಜಿ.ಪಂ. ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ನಿಗಧಿತ ಕಾಲಮಿತಿಯಲ್ಲಿ ಅನುಷ್ಠಾನಗೊಳಿಸಲು ಕ್ರಮವಹಿಸುವಂತೆ ಸೂಚಿಸಿದರು. ಜಿಲ್ಲೆಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು, ತಮ್ಮ ಇಲಾಖೆಗೆ ಸಂಬಂಧಿಸಿದ ವೇತನ ಮತ್ತು ವೇತನೇತರ ಕಾರ್ಯಕ್ರಮಗಳ ಕುರಿತು ಸಭೆಯಲ್ಲಿ ಮಂಡಿಸಿದರು. ಸದರಿ ಕಾರ್ಯಕ್ರಮಗಳನ್ನು ಪರಿಶೀಲಿಸಿ ಸರ್ಕಾರದ ಮಾರ್ಗಸೂಚಿಗಳನ್ವಯ ಹಾಗೂ ನಿಯಮಾನುಸಾರ ಅನುಷ್ಠಾನಗೊಳಿಸುವಂತೆ ಸೂಚಿಸಿ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿದರು.*

ಪ್ರವಾಹ ಪುನರ್ವಸತಿ ಕೇಂದ್ರಗಳಾಗಿ ಗುರುತಿಸಲ್ಪಟ್ಟ ಶಾಲೆಗಳು, ಅಂಗನವಾಡಿ ಕೇಂದ್ರಗಳು ಹಾಗೂ ಇತರೆ ಸರ್ಕಾರಿ ಕಟ್ಟಡಗಳ ದುರಸ್ತಿ ಮತ್ತು ನಿರ್ವಹಣಾ ಕಾಮಗಾರಿಗಳನ್ನು ವಿ.ಬಿ–ಜಿ ರಾಮ್ ಜಿ ಸೇರಿದಂತೆ ವಿವಿಧ ಯೋಜನೆಗಳೊಂದಿಗೆ ಸಂಯೋಜಿಸಿ ಕೈಗೊಳ್ಳುವ ಸಾಧ್ಯತೆಗಳನ್ನು ಪರಿಶೀಲಿಸುವಂತೆ ಸೂಚಿಸಿದ ಅವರು, ಇದರಿಂದ ಉಳಿಯುವ ಅನುದಾನವನ್ನು ಇತರೆ ಅಗತ್ಯ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಬಳಸಿಕೊಳ್ಳುವಂತೆ ತಿಳಿಸಿದರು.

ಶಿಕ್ಷಣ, ಆರೋಗ್ಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಕ್ರೀಡೆ ಸೇರಿದಂತೆ ವಿವಿಧ ಇಲಾಖೆಗಳ ಕಾರ್ಯಕ್ರಮಗಳು ನೈಜ ಅಗತ್ಯತೆ ಆಧರಿಸಿ ಅನುಷ್ಠಾನಗೊಳ್ಳಬೇಕು. ಫಲಾನುಭವಿ ಆಧಾರಿತ ಯೋಜನೆಗಳಲ್ಲಿ ಪಾರದರ್ಶಕತೆ ಕಾಪಾಡಿ ಅರ್ಹ ಫಲಾನುಭವಿಗಳನ್ನೇ ಆಯ್ಕೆ ಮಾಡಬೇಕು ಎಂದು ನಿರ್ದೇಶನ ನೀಡಿದರು.

ಕ್ರೀಡಾ ಕ್ಷೇತ್ರದಲ್ಲಿ ಸಾಧನೆಗೈದ ಕ್ರೀಡಾಪಟುಗಳು ಹಾಗೂ ಸಂಕಷ್ಟದಲ್ಲಿರುವ ಕ್ರೀಡಾಪಟುಗಳಿಗೆ ಸರ್ಕಾರದ ಯೋಜನೆಗಳ ಸೌಲಭ್ಯಗಳನ್ನು ತಲುಪಿಸುವ ನಿಟ್ಟಿನಲ್ಲಿ ಪರಿಣಾಮಕಾರಿ ಕಾರ್ಯಯೋಜನೆ ರೂಪಿಸುವಂತೆ ಸೂಚಿಸಿದರು.

ಸಭೆಯಲ್ಲಿ ಮಂಡಿಸಲಾದ ಇಲಾಖಾವಾರು ಕ್ರಿಯಾ ಯೋಜನೆಗಳನ್ನು ಪರಿಶೀಲಿಸಿದ ಅಧ್ಯಕ್ಷರು, ಅಗತ್ಯ ತಿದ್ದುಪಡಿಗಳೊಂದಿಗೆ ಯೋಜನೆಗಳಿಗೆ ಅನುಮೋದನೆ ನೀಡಿ, ನಿಗದಿತ ಅವಧಿಯೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಕೆ.ಆರ್. ನಂದಿನಿರವರು ಮಾತನಾಡಿ, 2026–27ನೇ ಸಾಲಿಗೆ ಜಿಲ್ಲಾ ಪಂಚಾಯತಿಗೆ ಒಟ್ಟು 421.70 ಕೋಟಿ ಅನುದಾನ ಹಂಚಿಕೆಯಾಗಿದ್ದು, ವೇತನ, ವೇತನೇತರ ವೆಚ್ಚ, ಎಸ್ಸಿಪಿ, ಟಿಎಸ್ಪಿ, ಸಾಮಗ್ರಿಗಳ ಖರೀದಿ, ಫಲಾನುಭವಿ ಆಧಾರಿತ ಯೋಜನೆಗಳು ಹಾಗೂ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗಾಗಿ ಇಲಾಖಾವಾರು ಕ್ರಿಯಾ ಯೋಜನೆಗಳನ್ನು ಸಿದ್ಧಪಡಿಸಲಾಗಿದೆ ಎಂದು ತಿಳಿಸಿದರು.

ರಸ್ತೆ, ಸೇತುವೆ, ಶಾಲಾ ಕಟ್ಟಡ, ಅಂಗನವಾಡಿ, ಆರೋಗ್ಯ ಸಂಸ್ಥೆಗಳು ಸೇರಿದಂತೆ ವಿವಿಧ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಆದ್ಯತೆ ಮೇರೆಗೆ ಕೈಗೆತ್ತಿಕೊಳ್ಳಲಾಗಿದೆ ಎಂದು ತಿಳಿಸಿದರು.

ವಿ.ಬಿ–ಜಿ ರಾಮ್ ಜಿ ಯೋಜನೆಯಡಿ ಜಿಲ್ಲೆಯ ಶಾಲೆಗಳಲ್ಲಿ ಅಗತ್ಯವಿರುವ 281 ಶೌಚಾಲಯಗಳ ನಿರ್ಮಾಣ ಕಾಮಗಾರಿಗಳನ್ನು ಈ ವರ್ಷ ಕೈಗೆತ್ತಿಕೊಳ್ಳಲಾಗಿದ್ದು, ಡಿಸೆಂಬರ್ ಅಂತ್ಯದೊಳಗೆ ಪೂರ್ಣಗೊಳಿಸಿ ಶಿಕ್ಷಣ ಇಲಾಖೆಗೆ ಹಸ್ತಾಂತರಿಸುವ ಗುರಿ ಹೊಂದಲಾಗಿದೆ ಎಂದು ವಿವರಿಸಿದರು.

ಎಲ್ಲಾ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಇಲಾಖೆ ಅಧಿಕಾರಿಗಳು ಹಾಗೂ ತಾಂತ್ರಿಕ ಸಿಬ್ಬಂದಿಗಳು ಕಡ್ಡಾಯವಾಗಿ ಸ್ಥಳ ಪರಿಶೀಲನೆ ನಡೆಸಿ, ಜಿಪಿಎಸ್ ಆಧಾರಿತ ಛಾಯಾಚಿತ್ರಗಳು ಹಾಗೂ ಅಗತ್ಯ ದಾಖಲೆಗಳೊಂದಿಗೆ ಪ್ರಸ್ತಾವನೆಗಳನ್ನು ಸಲ್ಲಿಸಿರುವುದಾಗಿ ತಿಳಿಸಿದರು. ಶಾಲಾ ಶಿಕ್ಷಣ ಇಲಾಖೆಯಡಿ ಶಾಲೆಗಳ ಅವಶ್ಯಕತೆ ಆಧರಿಸಿ ಕಂಪ್ಯೂಟರ್, ಪ್ರಿಂಟರ್ ಹಾಗೂ ಇತರೆ ಶೈಕ್ಷಣಿಕ ಸಾಮಗ್ರಿಗಳ ಖರೀದಿಗೆ ಕ್ರಮ ಕೈಗೊಳ್ಳಲಾಗುವುದು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವಿವಿಧ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿಯ ಮುಖ್ಯ ಯೋಜನಾಧಿಕಾರಿಗಳಾದ ಧನುಷ್, ಜಿ ಪಂ ಉಪ ಕಾರ್ಯದರ್ಶಿ (ಆಡಳಿತ) ಶಿವಲಿಂಗಯ್ಯ, ಪಿಆರ್ಇಡಿ ಕಾರ್ಯಪಾಲಕ ಅಭಿಯಂತರರಾದ ನಾಗರಾಜು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಜಿಲ್ಲಾ ಅರೋಗ್ಯ ಅಧಿಕಾರಿ, ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು

## ಜಿಲ್ಲೆಯಲ್ಲಿ ಉದ್ದಿಮೆ ಸ್ಥಾಪಿಸುವವರಿಗೆ ಎಲ್ಲ ನೆರವು, ಸಹಕಾರ : ಜಿಲ್ಲಾಧಿಕಾರಿ ಶ್ರೀರೂಪ



**ಚಾಮರಾಜನಗರ:** ಉದ್ದಿಮೆ ಸ್ಥಾಪಿಸುವವರಿಗೆ ಜಿಲ್ಲಾಡಳಿತದಿಂದ ಎಲ್ಲ ಸಹಕಾರ ನೀಡಲಿದ್ದು, ಲಭ್ಯವಿರುವ ಅವಕಾಶಗಳನ್ನು ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿ ಶ್ರೀರೂಪ ಅವರು ಸಲಹೆ ಮಾಡಿದರು.

ನಗರದ ಜೆ.ಎಚ್. ಪಟೇಲ್ ಸಭಾಂಗಣದಲ್ಲಿಂದು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ (ಏಖಈಅ) ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಉದ್ಯಮಶೀಲತೆ ಅಭಿವೃದ್ಧಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯು ಅಭಿವೃದ್ಧಿ ಹೊಂದುತ್ತಿದ್ದು, ಇಲ್ಲಿ ಉದ್ದಿಮೆ, ಕೈಗಾರಿಕೆ ಸ್ಥಾಪನೆಗೆ ಸಾಕಷ್ಟು ಅವಕಾಶಗಳು ಇವೆ. ಜಿಲ್ಲೆಯ ಬೆಳವಣ ಗೆಗೆ ಪೂರಕವಾಗಿರುವ ಉದ್ದಿಮೆಗಳನ್ನು ಆರಂಭಿಸಬಹುದಾಗಿದೆ. ಉದ್ಯಮಗಳನ್ನು ಸ್ಥಾಪಿಸುವುದರಿಂದ ಯುವಜನರಿಗೆ ಉದ್ಯೋಗ ಅವಕಾಶಗಳು ದೊರೆಯಲಿದ್ದು, ಬೇರೆ ಕಡೆಗೆ ವಲಸೆ ಹೋಗುವುದು ತಪ್ಪಲಿದೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಕೈಗಾರಿಕೆ ಚಟುವಟಿಕೆಗಳ ಘಟಕಗಳಿಗೆ ಸಾಲ ಸೌಲಭ್ಯ ಹಾಗೂ ಸಹಾಯಧನ ನೀಡಲಿದೆ. ಮಹಿಳಾ ಉದ್ಯಮಿಗಳಿಗು ಸಹ ಹಣಕಾಸು ನೆರವನ್ನು ಕೊಡಲಾಗುತ್ತಿದ್ದು, ಜಿಲ್ಲೆಯ ಆಸಕ್ತ ಉದ್ದಿಮೆದಾರರು ಇದರ ಸದುಪಯೋಗ ಮಾಡಿಕೊಳ್ಳಬೇಕು. ಉದ್ದಿಮೆದಾರರಿಗೆ ಜಿಲ್ಲಾಡಳಿತ ಅಗತ್ಯವಿರುವ ಎಲ್ಲ ಸಹಾಯ ಸಹಕಾರ ನೀಡಲಿದೆ ಎಂದು ಜಿಲ್ಲಾಧಿಕಾರಿ ಶ್ರೀರೂಪ ಅವರು ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಕೆ.ಎಸ್.ಎಫ್.ಸಿ. ಪ್ರಧಾನ ವ್ಯವಸ್ಥಾಪಕರಾದ ಪಿ.ಎಂ. ಮುರಳೀಧರ್ ಅವರು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಕಳೆದ 67 ವರ್ಷಗಳಿಂದ ಕೈಗಾರಿಕೆ ಚಟುವಟಿಕೆಗಳಿಗೆ ಸಾಲ ಸಹಾಯಧನ ನೀಡುವ ಮೂಲಕ ಹೊಸ ಉದ್ಯೋಗ ಸೃಷ್ಠಿಗೆ ನೆರವಾಗುತ್ತಿದೆ. ಇಂದು ಭಾರತದಲ್ಲಿ ಹೆಸರು ಮಾಡಿರುವ ಹಲವು ಸಂಸ್ಥೆಗಳು ಆರಂಭದಲ್ಲಿ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯಿಂದ ಸಾಲ ಪಡೆದಿದ್ದವು ಎಂಬುದು ಗಮನಾರ್ಹವಾಗಿದೆ ಎಂದರು.

ಜಿಲ್ಲೆಯಲ್ಲಿ ಹಲವು ಕೈಗಾರಿಕೆ ಉದ್ದಿಮೆಗಳನ್ನು ಆರಂಭಿಸಲು ಅವಕಾಶವಿದೆ. ವಿಶೇಷವಾಗಿ ಕೃಷಿ, ಹೈನುಗಾರಿಕೆ ಆಧಾರಿತ ಘಟಕಗಳು, ಗ್ರಾನೈಟ್, ಆಹಾರ ಉದ್ಯಮಗಳನ್ನು ಸ್ಥಾಪಿಸಬಹುದಾಗಿದೆ. ಇಲ್ಲಿ ಸಿದ್ಧ ಉಡುಪುಗಳನ್ನು ತಯಾರಿಸುವ ದೊಡ್ಡ ಮಟ್ಟದ ಗಾರ್ಮೆಂಟ್ಸ್ ಕಂಪನಿಗಳನ್ನು ಆಹ್ವಾನಿಸಬೇಕಿದೆ. ಇದರಿಂದ ಸ್ಥಳೀಯ ಜನರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಪಿ.ಎಂ. ಮುರಳೀಧರ್ ಅವರು ತಿಳಿಸಿದರು.

ಚಾಮರಾಜನಗರದ ಕೆ.ಎಸ್.ಎಫ್.ಸಿ. ಸಹಾಯಕ ಪ್ರಧಾನ ವ್ಯವಸ್ಥಾಪಕರಾದ ಎಂ.ಆರ್. ಪ್ರಮೀಳಾ ಅವರು ಮಾತನಾಡಿ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯು ತ್ವರಿತ ಗತಿಯಲ್ಲಿ ಸಾಲ ಸೌಲಭ್ಯವನ್ನು ಉದ್ದಿಮೆದಾರರಿಗೆ ಒದಗಿಸಲಿದೆ. ಬ್ಯಾಂಕುಗಳಲ್ಲಿ ಅನುಭವ ಹೊಂದಿರುವವರಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಆದರೆ ಕೆ.ಎಸ್.ಎಫ್.ಸಿ ಯಲ್ಲಿ ಮೊದಲ ಬಾರಿಗೆ ಉದ್ದಿಮೆ ಆರಂಭಿಸುವವರಿಗೂ ಸಹ ಆರ್ಥಿಕ ನೆರವು ನೀಡುವ ಮೂಲಕ ಹೆಚ್ಚಿನ ಉತ್ತೇಜನ ಕೊಡುತ್ತಿದೆ ಎಂದರು.

ಜಿಲ್ಲಾ ಕೈಗಾರಿಕಾ ಕೇಂದ್ರದ (ಡಿಐಸಿ) ಜಂಟಿ ನಿರ್ದೇಶಕರಾದ ದೊರೈರಾಜ್, ಕರ್ನಾಟಕ ಕೈಗಾರಿಕೆ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮದ ಮೈಸೂರಿನ ಅಭಿವೃದ್ಧಿ ಅಧಿಕಾರಿ ಕೆ.ಡಿ. ಮಹೇಶ್, ಚಾಸಿಯಾ ಉಪಾಧ್ಯಕ್ಷರಾದ ನರೇಂದ್ರಬಾಬು, ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಮೈಸೂರಿನ ಸಹಾಯಕ ಪ್ರಧಾನ ವ್ಯವಸ್ಥಾಪಕರಾದ ವೇದಾವತಿ, ಚಾಮರಾಜನಗರ ಶಾಖಾ ವ್ಯವಸ್ಥಾಪಕರಾದ ಪುಟ್ಟಮ್ಮಣ್ಣ , ಮೈಸೂರು ಎಸ್ಸಿ ಎಸ್ಟಿ ಕೈಗಾರಿಕೋದ್ಯಮಿಗಳ ಸಂಘದ ಅಧ್ಯಕ್ಷ ವಿಜಯಶಂಕರ್, ವೀರನಪುರ ಸಣ್ಣ ಕೈಗಾರಿಕೆಗಳ ಸಂಘದ ಅಧ್ಯಕ್ಷ ಸದಾಶಿವ, ಜಿಲ್ಲೆಯ ಉದ್ಯಮಿ ನಾಗಯ್ಯ, ಡಿಐಸಿಯ ಸಹಾಯಕ ನಿರ್ದೇಶಕರಾದ ವಿಜಯಕುಮಾರ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

### ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಮಾವು ಬೆಳೆ ವಿಮಾ ಯೋಜನೆ–2026

**ರಾಮನಗರ:** 2026–27ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಮಾವು ಬೆಳೆ ವಿಮೆ ಯೋಜನೆಯ ಅನುಷ್ಠಾನಗೊಳಿಸಲಾಗುತ್ತಿದ್ದು, ಬೆಂಗಳೂರು ದಕ್ಷಿಣ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಎಲ್ಲಾ ಪಂಚಾಯಿತಿ ಹಾಗೂ ನಗರ ಸ್ಥಳೀಯ ಆಡಳಿತ ಸಂಸ್ಥೆಗಳನ್ನು ಮಾವು ಬೆಳೆಯ ವಿಮಾ ವ್ಯಾಪ್ತಿಗೆ ಒಳಪಡಿಸಲಾಗಿದೆ.

ರೈತರು ಉಳಿತಾಯ ಖಾತೆ ಹೊಂದಿರುವ ಬ್ಯಾಂಕ್‌ಗಳ ಮೂಲಕ ವಿಮಾ ಕಂತು ಪಾವತಿಸಿ ಯೋಜನೆಯಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ಸಾಮಾನ್ಯ ಸೇವಾ ಕೇಂದ್ರಗಳು ಹಾಗೂ ಗ್ರಾಮ ಒನ್‌ಗಳ ಮೂಲಕವೂ ವಿಮಾ ನೋಂದಣಿಗೆ ಅವಕಾಶ ಕಲ್ಪಿಸಲಾಗಿದೆ. ನೋಂದಣಿಗೆ ಅವಶ್ಯವಾಗಿ ಬ್ಯಾಂಕ್ ಖಾತೆ, ಪಹಣಿ, ಆಧಾರ್ ಕಾರ್ಡ್‌ಗಳನ್ನು ಹೊಂದಿರಬೇಕು. ಪ್ರತಿ ಎಕರೆಗೆ 1,600 ರೂ. ಪ್ರೀಮಿಯಂ ಪಾವತಿಸಿ, ನೊಂದಣಿ ಮಾಡಿಕೊಳ್ಳಬೇಕಾಗಿದೆ. ವಿಮಾ ಕಂತು ಪಾವತಿಸಲು ಆಗಸ್ಟ್ 30 ಕೊನೆಯ ದಿನವಾಗಿದ್ದು, ಈ ಯೋಜನೆಯ ಉಪಯೋಗವನ್ನು ಎಲ್ಲಾ ರೈತರು ಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ), ರಾಮನಗರ. ಮೊ.ಸಂಖ್ಯೆ: 9945424437, ಚನ್ನಪಟ್ಟಣ ಮೊ.ಸಂಖ್ಯೆ: 9901367430, ಮಾಗಡಿ ಮೊ.ಸಂಖ್ಯೆ: 9620696196 ಅಥವಾ ಕನಕಪುರ ಮೊ.ಸಂಖ್ಯೆ: 9632410677 ಅನ್ನು ಸಂಪರ್ಕಿಸುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ತೋಟಗಾರಿಕೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಸ್ ಜಾನಕಿ: ಗಂಧರ್ವ ಗಾಯಕಿ..! ಕವಿ ಡಾ. ಜಯಪ್ಪ ಹೊನ್ನಾಳಿ

**ಮೈಸೂರು:** ಶರೀರದಿಂದ ದೂರಾದರೂ, ತಮ್ಮ ಅಮೃತ ಶಾರೀರದಿಂದ ಶಾಶ್ವತವಾಗಿ ನಮ್ಮೊಂದಿಗಿರುವ ಎಸ್ ಜಾನಕಿ, ಗಂಧರ್ವ ಗಾಯಕಿ, ಕಲ್ಲು ಕಾಲದೆದೆಯ ಮೇಲೆ ತಮ್ಮ ಸಾಧನೆಯ ಮೂಲಕ ಗಾಯನದ ಸಹಿ ಮಾಡಿ ಕಾಲಾತೀತವಾದ ಅಭಿಜಾತ ನಾದ ದೇವತೆ ಎಂದು ಕವಿ ಡಾ.ಜಯಪ್ಪ ಹೊನ್ನಾಳಿ ಹೇಳಿದರು.

ಡಾ.ರಾಜ್ ಸಿರಿಕಂಠದ ಗಾಯಕ ಮೈಸೂರು ಜಯರಾಂ ಅವರು ತಮ್ಮ 'ಡಾ. ರಾಜಕುಮಾರ್ ಮ್ಯೂಸಿಕಲ್ ಗ್ರೂಪ್, ಮೈಸೂರು' ನಿಂದ ಮೈಸೂರಿನ ಪುರಭವನದಲ್ಲಿ ಏರ್ಪಡಿಸಿದ್ದ "ಗಾನ ಸರಸ್ವತಿ ಎಸ್ ಜಾನಕಮ್ಮನವರ ನೆನಪು" ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡುತ್ತಿದ್ದ ಅವರು, ಇದು ನಿಜಕ್ಕೂ ಅರ್ಥಪೂರ್ಣವಾದ 11 ನೇ ದಿನದ ಸ್ಮರಣೆ ಮತ್ತು ಅಕ್ಷರಶಃ ಅವರಾತ್ಮಕ್ಕೆ ಆನಂದ ಕೊಡುವ ಕಾರ್ಯಕ್ರಮ, ಅವರೆಲ್ಲಿಯೂ ಹೋಗಿಲ್ಲ; ಇಲ್ಲಿ ಹಾಡುತ್ತಿರುವ ಎಲ್ಲರ ಕೊರಳಲ್ಲೂ ಗಾಯನವಾಗುತ್ತಿದ್ದಾರೆ ಎಂದರು.

ದಣಿವರಿಯದೆ 17 ಭಾಷೆಗಳಲ್ಲಿ 48 ಸಾವಿರ ಹಾಡು ಹಾಡಿ, 4 ರಾಷ್ಟ್ರಪ್ರಶಸ್ತಿ, 33 ರಾಜ್ಯ ಪ್ರಶಸ್ತಿಗಳನ್ನು ಪಡೆದು, ಮೈಸೂರು ವಿ ವಿ ಯಿಂದ ಡಾಕ್ಟರೇಟ್ ಪಡೆದು, ಕರ್ನಾಟಕ ಸರ್ಕಾರದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರೂ ಆಗಿ, ಯಾರೂ ಸರಿಗಟ್ಟಲಾರದ ದಾಖಲೆ ಮಾಡಿ, ವಿಶ್ವಮಟ್ಟದ ಗಾಯಕಿ ತಾನೆಂದು ಸಾಬೀತು ಮಾಡಿದ ದಕ್ಷಿಣ ಭಾರತದ ಈ ಕೋಗಿಲೆ, ತನ್ನ ಕೊನೆಗಾಲದಲ್ಲಿ ಮೈಸೂರಿನ ಮಾಮರ ಬಯಸಿ ಬಂದು, ವಿಶ್ರಾಂತಿ ಪಡೆದು, ಏಕಾಂತದ ಸುಖಾಂತ ಅನುಭವಿಸಿ, ಕಾಲನ ಕರೆಗೆ ಓಗೊಟ್ಟು, ಇಲ್ಲಿಗೆ ಹನ್ನೊಂದು ದಿನದ ಹಿಂದೆ ಹಾರಿಹೋಯಿತಾದರೂ, ಗಾನ ಭಾರತದ ಬಾಂದಳದಲ್ಲಿ ಅದೆಂದಿಗೂ ಧ್ರುವತಾರೆಯಂತೆಯೆ ವಿರಾಜಮಾನವಾಗಿರಲಿದೆ ಎಂದು ಬಣ್ಣಿಸಿದರು.




ಅಭಿಮಾನಿ ದೇವರೆಂದವರು ಡಾ.ರಾಜ್, ಅಭಿಮಾನಿ ದೇವರ ಮನೆಯಲ್ಲೇ ಉಳಿದು ಕೊನೆಯುಸಿರೆಳೆದವರು ಡಾ. ಎಸ್ ಜಾನಕಿ. ದಕ್ಷಿಣ ಭಾರತದವರ ಅಥವಾ ಕೇಂದ್ರ ಸರ್ಕಾರದ ಮಲತಾಯಿ ಧೋರಣೆಗೆ ಪ್ರತಿಭಟನೆಯೆಂಬಂತೆ, ದಕ್ಷಿಣ ಭಾರತದ ಸ್ವಾಭಿಮಾನದ ಪ್ರತೀಕವೆಂಬಂತೆ, ತಮಗೆ ತಡವಾಗಿ ಬಂದ ಕೇಂದ್ರದ ಪದ್ಮಭೂಷಣ ಪ್ರಶಸ್ತಿ ತಿರಸ್ಕರಿಸುವ ಮೂಲಕ ತಮ್ಮದೇ ಆದ ಸಾತ್ವಿಕ ದಾಟಿಯಲ್ಲಿ ಪ್ರತಿಕ್ರಿಯಿಸಿ, ತಮ್ಮ ಅಸ್ಮಿತೆ ತೋರಿದ ಎಸ್ ಜಾನಕಿ ಎಂದೆಂದಿಗೂ ವಂದನಾರ್ಹರು, ಹಾಗೆ ನೋಡಿದರೆ ಅವರ ಸಾಧನೆಗೆ ಎಂದೋ ಭಾರತ ರತ್ನ ಪ್ರಶಸ್ತಿ ಬರಬೇಕಿತ್ತು ಎಂದು ವಿಷಾದಿಸಿದರು.

ಮೈಸೂರಿನ, ಕರ್ನಾಟಕ ಸುಗಮ ಸಂಗೀತ ಪರಿಷತ್ತು ಜಿಲ್ಲಾ ಘಟಕದ ಅಧ್ಯಕ್ಷರಾದ ಡಾ.ನಾಗರಾಜ್ ಬೈರಿ ಅವರು ದೀಪ ಬೆಳಗುವ ಮೂಲಕ ಸಮಾರಂಭದ ಉದ್ಘಾಟನೆ ಮಾಡಿ, ಇದೊಂದು ಶ್ಲಾಘನೀಯ ಕಾರ್ಯಕ್ರಮವೆಂದು ಮೆಚ್ಚುಗೆ ವ್ಯಕ್ತಪಡಿಸಿ, ನಿರಂತರವಾಗಿ ಇಂಥ ಅನೇಕ ಕಾರ್ಯಕ್ರಮಗಳನ್ನು ಮಾಡಿಕೊಂಡು ಬರುತ್ತಿರುವುದಕ್ಕಾಗಿ ಮೈಸೂರು ಜಯರಾಂ ಅವರನ್ನು ಅಭಿನಂದಿಸಿ, ಗಾಯಕ ಗಾಯಕಿಯರಿಗೆ ಶುಭ ಕೋರಿದರು.

ಮೈಸೂರಿನ ಅನೇಕ ಗಾಯಕ ಗಾಯಕಿಯರು ಗಾಯನದಲ್ಲಿ ಭಾಗವಹಿಸಿದ್ದರು.

# ಜಾಗತಿಕ 'ಎಲ್ ನಿನೋ' ಹವಾಮಾನ ವೈಪರೀತ್ಯ ಹಾಗೂ ಬರದ ಭೀತಿ

## ಸರ್ಕಾರದಿಂದ ಬೃಹತ್ ಮುನ್ನೆಚ್ಚರಿಕೆ ಕಾರ್ಯತಂತ್ರ


**ಬೆಂಗಳೂರು:** ಜಾಗತಿಕ ಮಟ್ಟದಲ್ಲಿ ತೀವ್ರಗೊಳ್ಳುತ್ತಿರುವ 'ಎಲ್ ನಿನೋ' (El Niño) ಹವಾಮಾನ ವೈಪರೀತ್ಯದ ಪರಿಣಾಮವಾಗಿ ಉಂಟಾಗಬಹುದಾದ ತಾಪಮಾನ ಏರಿಕೆ ಹಾಗೂ ಬರದ ಪರಿಸ್ಥಿತಿಯನ್ನು ಎದುರಿಸಲು ಕರ್ನಾಟಕ ಸರ್ಕಾರವು ಸಮಗ್ರ ಮತ್ತು ದೂರದೃಷ್ಟಿಯ ಕಾರ್ಯತಂತ್ರವನ್ನು ಕೈಗೆತ್ತಿಕೊಂಡಿದೆ.

**ಏನಿದು ಎಲ್ ನಿನೋ:** ದಕ್ಷಿಣ ಪೆಸಿಫಿಕ್ ಮಹಾಸಾಗರದ ಕೇಂದ್ರ ಮತ್ತು ಪೂರ್ವ ಭಾಗಗಳಲ್ಲಿ ಸಮುದ್ರದ ಮೇಲ್ಮೈ ನೀರು ಸಾಮಾನ್ಯಕ್ಕಿಂತ ಹೆಚ್ಚು ಕಾಯುವ ವಿದ್ಯಮಾನವನ್ನು 'ಎಲ್ ನಿನೋ' (ಸ್ಪ್ಯಾನಿಷ್ ಭಾಷೆಯಲ್ಲಿ 'ಪುಟ್ಟ ಬಾಲಕ' ಅಥವಾ 'ಯೇಸು ಕ್ರಿಸ್ತ') ಎನ್ನಲಾಗುತ್ತದೆ.

ಈ ಘಟನೆಯು ಜಾಗತಿಕ ಗಾಳಿಯ ಮಾದರಿ ಹಾಗೂ ಮಳೆಯ ಪ್ರಮಾಣವನ್ನು ಏರುಪೇರು ಮಾಡುತ್ತದೆ. ಕಳೆದ 150 ವರ್ಷಗಳಲ್ಲೇ ಅತ್ಯಂತ ಪ್ರಬಲ ಎಲ್ ನಿನೋ ಆವರಿಸುವ ಸಾಧ್ಯತೆಯಿದೆ ಎಂದು ತಜ್ಞರು ಎಚ್ಚರಿಸಿದ್ದಾರೆ.

ಇದರ ಪರಿಣಾಮವಾಗಿ ಭಾರತದಲ್ಲಿ, ವಿಶೇಷವಾಗಿ ಕರ್ನಾಟಕದಲ್ಲಿ ನೈಋತ್ಯ ಮುಂಗಾರು ಮಳೆ ಕ್ಷೀಣಿಸಿ ಬರದ ಛಾಯೆ ಮೂಡುವ ಭೀತಿ ಎದುರಾಗಿದೆ.

**ತಾಪಮಾನ ಏರಿಕೆ ಮತ್ತು ಬರದ ಮುನ್ನೆಚ್ಚರಿಕೆ:** ಭಾರತೀಯ ರಾಷ್ಟ್ರೀಯ ಸಾಗರ ಮಾಹಿತಿ ಸೇವೆಗಳ ಕೇಂದ್ರ (INCOIS) ನೀಡಿದ ಸೂಚನೆಯಂತೆ, ಈ ಹವಾಮಾನ ವೈಪರೀತ್ಯವು 2027ರ ಮೇ ತಿಂಗಳವರೆಗೆ ಮುಂದುವರಿಯುವ ಸಾಧ್ಯತೆಯಿದೆ.



**ತಾಪಮಾನ ವೃದ್ಧಿ:** ಸಾಮಾನ್ಯ ತಾಪಮಾನಕ್ಕಿಂತ ಹೆಚ್ಚು ಉಷ್ಣಾಂಶ ದಾಖಲಾಗಲಿದ್ದು, ತೀವ್ರ ಕಾವು ಉಂಟಾಗಲಿದೆ.

ಮುಂಗಾರು ವೈಫಲ್ಯ ಹಾಗೂ ಜಲಕ್ಷಾಮ, ಮಳೆಯ ಕೊರತೆಯಿಂದ ಜಲಾಶಯಗಳ ಮಟ್ಟ ಕುಸಿದು, ಕೃಷಿ ಹಾಗೂ ಕುಡಿಯುವ ನೀರಿಗೆ ಅಭಾವ ತಲೆದೋರಬಹುದು.

**ಆರ್ಥಿಕ ನಷ್ಟ:** ಕೃಷಿ ಉತ್ಪಾದನೆ ಕುಸಿದು ಆಹಾರ ಧಾನ್ಯಗಳ ಬೆಲೆ ಏರಿಕೆಯಾಗುವ ಸಾಧ್ಯತೆಯಿದೆ.

**ಸರ್ಕಾರದ ಪ್ರಮುಖ ರಕ್ಷಣಾತ್ಮಕ ಕ್ರಮಗಳು ಹಾಗೂ ಕಾರ್ಯಕ್ರಮಗಳು:** ಬೋರ್‌ವೆಲ್ ಮರುಪೂರಣ (Recharge) ಮತ್ತು ಅಂತರ್ಜಲ ರಕ್ಷಣೆ, ?K-GIS ಡಿಜಿಟಲ್ ನೋಂದಣಿ, ರಾಜ್ಯದಲ್ಲಿರುವ ಸುಮಾರು 37 ಲಕ್ಷ ಬೋರ್‌ವೆಲ್‌ಗಳ ಸಮಗ್ರ ಮಾಹಿತಿಯನ್ನು KSRSACನ K-GIS ಪೋರ್ಟಲ್‌ನಲ್ಲಿ ದಾಖಲಿಸಲಾಗುತ್ತಿದೆ.

**ತಾಂತ್ರಿಕ ತರಬೇತಿ ಹಾಗೂ ಪ್ರಗತಿ ಪರಿಶೀಲನೆ :** ಬೋರ್‌ವೆಲ್‌ಗಳ ತಾಂತ್ರಿಕ ಪರಿಶೀಲನೆ, ರಿಪೇರಿ ಮತ್ತು ಮರುಪೂರಣ ಕಾರ್ಯಗಳಿಗಾಗಿ ವಿಶೇಷ ತರಬೇತಿ ನೀಡಲಾಗುತ್ತಿದ್ದು, ಪ್ರತಿ 15 ದಿನಗಳಿಗೊಮ್ಮೆ ಪ್ರಗತಿ ಪರಿಶೀಲನೆ ನಡೆಸಲಾಗುತ್ತದೆ.

ತೀವ್ರವಾಗಿ ಅಂತರ್ಜಲ ಕುಸಿದಿರುವ ಪ್ರದೇಶಗಳಲ್ಲಿ (ಅತಿ ಹೆಚ್ಚು ಬಳಕೆಯಾದ ವಲಯಗಳಲ್ಲಿ) ಹೊಸ ಬೋರ್‌ವೆಲ್ ಕೊರೆಯುವುದನ್ನು ನಿರ್ಬಂಧಿಸಲಾಗಿದೆ.

**ಜಲ ಸಂರಕ್ಷಣೆ ಮತ್ತು ಮೂಲಸೌಕರ್ಯ ಅಭಿವೃದ್ಧಿ:** VBGRAMG ಯೋಜನೆ: ಗ್ರಾಮೀಣ ಪ್ರದೇಶಗಳಲ್ಲಿ ಮಳೆನೀರು ಸಂಗ್ರಹಣೆ, ವಿವಿಧ ಚೆಕ್ ಡ್ಯಾಮ್‌ಗಳ ನಿರ್ಮಾಣ (ಮಣ್ಣಿನ ತಡೆ, ಕಲ್ಲು ತುಂಬಿದ ತಂತಿ ಜಾಲದ ತಡೆ, ಕಲ್ಲಿನ ತಡೆ ಛಿಜಚಛಿಇ–ಜಚಿಛ) ಹಾಗೂ ಸಾಂಪ್ರದಾಯಿಕ ನೀರಿನ ಮೂಲಗಳ ಪುನರುಜ್ಜೀವನವನ್ನು ಕೈಗೆತ್ತಿಕೊಳ್ಳಲಾಗಿದೆ.

**ಕಲುಷಿತ ನೀರು ಮರುಬಳಕೆ:** ಸಂಸ್ಕರಿಸಿದ ತ್ಯಾಜ್ಯ ನೀರನ್ನು ಕೈಗಾರಿಕೆ, ಉದ್ಯಾನವನ ಹಾಗೂ ನಿರ್ಮಾಣ ಕಾಮಗಾರಿಗಳಿಗೆ ಬಳಸುವ ವ್ಯವಸ್ಥೆ ಮಾಡಲಾಗುತ್ತಿದೆ.

**ವಾಟರ್ ಬಜೆಟಿಂಗ್:** ಸ್ಥಳೀಯ ಸಂಸ್ಥೆಗಳ ಮಟ್ಟದಲ್ಲಿ ನೀರಿನ ಸರಿಯಾದ ನಿರ್ವಹಣೆಗಾಗಿ 'ಜಲ ಆಯವ್ಯಯ' (Water Budgeting) ಜಾರಿಗೆ ತರಲಾಗುತ್ತಿದೆ.

**ರೈತರಿಗೆ ಆಸರೆ: ಬರನಿರೋಧಕ ಬೆಳೆಗಳ ಪ್ರೋತ್ಸಾಹ*** : ಮಳೆ ಅಭಾವದಿಂದ ಉಂಟಾಗುವ ನಷ್ಟ ತಪ್ಪಿಸಲು ರೈತರು ಕಡಿಮೆ ನೀರು ಬಳಸುವ ಮತ್ತು ತೀವ್ರ ಶಾಖವನ್ನು ತಡೆಯಬಲ್ಲ ಬೆಳೆಗಳನ್ನು ಬೆಳೆಯಲು ಸರ್ಕಾರ ಉತ್ತೇಜಿಸುತ್ತಿದೆ.

**ಸಿರಿಧಾನ್ಯಗಳು** (Millets): ಶೇಂಗಾ, ಜೋಳ, ರಾಗಿ ಇತ್ಯಾದಿ, ಕೇವಲ 250?400 ಮಿ.ಮೀ. ಮಳೆಯಲ್ಲೇ ಬೆಳೆಯಬಹುದು.

**ದ್ವಿದಳ ಧಾನ್ಯಗಳು**: ಕಡಲೆ, ತೊಗರಿ, ಅಲಸಂದಿ ಮುಂತಾದ ಬೆಳೆಗಳು. ಇವುಗಳ ಬೇರುಗಳು ಆಳಕ್ಕೆ ಇಳಿದು ತೇವಾಂಶ ಪಡೆಯುತ್ತವೆ ಹಾಗೂ ಮಣ್ಣಿನ ಸಾರ ಹೆಚ್ಚಿಸುತ್ತವೆ.

**ಎಣ್ಣೆಕಾಳುಗಳು** : ಸೂರ್ಯಕಾಂತಿ, ಎಳ್ಳು ಮತ್ತು ಹುಚ್ಚೆಳ್ಳು ಇತ್ಯಾದಿ. 400?750 ಮಿ.ಮೀ. ಮಳೆಯ ಅಗತ್ಯವಿದ್ದು, ಒಣ ಹವಾಮಾನ ತಡೆಯಬಲ್ಲವು.

ಹವಾಮಾನ ವೈಪರೀತ್ಯದ ಈ ಕಠಿಣ ಪರಿಸ್ಥಿತಿಯನ್ನು ಯಶಸ್ವಿಯಾಗಿ ಎದುರಿಸಲು ಪ್ರತಿಯೊಬ್ಬ ನಾಗರಿಕರೂ ಇಂಧನ ಬಳಕೆಯನ್ನು ಮಿತಿಗೊಳಿಸಬೇಕು, ಪುನರ್ಬಳಕೆ ಮಾಡಬಹುದಾದ ಇಂಧನ ಮೂಲಗಳಿಗೆ ಆದ್ಯತೆ ನೀಡಬೇಕು ಮತ್ತು ನೀರನ್ನು ಅತ್ಯಂತ ಮಿತವಾಗಿ ಬಳಸಿ ಸಂರಕ್ಷಿಸಬೇಕು.

ಸರ್ಕಾರದ ಈ ಬೃಹತ್ ಜಲ ಸಂರಕ್ಷಣಾ ಅಭಿಯಾನಕ್ಕೆ ಸಾರ್ವಜನಿಕರು ಸಂಪೂರ್ಣ ಸಹಕಾರ ನೀಡುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಕರೆ ನೀಡಿದ್ದಾರೆ.

## ಅಂಬೇಡ್ಕರ್ ಭಾರತದ ಅಭಿವೃದ್ದಿಗೆ ಪೂರಕವಾದ ಸುಭದ್ರ ಸಂವಿಧಾನ ಕೊಟ್ಟಿದ್ದಾರೆ: ಮಹಾಲಿಂಗು

**ಚಾಮರಾಜನಗರ:** ಡಾ, ಅಂಬೇಡ್ಕರ್ ಅವರು ಇಡೀ ವಿಶ್ವವೇ ಮೆಚ್ಚುವ ಸಂವಿಧಾನ ಬರೆದಿದ್ದು, ಇದರಿಂದ ಸಮಾಜದ ಕಟ್ಟಕಡೆಯ ವ್ಯಕ್ತಿ ಉನ್ನತಸ್ಥಾನಮಾನಗಳನ್ನುಪಡೆಯಲುಸಾಧ್ಯವಾಗಿದೆ ಎಂದು ಚಾಮರಾಜನಗರ ಸಮಾದೇಷ್ಟರು ಗೃಹರಕ್ಷ ದಳ ಎಸ್,ಜಿ,ಮಹಾಲಿಂಗಸ್ವಾಮಿ ಅಭಿಪ್ರಾಯಪಟ್ಟರು.

ಅವರು ತಾಲೂಕಿನ ಕುದೇರು ಎಂ,ಸಂಗಶೆಟ್ಟಿ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಜನಹಿತಾಶಕ್ತಿ ಹೋರಾಟವೇದಿಕೆ, ಬೆಂಗಳೂರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಾನಸ ಸಿಕ್ರಂಸಂಸ್ಥೆ ಸಹಯೋಗದಲ್ಲಿ ಮಂಗಳವಾರ ' ನಡೆದ? ಸಂವಿಧಾನಅರಿವು ಕಾರ್ಯಕ್ರಮವನ್ನು ಉದ್ಘಾಟಸಿ ಮಾತನಾಡಿದರು.

ಅಂಬೇಡ್ಕರ್ ಅವರು ಭಾರತದ ಅಭಿವೃದ್ದಿಗೆ ಪೂರಕವಾದ ಸುಭದ್ರ ಸಂವಿಧಾನ ರಚನೆಮಾಡಿ, ದೇಶಕ್ಕೆ ಅರ್ಪಣೆ ಮಾಡಿದ್ದಾರೆ. ಶಾಲಾಕಾಲೇಜಿನ ವಿದ್ಯಾರ್ಥಿಗಳು ವಿದ್ಯಾರ್ಥಿದೆಸೆಯಲ್ಲೇ ಅಂಬೇಡ್ಕರ್ ರಚಿಸಿರುವ ಸಂವಿಧಾನವನ್ನು ಅಧ್ಯಯನ ಮಾಡಬೇಕು, ಇದರಿಂದ ಸಮಾಜದ ಎಲ್ಲ ವರ್ಗದವರು ಸಂವಿಧಾನಾತ್ಮಕ 'ಸೌಲಭ್ಯಗಳನ್ನು ಪಡೆಯಲು ಸಾಧ್ಯವಾಗಿದೆ ಎಂದರು.

ಸ,ಪ,ಪೂ,ಕಾಲೇಜಿನ ಪ್ರಾಂಶುಪಾಲ ಶಿವಪ್ರಕಾಸಶ್, ಅವರು ಮಾತನಾಡಿ ವಿದ್ಯಾರ್ಥಿಗಳು ತಮ್ಮ ವ್ಯಾಸಂಗದ ಅವಧಿಯಲ್ಲಿ ಸಂವಿಧಾನವನ್ನು ಅಧ್ಯಯನ ಮಾಡಬೇಕು, ಸಂವಿಧಾನದಲ್ಲಿ ವಿದ್ಯಾರ್ಥಿಗಳಿಗೆ ಉಪಯುಕ್ತವಾಗುವ ಅನೇಕ ಅಂಶಗಳಿವೆ. ಸ್ಪರ್ಧಾತ್ಮಕ ಪರೀಕ್ಷೆ ತೆಗೆದುಕೊಂಡ ವಿದ್ಯಾರ್ಥಿಗಳಿಗೆ ಸಂವಿಧಾನದ ಅರಿವು ಅತ್ಯಂತ ಉಪಯುಕ್ತವಾಗಿದೆ ಎಂದರು.

ಜನಹಿತಾಶಕ್ತಿ ಹೋರಾಟವೇದಿಕೆ ಜಿಲ್ಲಾಧ್ಯಕ್ಷ ರಾಮಸಮುದ್ರ ಸುರೇಶ್ ಮಾತನಾಡಿ, ಅಂಬೇಡ್ಕರ್ ಅವರು ರಚಿಸಿರುವ ಸಂವಿಧಾನದಲ್ಲಿ ಮೂಲಭೂತ ಹಕ್ಕುಗಳು ಮತ್ತು ಕರ್ತವ್ಯಗಳನ್ನು ಅಳವಡಿಸಲಾಗಿದೆ. ಸಂವಿಧಾನ ಅಧ್ಯಯನ ಮಾಡುವುದರಿಂದ ಪ್ರತಿಯೊಬ್ಬರು ಉತ್ತಮ ಬದುಕು ಕಟ್ಟಿಕೊಳ್ಳುವ ಅವಕಾಶವಿದೆ ಶಾಲಾಕಾಲೇಜು ವಿದ್ಯಾರ್ಥಿಗಳಿಗೆ ಭಾರತದ ಸಂವಿಧಾನದ ಮಹತ್ವದ ಬಗ್ಗೆ ಅರಿವು ಮೂಡಿಸುವುದೇ ಕಾರ್ಯಕ್ರಮದ ಉದ್ದೇಶವಾಗಿದೆ. ಎಂದರು

ಮಾನಸಸಿಕ್ರಮ್‌ಸಂಸ್ಥಯ ಜಿಲ್ಲಾ ಸಂಯೋ?ಜಕ ಕೆ,ಸಿರೇವಣ್ಣ ಅಂಬೇಡ್ಕರ್ ಅವರು ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿದರು.

ಜಲ್ಲಾ ಮಹಿಳಾ ಸಂಯೋಜಕರು ದ,ಸಂ,ಸ ಎಂ,ಆರ್, ಪ್ರಭಾವರ್ತಿ, ಚಾಮರಾಜನಗರ ಸಿದ್ದಾರ್ಥ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ಸಿ.ರಂಗಸ್ವಾಮಿ, ಜನಹಿತಾಶಕ್ತಿ ಹೋರಾಟವೇದಿಕೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಾಡಹಳ್ಳಿ ನಾಗರಾಜು, ಯಡಿಯೂರು ನಾಗರಾಜು, ಮಿಮಿಕ್ರಿಮಲ್ಲಣ್ಣ, ಉಪನ್ಯಾಸಕರು ಸೇರಿದಂತೆ ವಿದ್ಯಾರ್ಥಿಗಳು ಹಾಜರಿದ್ದರು.



# ಕೆರಗೋಡಿನಲ್ಲಿ ಜುಲೈ 27ರಂದು ಬೃಹತ್ ಆರೋಗ್ಯ ಮೇಳ

## ಪೂರ್ವಭಾವಿ ಸಭೆಯಲ್ಲಿ ಸಿದ್ಧತೆ ಪರಿಶೀಲಿಸಿದ ಶಾಸಕ ಪಿ. ರವಿಕುಮಾರ್ ಗೌಡ ಗಣಿಗ




**ಮಂಡ್ಯ:** ಗ್ರಾಮೀಣ ಭಾಗದ ಜನರಿಗೆ ತಜ್ಞ ವೈದ್ಯರ ಸೇವೆಯನ್ನು ಒಂದೇ ವೇದಿಕೆಯಲ್ಲಿ ಉಚಿತವಾಗಿ ಒದಗಿಸುವ ಉದ್ದೇಶದಿಂದ ಜುಲೈ 27ರಂದು ಮಂಡ್ಯ ತಾಲೂಕಿನ ಕೆರಗೋಡು ಗ್ರಾಮದಲ್ಲಿ ಪರಮಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿಯವರ ನೇತೃತ್ವದಲ್ಲಿ ಬೃಹತ್ ಆರೋಗ್ಯ ಮೇಳ ಆಯೋಜಿಸಲಾಗಿದೆ.

ಆದಿಚುಂಚನಗಿರಿ ಶಿಕ್ಷಣ ಸಂಸ್ಥೆಗಳು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ವಿವಿಧ ಆರೋಗ್ಯ ಸಂಸ್ಥೆಗಳ ಸಹಯೋಗದಲ್ಲಿ *ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ನಡೆಯಲಿರುವ ಈ ಆರೋಗ್ಯ ಮೇಳದಲ್ಲಿ ಜಿಲ್ಲೆಯ ಹಾಗೂ ರಾಜ್ಯದ ವಿವಿಧ ಆಸ್ಪತ್ರೆಗಳ ನುರಿತ ತಜ್ಞ ವೈದ್ಯರು ಭಾಗವಹಿಸಿ ಸಾರ್ವಜನಿಕರಿಗೆ ಉಚಿತ ಆರೋಗ್ಯ ತಪಾಸಣೆ, ವೈದ್ಯಕೀಯ ಸಲಹೆ ಹಾಗೂ ಅಗತ್ಯ ಚಿಕಿತ್ಸೆಗೆ ಮಾರ್ಗದರ್ಶನ ನೀಡಲಿದ್ದಾರೆ.

ಈ ಮಹತ್ವದ ಆರೋಗ್ಯ ಮೇಳದ ಯಶಸ್ವಿ ಆಯೋಜನೆಗೆ ಸಂಬಂಧಿಸಿದ ಪೂರ್ವಸಿದ್ಧತಾ ಸಭೆಯು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕ ಪಿ. ರವಿಕುಮಾರ್ ಗೌಡ ಗಣಿಗ ಅವರ ಅಧ್ಯಕ್ಷತೆಯಲ್ಲಿ ನಡೆಯಿತು. ಸಭೆಯಲ್ಲಿ ಕಾರ್ಯಕ್ರಮದ ರೂಪುರೇಷೆ, ವಿವಿಧ ಇಲಾಖೆಗಳ ಜವಾಬ್ದಾರಿಗಳು, ವೈದ್ಯಕೀಯ ತಂಡಗಳ ನಿಯೋಜನೆ, ಜನಸಂದಣಿ ನಿರ್ವಹಣೆ, ನೋಂದಣಿ, ಕುಡಿಯುವ ನೀರು, ಶೌಚಾಲಯ, ಆಂಬುಲೆನ್ಸ್, ಔಷಧ ವಿತರಣೆ ಹಾಗೂ ಆರೋಗ್ಯ ತಪಾಸಣಾ ವಿಭಾಗಗಳ ಸಿದ್ಧತೆ ಕುರಿತು ಸಮಗ್ರ ಚರ್ಚೆ ನಡೆಸಲಾಯಿತು. ಆರೋಗ್ಯ ಮೇಳದಲ್ಲಿ ಗರ್ಭಕೋಶ ಕ್ಯಾನ್ಸರ್, ಸ್ತನ ಕ್ಯಾನ್ಸರ್, ಕಿಡ್ನಿ ಕ್ಯಾನ್ಸರ್, ಮೂಳೆ ಕ್ಯಾನ್ಸರ್ ಸೇರಿದಂತೆ ವಿವಿಧ ಕ್ಯಾನ್ಸರ್‌ಗಳ ಪ್ರಾಥಮಿಕ ತಪಾಸಣೆ, ಹೃದಯ ಸಂಬಂಧಿ ಕಾಯಿಲೆಗಳು, ಮಧುಮೇಹ, ರಕ್ತದೊತ್ತಡ, ಕಣ್ಣುಗಳ ತಪಾಸಣೆ, ದಂತ ಚಿಕಿತ್ಸಾ ಸೇವೆಗಳು, ಸಾಮಾನ್ಯ ಆರೋಗ್ಯ ತಪಾಸಣೆ ಸೇರಿದಂತೆ ಹಲವು ವಿಶೇಷ ವೈದ್ಯಕೀಯ ಸೇವೆಗಳು ಉಚಿತವಾಗಿ ಲಭ್ಯವಾಗಲಿವೆ.

ಅಲ್ಲದೆ, ಗಂಭೀರ ಆರೋಗ್ಯ ಸಮಸ್ಯೆಗಳು ಪತ್ತೆಯಾದವರಿಗೆ ಹೆಚ್ಚಿನ ಚಿಕಿತ್ಸೆಗೆ ತಜ್ಞ ಆಸ್ಪತ್ರೆಗಳಿಗೆ ರೆಫರ್ ಮಾಡುವ ವ್ಯವಸ್ಥೆಯೂ ಕಲ್ಪಿಸಲಾಗಿದ್ದು, ಅಗತ್ಯವಿರುವವರಿಗೆ ಔಷಧಿ ವಿತರಣೆ ಹಾಗೂ ಆರೋಗ್ಯ ಜಾಗೃತಿ ಕುರಿತು ಸಲಹೆಗಳನ್ನು ನೀಡಲಾಗುತ್ತದೆ.

ಸಭೆಯನ್ನುದ್ದೇಶಿಸಿ ಮಾತನಾಡಿದ ಶಾಸಕ ಪಿ. ರವಿಕುಮಾರ್ ಗೌಡ ಗಣಿಗ, ಗ್ರಾಮೀಣ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆ ತಲುಪಿಸುವ ಉದ್ದೇಶದಿಂದ ಈ ಬೃಹತ್ ಆರೋಗ್ಯ ಮೇಳವನ್ನು ಆಯೋಜಿಸಲಾಗಿದೆ. ಸಣ್ಣ ಆರೋಗ್ಯ ಸಮಸ್ಯೆಗಳನ್ನೂ ನಿರ್ಲಕ್ಷಿಸದೆ ಪ್ರತಿಯೊಬ್ಬರೂ ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಉಚಿತ ತಪಾಸಣೆ ಮಾಡಿಸಿಕೊಳ್ಳಬೇಕು. ಎಲ್ಲಾ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಪೂರ್ವಭಾವಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಮೂರ್ತಿ, ಮಂಡ್ಯ ಉಪ ವಿಭಾಗಾಧಿಕಾರಿ ಶಿವಮೂರ್ತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಬೆಟ್ಟಸ್ವಾಮಿ, ತಹಶೀಲ್ದಾರ್ ವಿಶ್ವನಾಥ್ ಸೇರಿದಂತೆ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು, ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಕಾರ್ಯಕ್ರಮದ ಸಂಘಟಕರು ಉಪಸ್ಥಿತರಿದ್ದರು.

# ಚಾಮರಾಜನಗರ ರೋಟರಿ ಸಂಸ್ಥೆಯ ನೂತನ ಅಧ್ಯಕ್ಷ ಅಬ್ದುಲ್ ಅಜೀಜ್ ದೀನಾಗೆ ಸನ್ಮಾನ



**ಚಾಮರಾಜನಗರ:** ನಗರದ ರೋಟರಿ ಸಂಸ್ಥೆಯ ನೂತನ ಅಧ್ಯಕ್ಷ ಅಬ್ದುಲ್ ಅಜೀಜ್ ದೀನಾ ಅವರನ್ನು ತಾಲೂಕು ಲೋಕೋಪಯೋಗಿ ಇಲಾಖೆ ಸಿವಿಲ್ ಗುತ್ತಿಗೆದಾರ ಸಂಘದ ವತಿಯಿಂದ ಸನ್ಮಾನಿಸಲಾಯಿತು.

ನಗರದ ಲೋಕೋಪಯೋಗಿ ಇಲಾಖೆ ಕಚೇರಿಯ ಪಕ್ಕದಲ್ಲಿರುವ ತಾಲೂಕು ಲೋಕೋಪಯೋಗಿ ಇಲಾಖೆ ಸಿವಿಲ್ ಗುತ್ತಿಗೆದಾರ ಸಂಘದ ಕಚೇರಿಯಲ್ಲಿ ಸಂಘದ ಅಧ್ಯಕ್ಷ ಎ.ಎನ್.ರವಿ ಅವರ ನೇತೃತ್ವದಲ್ಲಿ ರೋಟರಿ ಸಂಸ್ಥೆಯ ನೂತನ ಅಧ್ಯಕ್ಷ ಅಬ್ದುಲ್ ಅಜೀಜ್ ಅವರಿಗೆ ಶಾಲು ಹೊದಿಸಿ, ಹಾರಹಾಕಿ, ಫಲತಾಂಬೂಲ ನೀಡಿ ಸನ್ಮಾನಿಸಿ ಶುಭಕೋರಿದರು.

ಈ ಸಂದರ್ಭದಲ್ಲಿ ಸಂಘದ ಕಾರ್ಯದರ್ಶಿ ಡಿ.ಪಿ.ಪ್ರಕಾಶ್, ಖಜಾಂಚಿ ಬಿ .ಎಲ್ .ಮಹದೇವಸ್ವಾಮಿ, ನಿರ್ದೇಶಕರಾದ ಕೆ .ಎಲ್. ರವಿಕುಮಾರ್. ಸಿ.ಜಿ ನಾಗೇಶ್. ಕೆರೆಹಳ್ಳಿ ರೇವಣ್ಣ,ದೊರೆಸ್ವಾಮಿ ನಾಯಕ, ಡಿ.ನಾರಾಯಣಸ್ವಾಮಿ ನಲ್ಲೂರು, ಗುತ್ತಿಗೆದಾರರಾದ ಕೂಡ್ಲೂರು ಶ್ರೀಧರ್ಮೂರ್ತಿ,ಸಿ. ಕೆ .ಮಂಜು ಬಿಸಲವಾಡಿ ಶಿವಕುಮಾರ್ ಹಾಜರಿದ್ದರು.

# ಪುಸ್ತಕಗಳು ಜ್ಞಾನ ಹರಿಸುವ ಜ್ಞಾನವಾಹಿನಿ: ಗೊರೂರು ಅನಂತರಾಜು

## ಮನೆಗೊಂದು ಗ್ರಂಥಾಲಯದಿಂದ ಓದುವ ಸಂಸ್ಕೃತಿಗೆ ಪ್ರೋತ್ಸಾಹ



**ಹಾಸನ:** ಮನೆಗೊಂದು ಗ್ರಂಥಾಲಯ ಕಾರ್ಯಕ್ರಮದಲ್ಲಿ ಲೇಖಕರು, ಕವಿಗಳ ಕೃತಿಗಳ ಪರಿಚಯ ಮಾಡಿಕೊಡುವುದು ವಿಶಿಷ್ಟ ಹಾಗೂ ಉಪಯುಕ್ತ ಅವಕಾಶವಾಗಿದೆ. ಸಾಹಿತಿಗಳು, ಲೇಖಕರು ಮತ್ತು ಕವಿಗಳ ಕೃತಿಗಳನ್ನು ಜನರಿಗೆ ಪರಿಚಯಿಸುವ ಮೂಲಕ ಭವಿಷ್ಯದ ಸೃಜನಶೀಲ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸಲು ಸಾಧ್ಯವಾಗುತ್ತದೆ ಎಂದು ಸಾಹಿತಿ ಹಾಗೂ ಮನೆಗೊಂದು ಗ್ರಂಥಾಲಯ ಹಾಸನ ಜಿಲ್ಲಾ ಜಾಗೃತಿ ಸಮಿತಿ ಸಂಚಾಲಕ ಗೊರೂರು ಅನಂತರಾಜು ಹೇಳಿದರು.

ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆ ನಗರದ ಕವಯಿತ್ರಿ ಧನಲಕ್ಷ್ಮೀ ಪ್ರಕಾಶ್ ಅವರ ಮನೆಯಲ್ಲಿ ನಡೆದ ಮನೆಗೊಂದು ಗ್ರಂಥಾಲಯ ಅನುಷ್ಠಾನ ಕಾರ್ಯಕ್ರಮದಲ್ಲಿ ಧನಲಕ್ಷ್ಮೀ ಅವರ 'ಭಾವ ಸಂಗಮ' ಕವನ ಸಂಕಲನವನ್ನು ಪರಿಚಯಿಸಿ ಅವರು ಮಾತನಾಡಿದರು.

ಪುಸ್ತಕಗಳು ಪೀಳಿಗೆಯಿಂದ ಪೀಳಿಗೆಗೆ ಜ್ಞಾನವನ್ನು ಹರಿಸುವ ಜ್ಞಾನವಾಹಿನಿಗಳಾಗಿವೆ. ಧನಲಕ್ಷ್ಮೀ ಅವರ ಕಂಟಕ' ಕವಿತೆ ಬಡತನದ ಬದುಕನ್ನು ಅರ್ಥಪೂರ್ಣವಾಗಿ ಚಿತ್ರಿಸಿದೆ. ಭಾವ ಸಂಗಮ' ಅವರ ಚೊಚ್ಚಲ ಕವನ ಸಂಕಲನವಾಗಿದ್ದು, ಕನ್ನಡ ಪುಸ್ತಕ ಪ್ರಾಧಿಕಾರದಿಂದ ಧನಸಹಾಯವೂ ದೊರೆತಿದೆ. ಬರವಣಿಗೆಯನ್ನು ಇಲ್ಲಿಗೆ ನಿಲ್ಲಿಸದೆ ಕಥೆ, ಕವಿತೆ ಸೇರಿದಂತೆ ಸಾಹಿತ್ಯ ರಚನೆಯನ್ನು ಮುಂದುವರಿಸಿ ಉತ್ತಮ ಕೃತಿಗಳನ್ನು ನೀಡಬೇಕು ಎಂದು ಆಶಿಸಿದರು. ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷೆ ಡಾ. ಮಾನಸ ಅವರು ಧನಲಕ್ಷ್ಮೀ ಪ್ರಕಾಶ್ ದಂಪತಿಯನ್ನು ಸನ್ಮಾನಿಸಿ ಮಾತನಾಡಿ, ಮಾನವ ತನ್ನ ಮಸ್ತಕದಲ್ಲಿರುವ ವಿಚಾರಗಳನ್ನು ಪುಸ್ತಕ ರೂಪದಲ್ಲಿ ದಾಖಲಿಸುತ್ತಾನೆ. ಬಳಿಕ ಪುಸ್ತಕದಲ್ಲಿರುವ ಜ್ಞಾನವನ್ನು ಮಸ್ತಕದಲ್ಲಿ ತುಂಬಿಕೊಳ್ಳುತ್ತಾನೆ. ಹೀಗಾಗಿ ಪುಸ್ತಕ ಮತ್ತು ಮಸ್ತಕ ಪರಸ್ಪರ ಪೂರಕ ಹಾಗೂ ಪ್ರೇರಕವಾಗಿವೆ ಎಂದರು.

ಕನ್ನಡ ಪುಸ್ತಕ ಪ್ರಾಧಿಕಾರವು ಗ್ರಂಥಾಲಯ ಹೊಂದಿರುವ ಮನೆಗಳಿಗೆ ಭೇಟಿ ನೀಡಿ ಅಭಿನಂದಿಸುವುದರ ಜೊತೆಗೆ ಜನರಲ್ಲಿ ಪುಸ್ತಕ ಓದುವ ಅಭಿರುಚಿ ಬೆಳೆಸುವ ಉದ್ದೇಶದಿಂದ ಕೈಗೊಂಡಿರುವ ಈ ಕಾರ್ಯಕ್ರಮಕ್ಕೆ ರಾಜ್ಯಾದ್ಯಂತ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ ಎಂದು ತಿಳಿಸಿದರು.

ಕನ್ನಡ ಪುಸ್ತಕ ಪ್ರಾಧಿಕಾರದ ಸದಸ್ಯ ಹಾಗೂ ಕನ್ನಡ ಪ್ರಾಧ್ಯಾಪಕ ಡಾ.ಕುಶಾಲ್ ಬರಗೂರು ಅವರು ಮನೆಗಳಲ್ಲಿ ಪುಸ್ತಕಗಳನ್ನು ಬೀರು ಹಾಗೂ ಕಪಾಟುಗಳಲ್ಲಿ ವ್ಯವಸ್ಥಿತವಾಗಿ ಜೋಡಿಸಿಡುವ ವಿಧಾನ ಕುರಿತು ಮಾಹಿತಿ ನೀಡಿದರು. ಜ್ಞಾನಾರ್ಜನೆಗೆ ಪುಸ್ತಕ ಓದುವಿಕೆ ಅತ್ಯಂತ ಮಹತ್ವದ್ದಾಗಿದ್ದು, ಪುಸ್ತಕಗಳು ಜೀವಂತ ಚೇತನಗಳಿದ್ದಂತೆ ಎಂದು ಹೇಳಿದರು.

ಮಂಡ್ಯ ಜಿಲ್ಲಾ ಮನೆಗೊಂದು ಗ್ರಂಥಾಲಯ ಜಾಗೃತಿ ಸಮಿತಿ ಸಂಚಾಲಕ ಕಾರಸವಾಡಿ ಮಹದೇವ್ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಪ್ರೊ.ಸುಜನಾ ಪ್ರತಿಷ್ಠಾನದ ಅಧ್ಯಕ್ಷ ಕೆ.ಎಸ್.ಸೋಮಶೇಖರ್, ಜಿಲ್ಲಾ ಜಾಗೃತಿ ಸಮಿತಿ ಸದಸ್ಯ ಕತ್ತರಘಟ್ಟ ವಾಸು, ಕಸಾಪ ತಾಲ್ಲೂಕು ಘಟಕದ ಅಧ್ಯಕ್ಷ ಪೂರ್ಣಚಂದ್ರ ತೇಜಸ್ವಿ, ನಿವೃತ್ತ ಪತ್ರಾಂಕಿತ ವ್ಯವಸ್ಥಾಪಕ ಬಳ್ಳೇಕೆರೆ ಮಂಜುನಾಥ್, ಯುವ ಲೇಖಕ ಮೊಹಮ್ಮದ್ ಅಜರುದ್ದೀನ್, ಲೇಖಕ ಕೆ.ಎನ್. ಚಿದಾನಂದ ಹಾಸನ, ಸಾಹಿತಿ ಬಲ್ಲೇನಹಳ್ಳಿ ಮಂಜುನಾಥ್, ನಿವೃತ್ತ ಪ್ರಾಂಶುಪಾಲ ಕಾಳೇಗೌಡ, ಉಪನ್ಯಾಸಕರಾದ ರೇವಣ್ಣ, ಆರ್. ಉಮಾ, ಶಂಕರಸ್ವಾಮಿ, ಕುಮಾರ್, ಪ್ರಕಾಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕವಿಯತ್ರಿ ಮನೆಯಲ್ಲಿ ಮನೆಗೊಂದು ಗ್ರಂಥಾಲಯ ಉದ್ಘಾಟನೆ



**ಕೆ.ಆರ್.ಪೇಟೆ:** ಜ್ಞಾನದ ಸಂಕೇತವಾದ ಪುಸ್ತಕಕ್ಕೆ ಮೊದಲಿನಿಂದಲೂ ಅನಾಧರಾಣೆ ಬೆಳೆಸಿದ್ದರಿಂದಲೇ ಮನೆಗಳಲ್ಲಿ ಪೂಜಾ ಮಂದಿರವಿರುವಂತೆ ಗ್ರಂಥಾಲಯಕ್ಕೊಂದು ಕೊಠಡಿ ಇಲ್ಲದಂತಾಗಿದೆ ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ.ಮಾನಸ ಹೇಳಿದರು.

ತಾಲ್ಲೂಕಿನ ಅಕ್ಕಿಹೆಬ್ಬಾಳು ಗ್ರಾಮದ ಲೇಖಕ ಮೊಹಮದ್ ಅಜರುದ್ದೀನ್, ಕಲಾವಿದ ಅಭಿನಂದನ್ , ಶಶಿಧರ ಭಾರಿಘಾಟ್ ಅವರ ಮನೆ, ಮತ್ತು ಕೆ.ಆರ್.ಪೇಟೆ ಪಟ್ಟಣದಲ್ಲಿ ಲೇಖಕ ಚಾ.ಶಿ.ಜಯಕುಮಾರ್ ಮತ್ತು ಪಟ್ಟಣದ ಬಸವೇಶ್ವರನಗರದ ಕವಿಯತ್ರಿ ಧನಲಕ್ಷ್ಮಿ ಪ್ರಕಾಶ್ ಮನೆ ಸೇರಿದಂತೆ ಐದು ಮನೆಗಳಲ್ಲಿ ಭಾನುವಾರ ಆಯೋಜಿಸಿದ್ದ ಮನೆಗೊಂದು ಗ್ರಂಥಾಲಯ ಅನುಷ್ಠಾನ ಸಮಾರಂಭದಲ್ಲಿ ಗ್ರಂಥಾಲಯಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಭಕ್ತಿಯನ್ನು ಭಯದ ಸಂಕೇತವಾಗಿ ಮಾಡಿ ಜನರಲ್ಲಿ ಮೌಢ್ಯವನ್ನು ಬಿತ್ತುವ ಕಾರ್ಯ ನಡೆದಂತೆ, ಪುಸ್ತಕದ ಜ್ಞಾನವನ್ನು ಹಂಚಿ ಮಾನವರರಲ್ಲಿ ಅರಿವಿನ ಜ್ಞಾನವನ್ನು ಹೆಚ್ಚಿಸುವ ಪ್ರಯತ್ನವನ್ನು ನಮ್ಮ ಹಿರಿಯರು ಮಾಡದಿದ್ದರಿಂದ ಪುಸ್ತಕ ಸಂಸ್ಕೃತಿ ಹಾಳಾಗುತ್ತಿದೆ. ಮಂಗಳಾರತಿ ತಟ್ಟೆಗೆ, ಜೋಯಿಸರಿಗೆ ಬೇರೊಬ್ಬರು ಮೆಚ್ಚಲಿ ಎಂಬಂತೆ ದುಬಾರಿ ಕಾಣಿಕೆ ನೀಡಿ ಆಶೀರ್ವಾದ ಬೇಡುವ ನಾವು ಕಡಿಮೆ ಬೆಲೆಯ ಪುಸ್ತಕ ತೆಗೆದುಕೊಳ್ಳಲು , ದಿನಪತ್ರಿಕೆ ಕೊಂಡು ಓದುವದಿಕ್ಕೆ ಹಿಂದೆ ಮುಂದೆ ನೋಡುತ್ತೇವೆ. ಜ್ಞಾನದ ಬೂನಾದಿಯೇ ಇಲ್ಲದ ಭಕ್ತಿಯನ್ನು ಕಟ್ಟಿರುವದರಿಂದ ಸಮಾಜವು ನಡೆಯುವ ದಿಕ್ಕು ದಾರಿತಪ್ಪಿದೆ .ಇದನ್ನು ಬದಲಿಸುವ ಉದ್ದೇಶದಿಂದಲೇ ಕನ್ನಡ ಪುಸ್ತಕ ಪ್ರಾಧಿಕಾರವು ಮನೆಮನೆಗೆ ಗ್ರಂಥಾಲಯ ಅನುಷ್ಠಾನ ಮಾಡುವ ಯೋಜನೆ ರೂಪಿಸಿದ್ದು ಕನಿಷ್ಟ ಒಂದು ಲಕ್ಷ ಮನೆಮನೆಯಲ್ಲಿ ಗ್ರಂಥಾಲಯ ಸ್ಥಾಪಿಸುವ ಗುರಿ ನಮ್ಮದಾಗಿದೆ. ಮುಂದಿನ ದಿನಗಳಲ್ಲಿ ಸರ್ಕಾರದ ಅನುಮೋದನೆ ಪಡೆದು ಪ್ರತಿಯೊಂದು ಮನೆಯ ಗ್ರಂಥಾಲಯಕ್ಕೂ ಒಂದಿಷ್ಟು ಪುಸ್ತಕಕೊಡುವ ಕಾರ್ಯವನ್ನು ಮಾಡಲಾಗುವದು . ಬದುಕನಲ್ಲಿ ಬದುಕುವ ಕಲೆಯನ್ನುಯಾರೂ ಹೇಳೀಕೊಡುವದಿಲ್ಲ . ಆದರೆ ಆ ಕೆಲಸವನ್ನು ಕಲಿಸಿಕೊಡುವ ಏಕೈಕ ಸಾಧನವೆಂದರೆ ಅದು ಪುಸ್ತಕವಾಗಿದೆ . ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಮಸ್ತಕವನ್ನು ಜ್ಞಾನದಿಂದ ತುಂಬಿಸಿಕೊಳ್ಳುವ ಕಾಯಕದಲ್ಲಿ ಪ್ರಾಧಿಕಾರದದೊಂದಿಗೆ ಕೈಜೋಡಿಸಬೇಕೆಂದು ಮನವಿ ಮಾಡಿದರು. ಪ್ರಾಧಿಕಾರವು ನಾಲ್ಕು ವಿಭಾಗದಲ್ಲಿ ಮನೆಮನೆಯ ಗ್ರಂಥಾಲಯವನ್ನು ಪ್ರೋತ್ಸಾಹಿಸಲು ನಾಲ್ವರು ಮಹನೀಯರ ಹೆಸರಿನಲ್ಲಿ ಪ್ರಶಸ್ತಿ- ಬಹುಮಾನ ನೀಡಲು ಉದ್ದೇಶಿಸಿರುವದಲ್ಲದೆ , ಪ್ರತಿ ತಿಂಗಳು ಅಂಗಳದಲ್ಲಿ ತಿಂಗಳ ಪುಸ್ತಕ ಎಂಬ ವಿನೂತನ ಕಾರ್ಯಕ್ರಮವನ್ನು ನಡೆಸಿಕೊಂಡು ಬರುತ್ತಿದೆ ಎಂದರು. ಸಮಾರಂಭದ ಅಧ್ಯಕ್ಷತೆ ಯನ್ನು ವಹಿಸಿದ್ದ ಕನ್ನಡ ಪುಸ್ತಕ ಪ್ರಾಧಿಕಾರದ ಜಿಲ್ಲಾ ಜಾಗೃತ ಸಮಿತಿ ಸಂಚಾಲಕ ಕಾಸರವಾಡಿ ಮಹಾದೇವು ಕಾರ್ಯಕ್ರಮದ ಉದ್ದೇಶ ಮತ್ತು ಮಹತ್ವದ ಬಗ್ಗೆ ಮಾತನಾಡಿದರು.

ಸಮಾರಂಭದಲ್ಲಿ 'ನಾ ಮೆಚ್ಚಿದ ಪುಸ್ತಕ? ಕುರಿತ ಮಾಲಿಕೆಯಲ್ಲಿ ? ಹೇಮಾವತಿ ತೀರ' ಕೃತಿ ಕುರಿತು ಎಸ್.ಡಿ.ಎಂ ಕಾಲೇಜಿನ ಕನ್ನಡ ಅಧ್ಯಾಪಕ ಪ್ರೊ. ಮಾರುತಿ ಪ್ರಸನ್ನ ಕುವೆಂಪು ವಿರಚಿತ ಸ್ವಾಮಿ ವಿವೇಕಾನಂದ ಕುರಿತು ನಿವೃತ್ತ ಬಿಇಓ ಚಿಕ್ಕಸ್ವಾಮಿ, ಗಾಂಧೀ ಕಥನ ಕುರಿತು ಜಿಲ್ಲಾ ಜಾಗೃತ ಸಮಿತಿ ಸಂಚಾಲಕ ಕತ್ತರಘಟ್ಟ ವಾಸು , ಭಾವಸಂಗಮ ಕವನ ಸಂಕಲನ ಕುರಿತು ಹಾಸನ ಜಿಲ್ಲಾ ಜಾಗೃತ ಸಮಿತಿ ಸಂಚಾಲಕ, ಸಾಹಿತಿ ಗೊರೂರು ಅನಂತರಾಜು ಮಾತನಾಡಿದರು.

ಪ್ರೊ.ಸುಜನಾ ಪ್ರತಿಷ್ಠಾನದ ಅಧ್ಯಕ್ಷ ಕೆ.ಎಸ್.ಸೋಮಶೇಖರ್, ಸಾಹಿತಿ ಬಲ್ಲೇನಹಳ್ಳಿ ಮಂಜುನಾಥ್, ಕಸಾಪ ಅಧ್ಯಕ್ಷ ಪೂರ್ಣಚಂದ್ರ ತೇಜಸ್ವಿ, ಮಾಜಿ ಕಸಾಪ ಅಧ್ಯಕ್ಷ ಕೆ.ಕಾಳೇಗೌಡ, ಸಾಹಿತಿ ಗೊರೂರು ಅನಂತರಾಜು, ಕನ್ನಡ ಪುಸ್ತಕ ಪ್ರಾಧಿಕಾರದ ಸದಸ್ಯ ಕುಶಾಲ್ ಬರಗೂರು, ನಿವೃತ್ತ ಪತ್ರಾಂಕಿತ ವ್ಯವಸ್ಥಾಪಕ ಬಳ್ಳೇಕೆರೆ ಮಂಜುನಾಥ್, ಕಲಾವಿದ ಉಮಾಶಂಕರಸ್ವಾಮಿ, ಕುಮಾರ್ , ಅಕ್ಕಿಹೆಬ್ಬಾಳು ರಮೇಶ್, ಮೊಹಮದ್ ಅಜರುದ್ದೀನ್, ಅಭಿನಂದನ್ , ಚಾ.ಶಿ.ಜಯಕುಮಾರ್ , ಧನಲಕ್ಷ್ಮಿ , ಪ್ರಕಾಶ್, ವೀಣಾ ಸೇರಿದಂತೆ ಹಲವು ಗಣ್ಯರು ,ಲೋಕಾಯನ ಬಳಗದ ಸದಸ್ಯರು ಭಾಗವಹಿಸಿದ್ದರು. .

# ವಿದ್ಯಾರ್ಥಿಗಳ ಪರ ದನಿ; ಬಿಜೆಪಿ ಎಸ್ಸಿ ಮೋರ್ಚಾದ ಅಗರ ರಾಜು ಉಚ್ಚಾಟನೆ

**ಚಾಮರಾಜನಗರ,** ದೆಹಲಿಯಲ್ಲಿ ನಡೆಯುತ್ತಿರುವ ವಿದ್ಯಾರ್ಥಿಗಳ ಹೋರಾಟವನ್ನು ಬೆಂಬಲಿಸಿ ಕೇಂದ್ರ ಶಿಕ್ಷಣ ಸಚಿವ ಧರ್ಮೆಂದ್ರ ಪ್ರಧಾನ್ ರಾಜೀನಾಮೆಗೆ ಒತ್ತಾಯಿಸಿದ್ದ, ಬಿಜೆಪಿ ಮುಖಂಡ ಅಗರ ರಾಜು ಅವರನ್ನು ಪಕ್ಷದಿಂದ ಉಚ್ಚಾಟನೆ ಮಾಡಲಾಗಿದೆ.

ಬಿಜೆಪಿ ಎಸ್ಸಿ ಮೋರ್ಚಾ ರಾಜ್ಯ ಕಾರ್ಯಕಾರಿಣಿ ಮಾಜಿ ಸದಸ್ಯರಾದ ಅಗರ ರಾಜು ಅವರು, ದೆಹಲಿಯ ಜಂತರ್ ಮಂತರ್ ನಲ್ಲಿ ನಡೆಯುತ್ತಿರುವ ವಿದ್ಯಾರ್ಥಿಗಳ ಪರವಾಗಿ ಮಂಗಳವಾರ ಯಳಂದೂರು ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿ ನಡೆಸಿದ್ದರು. ಈ ವೇಳೆ ಕೇಂದ್ರ ಶಿಕ್ಷಣ ಸಚಿವ ಧರ್ಮೆಂದ್ರ ಪ್ರಧಾನ್ ಅವರು ರಾಜೀನಾಮೆ ನೀಡಬೇಕು ಎಂದು ಒತ್ತಾಯ ಮಾಡಿದ್ದರು.

ಅದಲ್ಲದೇ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯ ಸಂಬಂಧ ಆಕ್ರೋಶ ವ್ಯಕ್ತಪಡಿಸಿ, ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿಗಳ ಕುಟುಂಬಕ್ಕೆ ಸೂಕ್ತ ಪರಿಹಾರ ನೀಡಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಅವರಲ್ಲಿ ಒತ್ತಾಯಿಸಿದ್ದರು.

6 ವರ್ಷ ಉಚ್ಚಾಟನೆ: ಬಿಜೆಪಿ ಎಸ್ಸಿ ಮೋರ್ಚಾ ರಾಜ್ಯ ಕಾರ್ಯಕಾರಿಣಿ ಮಾಜಿ ಸದಸ್ಯ ಅಗರ ರಾಜು ಅವರು ವಿದ್ಯಾರ್ಥಿಗಳ ಪರವಾಗಿ ಧ್ವನಿ ಎತ್ತುವ ಮೂಲಕ ಕೇಂದ್ರ ಶಿಕ್ಷಣ ಸಚಿವ ಧರ್ಮೆಂದ್ರ ಪ್ರಧಾನ್ ಅವರ ರಾಜೀನಾಮೆಗೆ ಒತ್ತಾಯಿಸಿದ ಹಿನ್ನೆಲೆಯಲ್ಲಿ, ಪಕ್ಷ ವಿರೋಧಿ ಚಟುವಟಿಕೆಯಲ್ಲಿ ತೊಡಗಿಸಿಕೊಂಡಿದ್ದಾರೆ ಎಂದು ಸುಮಾರು 6 ವರ್ಷಗಳ ಅಗರ ರಾಜು ಅವರನ್ನು ಉಚ್ಚಾಟನೆಗೊಳಿಸಿ ಬಿಜೆಪಿ ಜಿಲ್ಲಾ ಶಿಸ್ತು ಸಮಿತಿ ಅಧ್ಯಕ್ಷ ಮೂಡ್ನಾಕೂಡು ಪ್ರಕಾಶ್ ಆದೇಶ ಹೊರಡಿಸಿದ್ದಾರೆ.

# ಯೋಜನೆಯಿಂದ ಹೊರಗುಳಿದಿರುವ ಅರ್ಹರನ್ನು ಗುರುತಿಸಿ

## ಅರ್ಹ ಫಲಾನುಭವಿಗಳಿಗೆ ಗ್ಯಾರಂಟಿ ಯೋಜನೆ ದೊರೆಯಲಿ



**ಮೈಸೂರು:** ಅರ್ಹ ಫಲಾನುಭವಿಗಳು ಸರ್ಕಾರದ ಗ್ಯಾರಂಟಿ ಯೋಜನೆಗಳ ಸೌಲಭ್ಯದಿಂದ ವಂಚಿತರಾಗದಂತೆ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು. ಯೋಜನೆಯಿಂದ ಹೊರಗುಳಿದಿರುವ ಅರ್ಹರನ್ನು ಗುರುತಿಸಿ ನೋಂದಣಿ ಮಾಡಿಸಬೇಕು ಹಾಗೂ ಮೃತ ಫಲಾನುಭವಿಗಳನ್ನು ಯೋಜನೆಗಳಿಂದ ಕೈಬಿಡುವ ಪ್ರಕ್ರಿಯೆಯನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಅರುಣ್‌ಕುಮಾರ್ ಸೂಚಿಸಿದರು.

ಜಿಲ್ಲಾ ಪಂಚಾಯಿತಿಯ ಡಿ.ದೇವರಾಜ ಅರಸು ಸಭಾಂಗಣದಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗೃಹಜ್ಯೋತಿ ಯೋಜನೆಯ ಫಲಾನುಭವಿಗಳ ಮಾಹಿತಿ ನವೀಕರಣ ಕಾರ್ಯ ನಡೆಯುತ್ತಿದ್ದು, ಅರ್ಹರು ಹೊರಗುಳಿಯದಂತೆ ಚೆಸ್ಕಾಂ ಅಧಿಕಾರಿಗಳು ಗಮನಹರಿಸಬೇಕು. ಮೀಟರ್ ಓದುಗರು ಮನೆ-ಮನೆಗೆ ಭೇಟಿ ನೀಡಿ ಅಗತ್ಯ ಮಾಹಿತಿ ಮತ್ತು ದಾಖಲೆಗಳನ್ನು ನವೀಕರಿಸಬೇಕು ಎಂದರು.

ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಸೌಲಭ್ಯ ಸರಾಗವಾಗಿ ದೊರೆಯುವಂತೆ ನೋಡಿಕೊಳ್ಳಬೇಕು. ನಿಗದಿತ ನಿಲ್ದಾಣಗಳಲ್ಲಿ ಬಸ್‌ಗಳನ್ನು ನಿಲ್ಲಿಸಿ ಪ್ರಯಾಣಿಕರನ್ನು ಹತ್ತಿಸಿಕೊಳ್ಳಬೇಕು. ಇಲವಾಲ ಪೊಲೀಸ್ ಠಾಣೆ ಮುಂಭಾಗ ಬಸ್ ತಂಗುದಾಣ ನಿರ್ಮಿಸಬೇಕು. ಜನಸಂದಣಿ ಹೆಚ್ಚಿರುವ ಪ್ರದೇಶಗಳಲ್ಲಿ ಹೆಚ್ಚುವರಿ ಬಸ್‌ಗಳನ್ನು ಓಡಿಸಬೇಕು. ಶಾಲಾ-ಕಾಲೇಜುಗಳ ಸಮಯದಲ್ಲಿ ಹೆಚ್ಚಿನ ಬಸ್‌ಗಳ ವ್ಯವಸ್ಥೆ ಮಾಡಬೇಕು ಎಂದು ಕೆಎಸ್‌ಆರ್‌ಟಿಸಿ ಅಧಿಕಾರಿಗಳಿಗೆ ಸೂಚಿಸಿದರು.

ಪಡಿತರ ವಿತರಣೆ ವೇಳೆ ತೂಕ ಮತ್ತು ಅಳತೆಯಲ್ಲಿ ಫಲಾನುಭವಿಗಳಿಗೆ ಯಾವುದೇ ಮೋಸವಾಗದಂತೆ ಎಚ್ಚರಿಕೆ ವಹಿಸಬೇಕು. ಗುಣಮಟ್ಟದ ಆಹಾರ ಧಾನ್ಯ ವಿತರಿಸಬೇಕು. ಯುವನಿಧಿ ಯೋಜನೆಗೆ ಹೊಸದಾಗಿ ನೋಂದಣಿ ಮಾಡಿಕೊಳ್ಳುವ ಕುರಿತು ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದರು.

ಪ್ರಾಧಿಕಾರದ ಉಪಾಧ್ಯಕ್ಷ ಶಿವಕುಮಾರ್ ಮಾತನಾಡಿ, ಜನಸಂದಣಿ ಇಲ್ಲದ ಸುರಕ್ಷಿತ ಸ್ಥಳಗಳಲ್ಲಿ ವಿದ್ಯುತ್ ಪರಿವರ್ತಕಗಳನ್ನು ಅಳವಡಿಸಿ, ಅವುಗಳ ಸುತ್ತ ಸುರಕ್ಷತಾ ಬೇಲಿ ನಿರ್ಮಿಸಬೇಕು. ಕೆಎಸ್‌ಆರ್‌ಟಿಸಿ ಚಾಲಕರು ಮತ್ತು ನಿರ್ವಾಹಕರು ಪ್ರಯಾಣಿಕರೊಂದಿಗೆ ಸೌಜನ್ಯದಿಂದ ವರ್ತಿಸುವಂತೆ ಸೂಚನೆ ನೀಡಬೇಕು. ಮೃತ ಫಲಾನುಭವಿಗಳಿಗೆ ಗೃಹಲಕ್ಷ್ಮಿ ಯೋಜನೆಯಡಿ ಹಣ ಪಾವತಿಯಾಗದಂತೆ ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು ಎಂದರು.

ಚೆಸ್ಕಾಂ ಇಂಜಿನಿಯರ್ ಸುನಿಲ್ ಕುಮಾರ್ ಮಾತನಾಡಿ, ಜಿಲ್ಲೆಯಲ್ಲಿ 9,81,299 ಅರ್ಹ ಗ್ರಾಹಕರಿದ್ದು, 9,73,321 ಮಂದಿ ಗೃಹಜ್ಯೋತಿ ಯೋಜನೆಗೆ ನೋಂದಣಿಯಾಗಿದ್ದಾರೆ. ಇನ್ನೂ 7,978 ಮಂದಿ ನೋಂದಣಿ ಮಾಡಿಕೊಳ್ಳಬೇಕಿದ್ದು, ಮೀಟರ್ ಓದುಗರ ಮೂಲಕ ಮನೆ-ಮನೆಗೆ ತೆರಳಿ ನೋಂದಣಿ ಹಾಗೂ ಮಾಹಿತಿ ನವೀಕರಣ ಕಾರ್ಯ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿ ವೀರೇಶ್ ಮಾತನಾಡಿ, ಜಿಲ್ಲೆಯಲ್ಲಿ 29 ಅಪಘಾತಗಳು ಸಂಭವಿಸಿದ್ದು, ಚಾಲಕರ ಅಜಾಗರೂಕತೆಯಿಂದ 22 ಅಪಘಾತಗಳು ಸಂಭವಿಸಿವೆ. ಏಳು ಮಂದಿ ಮೃತಪಟ್ಟಿದ್ದಾರೆ. ಅಪಘಾತಗಳಿಗೆ ಕಾರಣರಾದ ಚಾಲಕರಿಗೆ ಸಮಾಲೋಚನೆ ನೀಡಲಾಗಿದೆ. ರಾತ್ರಿ ವೇಳೆ ಅಪಘಾತಗಳ ಸಂಖ್ಯೆ ಕಡಿಮೆಯಾಗಿದೆ ಎಂದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ನಾಗರಾಜು ಮಾತನಾಡಿ, ಗೃಹಲಕ್ಷ್ಮಿ ಯೋಜನೆಯಡಿ ಈವರೆಗೆ 34 ಕಂತುಗಳ ಹಣ ಬಿಡುಗಡೆಯಾಗಿದ್ದು, ಮೇ ಅಂತ್ಯದವರೆಗೆ ಕಂತುಗಳ ಪಾವತಿ ಮಾಡಲಾಗಿದೆ. ಜಿಲ್ಲೆಯಲ್ಲಿ 5,505 ಮೃತ ಫಲಾನುಭವಿಗಳಿಗೆ ಹಣ ಬಿಡುಗಡೆಯಾಗಿದ್ದು, ಆ ಹಣವನ್ನು ಕುಟುಂಬಸ್ಥರಿಂದ ವಸೂಲಿ ಮಾಡಿ ಸರ್ಕಾರಕ್ಕೆ ಪಾವತಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಸಭೆಯಲ್ಲಿ ಜಿಪಂ ಸಿಇಓ ಎಸ್. ಯುಕೇಶ್‌ಕುಮಾರ್, ಮುಖ್ಯ ಯೋಜನಾಧಿಕಾರಿ ಪ್ರಭುಸ್ವಾಮಿ, ಉಪಾಧ್ಯಕ್ಷ ಹುಣಸೂರು ಬಸವಣ್ಣ, ಕರಿಗೌಡ ಬಿ.ಎನ್., ಸದಸ್ಯರಾದ ಸಾಮಾ ಯೋಗೇಶ್, ಉತ್ತನಹಳ್ಳಿ ಶಿವಣ್ಣ, ಚಾಮರಾಜು, ಚಲುವರಾಜು, ಅಬ್ದುಲ್ ಖಾದರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ರಾಮನಗರ ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ

## ಯುವ ಜನತೆಗೆ ತಂಬಾಕು ದುಷ್ಪರಿಣಾಮ ತಿಳಿಸಿ



**ರಾಮನಗರ:** ತಂಬಾಕು ಉತ್ಪನ್ನಗಳ ಬಳಕೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಯುವ ಜನರಲ್ಲಿ ಹೆಚ್ಚಿನ ಅರಿವು ಮೂಡಿಸುವ ಮೂಲಕ ಜಿಲ್ಲೆಯನ್ನು ತಂಬಾಕು ಮುಕ್ತವನ್ನಾಗಿಸಲು ಸಂಬಂಧಿಸಿದ ಇಲಾಖೆಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ನಡೆದ ಜಿಲ್ಲಾ ಸಮನ್ವಯ ಸಮಿತಿಯ ಎರಡನೇ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆಗಸ್ಟ್ 1ರಂದು ವ್ಯಸನ ಮುಕ್ತ ದಿನಾಚರಣೆ ಅಂಗವಾಗಿ ಜಿಲ್ಲೆಯ ಪ್ರತಿ ತಾಲ್ಲೂಕಿನ ಕನಿಷ್ಠ 2ರಿಂದ 3 ಶಾಲಾ-ಕಾಲೇಜುಗಳಲ್ಲಿ ಆರೋಗ್ಯ, ಪೊಲೀಸ್ ಹಾಗೂ ಸ್ಥಳೀಯ ಸಂಸ್ಥೆಗಳ ಸಹಯೋಗದಲ್ಲಿ ತಂಬಾಕು ಸೇವನೆಯ ದುಷ್ಪರಿಣಾಮಗಳ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಪ್ರಾಥಮಿಕ ಆರೋಗ್ಯ ಕೇಂದ್ರಗಳ ವೈದ್ಯರು ಪ್ರತಿ ತಿಂಗಳು ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಬೇಕು ಎಂದು ತಿಳಿಸಿದರು.

2026-27ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ಈವರೆಗೆ 13 ಕೋಟ್ಪಾ ಕಾಯ್ದೆ ಕಾರ್ಯಾಚರಣೆ ನಡೆಸಿ, 90 ಉಲ್ಲಂಘನೆ ಪ್ರಕರಣ ದಾಖಲಿಸಿ ರೂ.17,400 ದಂಡ ವಿಧಿಸಲಾಗಿದೆ. ಪ್ರತಿ ತಾಲ್ಲೂಕಿನಲ್ಲಿ ಮಾಸಿಕ ಕನಿಷ್ಠ ನಾಲ್ಕು ಕಾರ್ಯಾಚರಣೆ ನಡೆಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ತಂಬಾಕು ಉತ್ಪನ್ನ ಮಾರಾಟಕ್ಕೆ ಪರವಾನಗಿ ಕಡ್ಡಾಯವಾಗಿದ್ದು, ಪರವಾನಗಿ ಇಲ್ಲದೆ ಮಾರಾಟ ಮಾಡುವ ಅಂಗಡಿಗಳ ವಿರುದ್ಧ ದಂಡ ವಿಧಿಸಿ, ಅಗತ್ಯವಿದ್ದಲ್ಲಿ ವ್ಯಾಪಾರ ಪರವಾನಗಿ ರದ್ದುಪಡಿಸಲು ಕ್ರಮ ಕೈಗೊಳ್ಳಬೇಕು ಎಂದರು.

ಶಾಲಾ-ಕಾಲೇಜುಗಳ 100 ಮೀಟರ್ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನಗಳ ಮಾರಾಟ ನಡೆಯದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ರೆಸಾರ್ಟ್‌ಗಳು ಹಾಗೂ ಹೋಂಸ್ಟೇಗಳಲ್ಲಿಯೂ ತಂಬಾಕು ಉತ್ಪನ್ನಗಳ ಮಾರಾಟದ ಬಗ್ಗೆ ನಿಗಾ ವಹಿಸಿ, ಅಗತ್ಯವಿದ್ದಲ್ಲಿ ದಾಳಿ ನಡೆಸಬೇಕು. ತಂಬಾಕು ಸೇವನೆಯಿಂದ ಕ್ಯಾನ್ಸರ್ ಸೇರಿದಂತೆ ಮಾರಣಾಂತಿಕ ಕಾಯಿಲೆಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಯುವ ಜನರಲ್ಲಿ ವ್ಯಾಪಕ ಜಾಗೃತಿ ಮೂಡಿಸುವುದು ಅತ್ಯಗತ್ಯ ಎಂದು ಹೇಳಿದರು. ಸಭೆಯಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಶೇಖರ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಕಿರಣ್‌ಶಂಕರ್, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ಕುಮಾರ್, ತಾಲ್ಲೂಕು ಆರೋಗ್ಯಾಧಿಕಾರಿಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೆಯುಡಬ್ಲ್ಯೂಜೆ ದತ್ತಿನಿಧಿ ವಾರ್ಷಿಕ ಪ್ರಶಸ್ತಿಗಳ ಪ್ರಕಟ

## ಚಿಕ್ಕಮಗಳೂರಿನಲ್ಲಿ ಜುಲೈ 25ಕ್ಕೆ ಪ್ರಶಸ್ತಿ ಪ್ರದಾನ ಕಾರ್ಯಕ್ರಮ


**ಬೆಂಗಳೂರು:** ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದಿಂದ ಕೊಡ ಮಾಡುವ ಕೆಯುಡಬ್ಲೂಜೆ ದತ್ತಿನಿಧಿ ಪ್ರಶಸ್ತಿಗಳನ್ನು ಪ್ರಕಟ ಮಾಡಲಾಗಿದೆ.

ವೃತ್ತಿ ಸೇವೆ, ಸಾಮಾಜಿಕ ಬದ್ಧತೆ ಮತ್ತು ಸಾಧನೆಗಳಿಗಾಗಿ ಕೆಯುಡಬ್ಲ್ಯುಜೆ ದತ್ತಿನಿಧಿ ಪ್ರಶಸ್ತಿಯನ್ನು ನೀಡಲಾಗುವುದು. ಪ್ರಶಸ್ತಿಯು ಫಲಕ, ಪ್ರಶಸ್ತಿ ಪತ್ರ, 5ಸಾವಿರ ನಗದು, ಕೆಯುಡಬ್ಲ್ಯೂಜೆ ಗೌರವಾದರಗಳನ್ನು ಒಳಗೊಂಡಿದೆ.

ಚಿಕ್ಕಮಗಳೂರಿನಲ್ಲಿ ಜುಲೈ 25ಕ್ಕೆ ನಡೆಯಲಿರುವ ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುವುದು ಎಂದು ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಮತ್ತು ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್ ಅವರು ತಿಳಿಸಿದ್ದಾರೆ.

**ಪ್ರಶಸ್ತಿಗಳ ವಿವರ ಇಂತಿದೆ.**

- **ಡಿ.ವಿ.ಜಿ.ಪ್ರಶಸ್ತಿ :** ಬಿ.ವಿ.ಗೋಪಿನಾಥ್, ಸಂಯುಕ್ತ ಕರ್ನಾಟಕ, ಕೋಲಾರ
- **ಗೊಮ್ಮಟ ಮಾಧ್ಯಮ ಪ್ರಶಸ್ತಿ:** ಗಿರೀಶ್ ರಾವ್ ಹತ್ವಾರ್ (ಜೋಗಿ), ಸಂಪಾದಕರು, ಕನ್ನಡಪ್ರಭ
- **ಎಚ್. ಎಸ್. ದೊರೆಸ್ವಾಮಿ ಪ್ರಶಸ್ತಿ:** ರವಿಪ್ರಕಾಶ್, ಪ್ರಜಾವಾಣಿ
- **ಎಸ್.ವಿ. ಜಯಶೀಲರಾವ್ ಪ್ರಶಸ್ತಿ:** ಜಾನ್ ಮಥಾಯಿಸ್, ಹಿರಿಯ ಪತ್ರಕರ್ತರು.
- **ಸಿ.ಆರ್.ಕೃಷ್ಣರಾವ್ ಪ್ರಶಸ್ತಿ:** ಅನಂತ ಚಿನಿವಾರ್, ಹಿರಿಯ ಪತ್ರಕರ್ತರು
- **ಡಾ.ಎಂ.ಎಂ.ಕಲ್ಬುರ್ಗಿ ಪ್ರಶಸ್ತಿ:** ಮೀನಾ ಮೈಸೂರು
- **ಡಾ.ಬಿ.ಆರ್.ಅಂಬೇಡ್ಕರ್ ಪ್ರಶಸ್ತಿ:** ಮಾವಳ್ಳಿ ಶಂಕರ್, ಅಂಬೇಡ್ಕರ್ ವಾದ ಪತ್ರಿಕೆ
  **ಪಾಟೀಲ್ ಪುಟ್ಟಪ್ಪ(ಪಾಪು) ಪ್ರಶಸ್ತಿ:** ಅಡಿವೆಪ್ಪ ಇನಾಂದಾರ, ಹಿರಿಯ ಪತ್ರಕರ್ತರು, ಬಾದಾಮಿ
- **ಶ್ರೀಮತಿ ಯಶೋದಮ್ಮ ಜಿ. ನಾರಾಯಣ ಪ್ರಶಸ್ತಿ:** ಮಂಜುಳ ಕಿರುಗಾವಲು, ಜನೋದಯ, ಮಂಡ್ಯ
- **ಬದರಿನಾಥ ಹೊಂಬಾಳೆ ಪ್ರಶಸ್ತಿ :** ಡಿ.ಜಿ.ಮೋಮಿನ್, ಗಂಜೇಂದ್ರಗಡ, ಗದಗ
- **ಕಿಡಿಶೇಷಪ್ಪ ಪ್ರಶಸ್ತಿ:** ದಿನೇಶ್ ಗೌಡಗೆರೆ, ಸಂಪಾದಕರು, ಇಬ್ಬನಿ ಸೂರ್ಯ, ಚಿತ್ರದುರ್ಗ
- **ರವಿ ಬೆಳಗೆರೆ ಪ್ರಶಸ್ತಿ:**



ಎಚ್.ಸಿ.ದಿನೇಶ್ ಕುಮಾರ್, ಹಿರಿಯ ಪತ್ರಕರ್ತರು

- **ಪಿ.ಆರ್. ರಾಮಯ್ಯ ಸ್ಮಾರಕ ಪ್ರಶಸ್ತಿ:** ಭವಾನಿ ಲಕ್ಷ್ಮಿನಾರಾಯಣ, ಹಿರಿಯ ಪತ್ರಕರ್ತರು, ಚಿಕ್ಕಬಳ್ಳಾಪುರ
  **ಹೆಚ್.ಕೆ. ವೀರಣ್ಣಗೌಡ ಸ್ಮಾರಕ ಪ್ರಶಸ್ತಿ:** ಬಿ.ಎಸ್.ಜಯರಾಂ, ಪಾಂಡವಪುರ
- **ರಾಜಶೇಖರ ಕೋಟಿ ಪ್ರಶಸ್ತಿ:** ಟಿ.ವಿ.ರಾಜೇಶ್ವರ, ಆಂದೋಲನ, ಮೈಸೂರು
- **ಪಿ.ರಾಮಯ್ಯ ಪ್ರಶಸ್ತಿ:** ಎಚ್.ಬಿ.ದಿನೇಶ್, ಹಿರಿಸಾವೆ.
- ಮಾ. ರಾಮಮೂರ್ತಿ ಪ್ರಶಸ್ತಿ: ಶಿವಮೂರ್ತಿ, ಹಿರಿಯ ಪತ್ರಕರ್ತರು, ರಾಯಚೂರು
- ಮಹದೇವ ಪ್ರಕಾಶ್ ಪ್ರಶಸ್ತಿ: ಸುರೇಶ್ ಕೆ, ವಿಜಯ ಕರ್ನಾಟಕ, ಬೆಳಗಾವಿ.
- **ಶಿವಮೊಗ್ಗ ಮಿಂಚು ಶ್ರೀನಿವಾಸ ಪ್ರಶಸ್ತಿ:** ಶ್ರೀಕಾಂತ್ ಭಟ್, ವಿಜಯವಾಣಿ, ಬೆಂಗಳೂರು
- **ಎಚ್.ಎಸ್. ರಂಗಸ್ವಾಮಿ ಪ್ರಶಸ್ತಿ:** ಜಿ.ವಾದಿರಾಜ್ ಕಮರೂರು, ಸ್ಥಾನಿಕ ಸಂಪಾದಕರು, ಹೊಸದಿಗಂತ, ಶಿವಮೊಗ್ಗ
- **ಎಂ.ನಾಗೇಂದ್ರ ರಾವ್ ಪ್ರಶಸ್ತಿ:** ಕಣ್ಣಪ್ಪ ಉಷಾಮಹಿ, ಹಿರಿಯ ಪತ್ರಕರ್ತರು, ಶಿವಮೊಗ್ಗ
- **ಶ್ರೀಮತಿ ಗಿರಿಜಮ್ಮ, ರುದ್ರಪ್ಪ ತಾಳಿಕೋಟಿ ಪ್ರಶಸ್ತಿ:** ಬಿ.ಕೆ.ರಮ್ಯಶ್ರೀ, ಚಂದನ/ಆಕಾಶವಾಣಿ
- **ಅಪ್ಪಾಜಿಗೌಡ (ಸಿನಿ)ಪ್ರಶಸ್ತಿ:** ಹರ್ಷವರ್ಧನ್ ಬ್ಯಾಡನೂರು, ವಿಜಯವಾಣಿ
- **ಮೂಡಣ, ಹಾವೇರಿ ಪ್ರಶಸ್ತಿ:** ಎಸ್.ಆರ್.ನಂದಿಹಳ್ಳಿ, ಡಿಡಿ1, ಹಾವೇರಿ

**ಕೆಯುಡಬ್ಲ್ಯೂಜೆ ವಿಶೇಷ ಪ್ರಶಸ್ತಿಗಳು:**

- ರುದ್ರಯ್ಯ ಕೆ.ಎಚ್. ವಿಜಯ ಕರ್ನಾಟಕ, ಚಿಕ್ಕಮಗಳೂರು
  ಕಿರಣ್ ಕೆ. ಸುವರ್ಣ ನ್ಯೂಸ್, ಚಿಕ್ಕಮಗಳೂರು
- ಬಿ.ಉಮೇಶ್ ನಾಯಕ್, ವಿಜಯವಾಣಿ, ಚಿಕ್ಕಮಗಳೂರು
- ಬಿಳಿಗಿರಿ ಶ್ರೀನಿವಾಸ್– ಚಾಮರಾಜನಗರ
  ಎಚ್.ಪಿ.ರವಿಕುಮಾರ್, ಜನತಾ ಮಾಧ್ಯಮ, ಹಾಸನ.

# ಎಸ್.ಜಾನಕಿ ಅವರು ತಮ್ಮ ಗಾಯನದ ಮೂಲಕ ಜನಮಾನಸದಲ್ಲಿ ಅಜರಾಮರ: ಜಿಲ್ಲಾಧಿಕಾರಿ ಶ್ರೀರೂಪ

**ಚಾಮರಾಜನಗರ:** ಗಾನ ಕೋಗಿಲೆ ಎಸ್.ಜಾನಕಿ ಅವರು ತಮ್ಮ ಸುಮಧರ ಕಂಠ, ಅದ್ಭುತ ಗಾಯನದ ಮೂಲಕ ಜನರಮನಸ್ಸಿನಲ್ಲಿ ಎಂದೆಂದಿಗೂ ಅಜರಾಮರವಾಗಿ ಉಳಿದಿದ್ದಾರೆ ಎಂದು ಜಿಲ್ಲಾಧಿಕಾರಿ ಶ್ರೀರೂಪ ಹೇಳಿದರು.

ನಗರದ ಭುವನೇಶ್ವರಿ ವೃತ್ತದಲ್ಲಿ ಡಾ.ಎಸ್.ಪಿ.ಬಾಲಸುಬ್ರಹ್ಮಣ್ಯಂ ಗಾನ ಗಂಧರ್ವ ಸಾಂಸ್ಕೃತಿಕ ಕಲಾ ವೇದಿಕೆ, ಯುವ ಕರ್ನಾಟಕ ವೇದಿಕೆ ವತಿಯಿಂದ ಆಯೋಜಿಸಿದ್ದ ಗಾನ ಕೋಗಿಲೆ ಎಸ್. ಜಾನಕಿ ಅವರ ಪುಣ್ಯಸ್ಮರಣಾ ಕಾರ್ಯಕ್ರಮದಲ್ಲಿ ಅವರು ಭಾಗವಹಿಸಿ ಪುಷ್ಪಾರ್ಚನೆ ಮಾಡಿ ಮಾತನಾಡಿದರು.

ಎಸ್. ಜಾನಕಿ ಅವರು 17ಕ್ಕೂ ಹೆಚ್ಚು ಭಾಷೆಗಳಲ್ಲಿ ಸುಮಾರು 48 ಸಾವಿರ ಹಾಡುಗಳನ್ನು ಹಾಡಿದ್ದಾರೆ. ಅವರ ಧ್ವನಿಯು ಪ್ರತಿಯೊಬ್ಬರ ಭಾವನೆಗಳಿಗೆ ಕನ್ನಡಿಯಾಗಿತ್ತು. ಅವರು ಜನಮಾನಸದಲ್ಲಿ ಹಸಿರಾಗಿದ್ದು, ಸಂಗೀತ ಲೋಕದ ಕಣ್ಮಣಿಯಾಗಿ ಶಾಶ್ವತವಾಗಿ ಉಳಿದಿದ್ದಾರೆ. ಅವರ ಆತ್ಮಕ್ಕೆ ಶಾಂತಿ ನೆಲೆಸಲಿ ಎಂದು ಆಶಿಸಿದರು.

ನಂತರ ಸಾರ್ವಜನಿಕರಿಗೆ ಅನ್ನಸಂತರ್ಪಣೆ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ನಗರಸಭಾ ಸದಸ್ಯರಾದ ಗಣೇಶ್ ದೀಕ್ಷಿತ್, ಮಾಜಿ ಅಧ್ಯಕ್ಷೆ ಚಿನ್ನಮ್ಮ, ಉದ್ಯಮಿ

**ಚಾಮರಾಜನಗರದಲ್ಲಿ ಗಾನಕೋಗಿಲೆ ಎಸ್.ಜಾನಕಮ್ಮ ಪುಣ್ಯಸ್ಮರಣಾ ಕಾರ್ಯಕ್ರಮ, ಅನ್ನಸಂತರ್ಪಣೆ**

ಶ್ರೀನಿಧಿಕುದರ್, ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಗೌರವಾಧ್ಯಕ್ಷ ಕೃಷ್ಣನಾಯಕ. ಜಿಲ್ಲಾರೈತ ಹಿತರಕ್ಷಣಾ ಹೋರಾಟ ಸಮಿತಿ ಜಿಲ್ಲಾಧ್ಯಕ್ಷ ಆಲೂರಮಲ್ಲು, ಪ್ರಧಾನ ಕಾರ್ಯದರ್ಶಿ ಬಸವನಪುರ ರಾಜಶೇಖರ, ಎಲ್.ಸುರೇಶ್,ಜಿ.ಎಂ.ಶಂಕರ್, ವೆಂಕಟೇಶ್, ಡಾ.ಎನ್.ಪಿ.ಬಾಲಸುಬ್ರಹ್ಮಣ್ಯಂ ಗಾನ ಗಂಧರ್ವ ಸಾಂಸ್ಕೃತಿಕ ಕಲಾ ವೇದಿಕೆಯ ಜಿಲ್ಲಾಧ್ಯಕ್ಷ ಮಂಗಲದ ಹೊಸೂರು ಶಿವಣ್ಣ, ಉಪಾಧ್ಯಕ್ಷೆ ವಸಂತಮ್ಮ, ಗೌರವಾಧ್ಯಕ್ಷ ಬಂಗಾರು, ಕಾರ್ಯದರ್ಶಿ ಜೋಸೆಫ್, ಆಟೋ ಲಿಂಗರಾಜು, ಯುವ ಕರ್ನಾಟಕ ವೇದಿಕೆಯ ತಾಲೂಕು ಅಧ್ಯಕ್ಷ ಆರ್.

ರಾಘವೇಂದ್ರ, ಗೌರವ ಅಧ್ಯಕ್ಷರಾದ ಸುಂದರ್ ರಾಮಸಮುದ್ರ. ತಾಲೂಕು ಉಪಾಧ್ಯಕ್ಷ ರಾಜೇಂದ್ರ ಮಡಿವಾಳ, ತಾಲೂಕು ಕಾರ್ಯದರ್ಶಿ ಮಹೇಶ್ ಇತರರು ಹಾಜರಿದ್ದರು.





ಶಿವಬಸಪ್ಪ ಗು ಜಂಗಾಲಿ



# ಕಲಾವಿದರು ಬೇಕಾಗಿದ್ದಾರೆ

## ನಕಲಿ ಆಡಿಷನ್‌ಗಳ ಬಲೆಗೆ ಸಿಲುಕುವ ನಟಿಯರು

ಚಿತ್ರರಂಗ, ಧಾರಾವಾಹಿ, ವೆಬ್‌ಸಿರೀಸ್, ಜಾಹೀರಾತು, ಆಲ್ಬಮ್ ಹಾಡುಗಳು ಇವುಗಳ ಕನಸು ಕಾಣುವ ಸಾವಿರಾರು ಯುವ ಪ್ರತಿಭೆಗಳ ಮನಸ್ಸಿನಲ್ಲಿ ಒಂದೇ ಆಸೆ ಇರುತ್ತದೆ: "ಒಮ್ಮೆ ಅವಕಾಶ ಸಿಕ್ಕರೆ ನನ್ನ ಪ್ರತಿಭೆಯನ್ನು ತೋರಿಸಬೇಕು." ಈ ಕನಸೇ ಕೆಲವರಿಗೆ ಯಶಸ್ಸಿನ ಬಾಗಿಲಾಗುತ್ತದೆ. ಆದರೆ ಇದೇ ಕನಸನ್ನು ಬಂಡವಾಳವನ್ನಾಗಿ ಮಾಡಿಕೊಂಡು, ನಕಲಿ ಆಡಿಷನ್‌ಗಳ ಹೆಸರಿನಲ್ಲಿ ಮೋಸ ಮಾಡುವ ಕೆಲವರು ಯುವ ನಟಿಯರ ಬದುಕನ್ನು ಕತ್ತಲೆಗೆ ತಳ್ಳುತ್ತಿರುವುದು ಕಳವಳಕಾರಿ ಸಂಗತಿ.

ಇಂದು ಸಾಮಾಜಿಕ ಜಾಲತಾಣಗಳಲ್ಲಿ "ಕಲಾವಿದರು ಬೇಕಾಗಿದ್ದಾರೆ", "ಹೊಸ ಮುಖಗಳಿಗೆ ಅವಕಾಶ", "ಹೀರೋಯಿನ್ ಆಯ್ಕೆ", "ತಕ್ಷಣ ಸಂಪರ್ಕಿಸಿ" ಎಂಬ ಜಾಹೀರಾತುಗಳು ತುಂಬಾ ಸುಲಭವಾಗಿ ಕಾಣಿಸುತ್ತವೆ. ಎಲ್ಲವೂ ನಿಜವಾದ ಅವಕಾಶಗಳೇ ಆಗಿರುವುದಿಲ್ಲ. ಕೆಲವು ಜಾಹೀರಾತುಗಳು ಪ್ರತಿಭೆಯನ್ನು ಹುಡುಕುವುದಕ್ಕಿಂತ, ನಂಬಿಕೆಯನ್ನು ದುರುಪಯೋಗಪಡಿಸಿಕೊಳ್ಳಲು ರೂಪಿಸಲಾದ ಬಲೆಗಳಾಗಿರುತ್ತವೆ.

ಕಲೆಯ ಮೇಲಿನ ಪ್ರೀತಿ, ಸಿನಿಮಾ ಲೋಕದ ಮೇಲಿನ ಆಕರ್ಷಣೆ ಮತ್ತು ಬೇಗನೆ ಹೆಸರು ಮಾಡಬೇಕೆಂಬ ಕನಸು ಇವೆಲ್ಲವೂ ಒಬ್ಬ ಯುವ ಕಲಾವಿದನಿಗೆ ಸಹಜ. ಆದರೆ ಕನಸಿನ ಹಾದಿಯಲ್ಲಿ ಎಚ್ಚರಿಕೆ ಇಲ್ಲದಿದ್ದರೆ, ಮೋಸದ ಬಲೆಗೆ ಸಿಲುಕುವ ಅಪಾಯ ಹೆಚ್ಚಾಗುತ್ತದೆ. ವಿಶೇಷವಾಗಿ ಅನುಭವವಿಲ್ಲದ ಯುವತಿಯರು ಮತ್ತು ಹೊಸ ಕಲಾವಿದರು ಇಂತಹ ನಕಲಿ ಆಡಿಷನ್‌ಗಳಿಗೆ ಸುಲಭವಾಗಿ ಬಲಿಯಾಗುತ್ತಿರುವುದು ಆತಂಕಕಾರಿ.

ನಕಲಿ ಆಯ್ಕೆ ಪ್ರಕ್ರಿಯೆಗಳು ಸಾಮಾನ್ಯವಾಗಿ ದೊಡ್ಡ ಬ್ಯಾನರ್‌ಗಳ ಹೆಸರನ್ನು ಬಳಸುವುದು, ಖ್ಯಾತ ನಿರ್ದೇಶಕರು ಅಥವಾ ನಿರ್ಮಾಪಕರ ಹೆಸರು ಹೇಳುವುದು, ನಕಲಿ ಲೋಗೋಗಳನ್ನು ಬಳಸುವುದು, ಅಥವಾ "ಸೀಮಿತ ಅವಕಾಶ" ಎಂದು ತುರ್ತು ನಿರ್ಧಾರಕ್ಕೆ ಒತ್ತಾಯಿಸುವುದು ಮುಂತಾದ ವಿಧಾನಗಳನ್ನು ಅನುಸರಿಸುತ್ತವೆ. ಕೆಲವರು ಮೊದಲು ನಂಬಿಕೆ ಗಳಿಸಿ, ನಂತರ ವಿವಿಧ ನೆಪಗಳಲ್ಲಿ ಹಣ ಕೇಳುವುದು, ಅನಗತ್ಯ ದಾಖಲೆಗಳನ್ನು ಬೇಡುವುದು ಅಥವಾ ವೈಯಕ್ತಿಕವಾಗಿ ಭೇಟಿ ಮಾಡಲು ಒತ್ತಾಯಿಸುವಂತಹ ಕೃತ್ಯಗಳನ್ನು ನಡೆಸುತ್ತಾರೆ.

ಪ್ರತಿಭೆಗೆ ಯಾವುದೇ ಶುಲ್ಕ ಇರುವುದಿಲ್ಲ. ನಿಜವಾದ ನಿರ್ಮಾಣ ಸಂಸ್ಥೆಗಳು ಅಥವಾ ಆಯ್ಕೆ ತಂಡಗಳು ಸಾಮಾನ್ಯವಾಗಿ ವೃತ್ತಿಪರ ರೀತಿಯಲ್ಲಿ ಕೆಲಸ ಮಾಡುತ್ತವೆ. ಆದರೆ ಮೋಸಗಾರರು "ನೋಂದಣಿ ಶುಲ್ಕ", "ಪೋರ್ಟ್‌ಫೋಲಿಯೊ ಕಡ್ಡಾಯ", "ಆಡಿಷನ್ ಫೀ", "ಕಾಸ್ಟ್ಯೂಮ್ ಹಣ" ಎಂಬ ನೆಪಗಳಲ್ಲಿ ಹಣ ಪಡೆಯಲು ಪ್ರಯತ್ನಿಸಬಹುದು. ಕನಸಿನ ಮುಂದೆ ಹಣದ ಮೌಲ್ಯ ಕಡಿಮೆಯೆಂದು ಭಾವಿಸುವ ಕೆಲವರು, ಈ ಬಲೆಗೆ ಸಿಲುಕುತ್ತಾರೆ.

ಇಂತಹ ಘಟನೆಗಳು ಕೇವಲ ಆರ್ಥಿಕ ನಷ್ಟವನ್ನಷ್ಟೇ ಉಂಟುಮಾಡುವುದಿಲ್ಲ. ಕೆಲವರ ಆತ್ಮವಿಶ್ವಾಸ ಕುಸಿಯುತ್ತದೆ. "ಇನ್ನು ಸಿನಿಮಾ ಕ್ಷೇತ್ರವೇ ಹೀಗಿರಬಹುದು" ಎಂಬ ತಪ್ಪು ಕಲ್ಪನೆ ಮೂಡುತ್ತದೆ. ನಿಜವಾದ ಅವಕಾಶಗಳ ಮೇಲೂ ಅನುಮಾನ ಹುಟ್ಟುತ್ತದೆ. ಕೆಲವರು ತಮ್ಮ ಕನಸನ್ನೇ ಅರ್ಧದಲ್ಲೇ ಬಿಟ್ಟುಬಿಡುತ್ತಾರೆ.

ಸಿನಿಮಾ ಕ್ಷೇತ್ರದಲ್ಲಿ ಸಾವಿರಾರು ಪ್ರಾಮಾಣಿಕ ನಿರ್ಮಾಪಕರು, ನಿರ್ದೇಶಕರು, ಸಹಾಯಕ ನಿರ್ದೇಶಕರು, ಆಯ್ಕೆ ತಂಡಗಳು ಮತ್ತು ಕಲಾವಿದರು ದುಡಿಯುತ್ತಿದ್ದಾರೆ. ಅವರ ಪರಿಶ್ರಮಕ್ಕೆ ಇಂತಹ ಮೋಸಗಾರರು ಕಳಂಕ ತರುತ್ತಿದ್ದಾರೆ. ಆದ್ದರಿಂದ ಕೆಲವರ ತಪ್ಪಿನ ಆಧಾರದ ಮೇಲೆ ಇಡೀ ಚಿತ್ರರಂಗವನ್ನು ತಪ್ಪಾಗಿ ಅರ್ಥಮಾಡಿಕೊಳ್ಳಬಾರದು. ಸಮಸ್ಯೆ ಚಿತ್ರರಂಗದಲ್ಲಲ್ಲ; ಚಿತ್ರರಂಗದ ಹೆಸರನ್ನು ದುರುಪಯೋಗಪಡಿಸಿಕೊಳ್ಳುವ ಮೋಸಗಾರರಲ್ಲಿದೆ.

ಇಂದಿನ ಡಿಜಿಟಲ್ ಯುಗದಲ್ಲಿ ಯಾವುದೇ ಅವಕಾಶವನ್ನು ಒಪ್ಪಿಕೊಳ್ಳುವ ಮೊದಲು ಅದರ ಬಗ್ಗೆ ಪರಿಶೀಲನೆ ಮಾಡುವುದು ಅತ್ಯಗತ್ಯ. ನಿರ್ಮಾಣ ಸಂಸ್ಥೆಯ ಅಧಿಕೃತ ಮಾಹಿತಿ, ಹಿಂದಿನ ಕೆಲಸಗಳು, ಸಾರ್ವಜನಿಕ ವಿವರಗಳು, ಸಂಪರ್ಕ ವಿಳಾಸ ಇವುಗಳನ್ನು ಪರಿಶೀಲಿಸುವುದು ಉತ್ತಮ ಅಭ್ಯಾಸ. ಸಂದೇಹ ಉಂಟಾದರೆ ಅನುಭವಿಗಳ ಸಲಹೆ ಪಡೆಯುವುದು ಹೆಚ್ಚು ಸುರಕ್ಷಿತ.

ಯುವ ಕಲಾವಿದರು ತಮ್ಮ ಕುಟುಂಬದವರಿಗೂ ಅಥವಾ ಆತ್ಮೀಯರಿಗೂ ಆಡಿಷನ್ ಕುರಿತು ತಿಳಿಸುವುದು ಉತ್ತಮ. ಪರಿಚಯವಿಲ್ಲದ ಸ್ಥಳಗಳಿಗೆ ಒಬ್ಬರೇ ಹೋಗದೇ, ಸಾಧ್ಯವಾದರೆ ವಿಶ್ವಾಸಾರ್ಹ ವ್ಯಕ್ತಿಯೊಂದಿಗೆ ಹೋಗುವುದು ಸೂಕ್ತ. ವೃತ್ತಿಪರ ಸಂವಹನವನ್ನು ಆದ್ಯತೆ ನೀಡುವುದು, ಎಲ್ಲ ಮಾಹಿತಿಯನ್ನೂ ದಾಖಲೆ ರೂಪದಲ್ಲಿ ಇಟ್ಟುಕೊಳ್ಳುವುದು ಸಹ ಸುರಕ್ಷತೆಯನ್ನು ಹೆಚ್ಚಿಸುತ್ತದೆ.

ಸಮಾಜವೂ ಈ ವಿಷಯದಲ್ಲಿ ಜಾಗೃತವಾಗಬೇಕು. ಮೋಸಕ್ಕೆ ಒಳಗಾದವರನ್ನು ಹಾಸ್ಯ ಮಾಡುವ ಬದಲು, ಅವರಿಗೆ ಬೆಂಬಲ ನೀಡಬೇಕು. ಇಂತಹ ಘಟನೆಗಳ ಬಗ್ಗೆ ಜಾಗೃತಿ ಮೂಡಿಸಿದಾಗ ಮಾತ್ರ ಇನ್ನಷ್ಟು ಜನರು ಎಚ್ಚರಿಕೆಯಿಂದಿರಲು ಸಾಧ್ಯ.

ಮಾಧ್ಯಮಗಳಿಗೂ ಮಹತ್ವದ ಜವಾಬ್ದಾರಿ ಇದೆ. ನಿಜವಾದ ಆಯ್ಕೆ ಪ್ರಕ್ರಿಯೆಗಳು ಹೇಗಿರುತ್ತವೆ, ನಕಲಿ ಜಾಹೀರಾತುಗಳನ್ನು ಹೇಗೆ ಗುರುತಿಸಬೇಕು, ಯಾವ ಮುನ್ನೆಚ್ಚರಿಕೆಗಳನ್ನು ಪಾಲಿಸಬೇಕು ಎಂಬ ಮಾಹಿತಿಯನ್ನು ಜನರಿಗೆ ತಲುಪಿಸಬೇಕು. ಜಾಗೃತಿ ಮೂಡಿದಷ್ಟೂ ಮೋಸಗಾರರ ಅವಕಾಶಗಳು ಕಡಿಮೆಯಾಗುತ್ತವೆ.

ಕಲೆಯ ಜಗತ್ತು ಕನಸುಗಳ ಲೋಕ. ಆ ಕನಸುಗಳಿಗೆ ಗೌರವ ಇರಬೇಕು. ಪ್ರತಿಭೆಗೆ ಅವಕಾಶ ಸಿಗಬೇಕು. ಆದರೆ ಆ ಅವಕಾಶದ ಹೆಸರಿನಲ್ಲಿ ಯಾರೂ ಮೋಸಕ್ಕೆ ಒಳಗಾಗಬಾರದು. ಪ್ರತಿಯೊಬ್ಬ ಕಲಾವಿದನ ಕನಸು ಸುರಕ್ಷಿತವಾಗಿರಬೇಕು; ಪ್ರತಿಯೊಬ್ಬ ಯುವತಿಯ ಆತ್ಮಗೌರವ ಕಾಪಾಡಲ್ಪಡಬೇಕು.

"ಕಲಾವಿದರು ಬೇಕಾಗಿದ್ದಾರೆ" ಎಂಬ ಒಂದು ಸಾಲಿನ ಜಾಹೀರಾತನ್ನು ನೋಡುವಾಗ ಉತ್ಸಾಹದ ಜೊತೆಗೆ ವಿವೇಕವೂ ಇರಲಿ. ಅವಕಾಶವನ್ನು ಸ್ವಾಗತಿಸುವ ಮೊದಲು ಅದರ ವಿಶ್ವಾಸಾರ್ಹತೆಯನ್ನು ಪರಿಶೀಲಿಸಿ. ಪ್ರತಿಭೆ ನಿಮ್ಮ ಶಕ್ತಿ; ಎಚ್ಚರಿಕೆ ನಿಮ್ಮ ರಕ್ಷಣೆ. ಜಾಗೃತ ಸಮಾಜ ಮತ್ತು ಜವಾಬ್ದಾರಿಯುತ ಕಲಾರಂಗ ಒಂದಾದಾಗ ಮಾತ್ರ ನಕಲಿ ಆಡಿಷನ್‌ಗಳ ಬಲೆಗಳು ದುರ್ಬಲವಾಗುತ್ತವೆ, ನಿಜವಾದ ಪ್ರತಿಭೆಗಳು ಬೆಳಕಿಗೆ ಬರುತ್ತವೆ.


# ಯೋಚನೆಯೇ ಶಕ್ತಿ: ಮೆದುಳಿಗೆ ನೀಡಿ ವ್ಯಾಯಾಮ



ಡಾ. ಈರಪ್ಪ ಲಕ್ಷ್ಮಣ ಘಸ್ತಿ

ಯೋಚನೆಯೇ ಶಕ್ತಿ: ಮೆದುಳಿಗೆ ನೀಡಿ ವ್ಯಾಯಾಮ

ಯಶಸ್ಸಿಗೆ ರಾತ್ರಿ ಎಚ್ಚರಕ್ಕಿಂತ ದೊಡ್ಡ ಶಕ್ತಿ ಬೇಕು. ಅದು ಮೆದುಳಿನ ತರಬೇತಿ. ವಿದ್ಯಾರ್ಥಿ ಜೀವನದಲ್ಲಿ ಏಕಾಗ್ರತೆ ಮತ್ತು ಸಕ್ರಿಯ ಕಲಿಕೆ ಇಲ್ಲದೆ ವಿಜಯ ಸಾಧ್ಯವಿಲ್ಲ. ಮೆದುಳಿನ ತರಬೇತಿ ಎಂದರೆ ಕೇವಲ ಪುಸ್ತಕ ಮುಗಿಸುವುದಲ್ಲ. ಪ್ರತಿದಿನ ಒಗಟು ಬಿಡಿಸುವುದು, ತಾರ್ಕಿಕ ಪ್ರಶ್ನೆಗಳಿಗೆ ಉತ್ತರ ಹುಡುಕುವುದು, ಹೊಸ ವಿಷಯ ಕಂಡಾಗ ಏಕೆ ಮತ್ತು ಹೇಗೆ ಎಂದು ಕೇಳುವುದು. ಈ ಸಣ್ಣ ಸವಾಲುಗಳೇ ಮನಸ್ಸನ್ನು ಚುರುಕುಗೊಳಿಸುವ ವ್ಯಾಯಾಮಗಳು. ಜಿಮ್ ದೇಹಕ್ಕೆ ಶಕ್ತಿ ಕೊಟ್ಟರೆ, ಈ ಅಭ್ಯಾಸಗಳು ಬುದ್ಧಿಗೆ ಬಲ ಕೊಡುತ್ತವೆ.




ವಿಜ್ಞಾನ ಹೇಳುವುದು ಸರಳ. ನಾವು ನಿರಂತರವಾಗಿ ಓದಿ, ಬರೆದು, ಯೋಚಿಸಿದಾಗ ಮೆದುಳಿನಲ್ಲಿ ಹೊಸ ಸಂಪರ್ಕಗಳು ಮೂಡುತ್ತವೆ. ಈ ಸೇತುವೆಗಳು ಗಟ್ಟಿಯಾದಷ್ಟೂ ಸ್ಮರಣಶಕ್ತಿ ಹೆಚ್ಚುತ್ತದೆ. ಗಮನ ಕೇಂದ್ರೀಕರಿಸುವ ಸಾಮರ್ಥ್ಯ ಬೆಳೆಯುತ್ತದೆ. ವಿಶ್ಲೇಷಿಸುವ ಗುಣ ವಿಸ್ತಾರವಾಗುತ್ತದೆ. ಆಗ ಒಂದೇ ಪಾಠವನ್ನು ಕಡಿಮೆ ಸಮಯದಲ್ಲಿ ಆಳವಾಗಿ ಅರ್ಥ ಮಾಡಿಕೊಳ್ಳಬಹುದು. ಕಂಠಪಾಠಕ್ಕಿಂತ ಅರ್ಥಪೂರ್ಣ ಕಲಿಕೆ ಶಾಶ್ವತವಾಗಿ ನಿಲ್ಲುತ್ತದೆ.

ತರಬೇತಿ ಪಡೆದ ಮೆದುಳು ಯಾವ ಸವಾಲಿಗೂ ಹೆದರುವುದಿಲ್ಲ.

ಪರೀಕ್ಷೆ ಬಂದಾಗ, ಸ್ಪರ್ಧೆ ಎದುರಾದಾಗ, ಸಮಸ್ಯೆ ಕಂಡಾಗ ದಾರಿ ಇದೆ ಎಂಬ ಧೈರ್ಯ ಬರುತ್ತದೆ. ಅಂತಹ ವಿದ್ಯಾರ್ಥಿಯಲ್ಲಿ ತಾರ್ಕಿಕ ಚಿಂತನೆ ಮತ್ತು ಹೊಸತನದ ಕಲ್ಪನೆ ಸ್ವಾಭಾವಿಕವಾಗಿ ಚಿಗುರುತ್ತದೆ. ಅವನು ಕೇವಲ ಉತ್ತರವನ್ನು ನೆನಪಿಸುವುದಿಲ್ಲ, ಉತ್ತರವನ್ನು ತಾನೇ ಸೃಷ್ಟಿಸುತ್ತಾನೆ. ಪ್ರಶ್ನಿಸುವ ಗುಣವೇ ಅವನ ದೊಡ್ಡ ಆಸ್ತಿ.


ಆದ್ದರಿಂದ ಪುಸ್ತಕದ ಜೊತೆಗೆ ಮೆದುಳಿಗೂ ಆಹಾರ ನೀಡಿ. ದಿನಕ್ಕೆ 20 ನಿಮಿಷವಾದರೂ ಯೋಚಿಸಿ, ಬರೆಯಿರಿ, ಚರ್ಚಿಸಿ, ಪ್ರಶ್ನಿಸಿ. ಓದು, ಚಿಂತನೆ, ಪ್ರಶ್ನೆ ಈ ಮೂರೇ ನಿಮ್ಮ ಯಶಸ್ಸಿನ ಅಡಿಪಾಯ. ಮೆದುಳಿಗೆ ಇಂದೇ ವರ್ಕೌಟ್ ಆರಂಭಿಸಿ, ನಾಳಿನ ಸಾಧನೆಗೆ ಅಡಿಪಾಯ ಹಾಕಿ.

# ರೈಲ್ವೆಹಳಿಯಿಂದ ಡಿವಿಸ್ಪಿ ಹುದ್ದೆಗೆ!



ಡಾ.ಸುಧಾಕರ.ಜಿ.ಲಕ್ಕವಳ್ಳಿ

ಟ್ರೈನ್ ಹಾರ್ನ್ ಕಿವಿಗಡಚಿಕ್ಕುವ ಸದ್ದು. ಕೆಂಪು ಬಾವುಟ ಹಿಡಿದು ನಿಂತ ಗೇಟ್‌ಮನ್. ಮಳೆ,ಚಳಿ, ನಡುರಾತ್ರಿ ಕರ್ತವ್ಯ 12 ಗಂಟೆ ಬಿಡದು. ಈ ದೃಶ್ಯದ ನಡುವೆ ಯಾರೂ ಊಹಿಸದ ಕಥೆ ಹುಟ್ಟುತ್ತಿತ್ತು.ಬಿಹಾರದ ರಾಜು ಕುಶ್ವಾಹನ ಕಥೆ.



ಹಗಲು ಹಳಿ ಕಾಯುವವನು, ಇರುಳು ತನ್ನ ಹಣೆಬರಹ ಬರೆಯಲು ಕುಳಿತುಕೊಳ್ಳುತ್ತಿದ್ದ.

ಗೇಟ್‌ಮನ್ ಕೋಣೆಯ ಪುಟ್ಟ ಮೇಜು, ಮಂಕು ಬಲ್ಬ್,ಹಳತಾದ ಪುಸ್ತಕಗಳ ರಾಶಿ.ಕೋಚಿಂಗ್ ಫೀಸ್ ಕಟ್ಟಲು ಕಾಸಿಲ್ಲ,ಕೇಳಿದರೆ ಉತ್ತರ ಹೇಳಲು ಗುರುವಿಲ್ಲ. ಇದ್ದದ್ದು ಒಂದೇ ನಾನು ಡಿಎಸ್‌ಪಿ ಆಗಲೇಬೇಕು ಎಂಬ ಹುಚ್ಚು ಹಠ. ಗೆಳೆಯರು ನಿದ್ದೆಗೆ ಜಾರಿದರೆ, ರಾಜುನ ನಿದ್ದೆಗೆ ಮಾತ್ರ ರಜೆ ಇರಲಿಲ್ಲ. ಸೊಳ್ಳೆ ಕಡಿದರೂ ಪುಟ ತಿರುಗುತ್ತಿತ್ತು, ದಣಿವು ಕಣ್ಣುಮುಚ್ಚಿಸಿದರೂ ಕನಸು ಎಚ್ಚರವಾಗಿತ್ತು.

ಸ್ಫೂರ್ತಿ ಸುಧೆ - 76

ವರ್ಷಗಳ ಏಕಾಂಗಿ ಸಮರ. ಕೊನೆಗೂ ಬಿಪಿಎಸ್‌ಸಿ ಫಲಿತಾಂಶ ಬಂತು ರ್‍ಯಾಂಕ್ 72! ನಿನ್ನೆ ಗೇಟ್ ತೆರೆದು ಸಲಾಂ ಹೊಡೆದ ಕೈಗಳು, ಇಂದು ಖಾಕಿ ತೊಟ್ಟು ಖದರ್ ತೋರಿಸಲು ಸಜ್ಜು.ರೈಲು ಹಳಿ ದಾಟಿಸುವವನು ಈಗ ಕಾನೂನಿನ ಹಳಿ ತಪ್ಪಿದವರನ್ನು ದಾರಿಗೆ ತರಲಿದ್ದಾನೆ.

ರಾಜು ನಗುತ್ತಾ ಹೇಳುತ್ತಾರೆ ಬಡತನ ನನ್ನ ವಿಳಾಸವಾಗಿತ್ತು,ಗುರಿಯಲ್ಲ. ನಿಜ,ಸಬೂಬು ಹೇಳಿ ಕೂರುವವರಿಗೆ ಈ ಕಥೆ ಕಪಾಳಮೋಕ್ಷ.ಹಠಕ್ಕೆ ಹಳಿಯೂ ದಾರಿ ಬಿಡುತ್ತದೆ ಎಂಬುದಕ್ಕೆ ರಾಜು ಕುಶ್ವಾಹ್ ರೋಮಾಂಚಕ ಸಾಕ್ಷಿ.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,